ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ–13 | ISSUE - 142 ಸಂಚಿಕೆ– 142 | PAGE-8 ಪುಟ–8 | ಮಂಗಳವಾರ 15.07.2025 | RS.2/- ಬೆಲೆ 2/–

## ದ್ವೇಷ ಭಾಷಣಕ್ಕೆ ಕಡಿವಾಣ ಹಾಕಲು ಕೇಂದ್ರ, ರಾಜ್ಯಗಳಿಗೆ ಸುಪ್ರೀಂ ಸೂಚನೆ



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಜು.14: ಅಭಿವ್ಯಕ್ತಿ ಸ್ವಾತಂತ್ರ್ಯಕ್ಕೆ ಧಕ್ಕೆಯಾಗದಂತೆ ದ್ವೇಷ ಭಾಷಣ ನಿಯಂತ್ರಿಸುವಂತೆ ಕೇಂದ್ರಸರ್ಕಾರ ಹಾಗೂ ರಾಜ್ಯಗಳಿಗೆ ಸುಪ್ರೀಂ ಕೋರ್ಟ್ ಸೋಮವಾರ ಸೂಚಿಸಿದೆ.

ಇನ್‌ಸ್ಟಾಗ್ರಾಮ್ ಇನ್‌ಫ್ಲುಯೆನ್ಸರ್ ಶರ್ಮಿಷ್ಠ ಪನೋಲಿ ವಿರುದ್ಧದ ಪ್ರಕರಣದ ದೂರುದಾರ ವಜಾಹತ್ ಖಾನ್ ಸಲ್ಲಿಸಿದ ಅರ್ಜಿ ವಿಚಾರಣೆ ಸಂದರ್ಭದಲ್ಲಿ ಸುಪ್ರೀಂ ಕೋರ್ಟ್ ಈ ರೀತಿಯ ಸೂಚನೆ ನೀಡಿದೆ. ದ್ವೇಷದ ಭಾಷಣವನ್ನು ಅಭಿವ್ಯಕ್ತಿ ಸ್ವಾತಂತ್ರ್ಯ' ಎಂದು ಹೇಳುವುದಕ್ಕೆ ವಿಷಾದ ವ್ಯಕ್ತಪಡಿಸಿದ ನ್ಯಾ. ಬಿ.ವಿ ನಾಗರತ್ನ ಮತ್ತು ನ್ಯಾ. ಕೆವಿ ವಿಶ್ವನಾಥನ್ ಅವರನ್ನೊಳಗೊಂಡ ನ್ಯಾಯಪೀಠ ಅದನ್ನ ನಿಯಂತ್ರಿಸಲು ರಾಜ್ಯವು ಮುಂದಾಗುವುದನ್ನು ಯಾರೂ ಬಯಸುವುದಿಲ್ಲ. ಹೀಗಾಗಿ ವಾಕ್ ಸ್ವಾತಂತ್ರ್ಯದ ಮೌಲ್ಯದ ಬಗ್ಗೆ ಜನರಿಗೆ ಅರಿವು ಮೂಡಿಸಬೇಕು ಸಲಹೆ ನೀಡಿತು.ದ್ವೇಷ ಮೂಡಿಸುವ ಭಾಷಣಗಳು ಅಸಮರ್ಪಕ ಅಂತ ಜನರಿಗೆ ಯಾಕೆ ಕಾಣಿಸುತ್ತಿಲ್ಲ? ಎಂದು ಪ್ರಶ್ನಿಸಿದ ನ್ಯಾಯಪೀಠ, ಇಂತಹ ಕೆಲವು ಭಾಷಣಗಳಿಗೆ ನಿಯಂತ್ರಣ ಇರಬೇಕು. ಜನರು ಅಂತಹ ದ್ವೇಷದ ಭಾಷಣ ಹಂಚಿಕೊಳ್ಳುವುದು ಮತ್ತು ಲೈಕ್ ಮಾಡುವುದನ್ನ ನಿರ್ಬಂಧಿಸಬೇಕು ಎಂದು ಹೇಳಿತು. ದ್ವೇಷ ಮತ್ತು ಕೋಮು ಸೌಹಾರ್ದತೆಯನ್ನ ಪ್ರಚೋದಿಸುವ ವಿಷಯವನ್ನ ಸೋಷಿಯಲ್ ಮೀಡಿಯಾದಲ್ಲಿ ಪೋಸ್ಟ್ ಮಾಡಿದ ಆರೋಪದ ಮೇಲೆ ವಜಾಹತ್ ಖಾನ್ ವಿರುದ್ಧ ವಿವಿಧ ರಾಜ್ಯಗಳಲ್ಲಿ ಪ್ರಕರಣ ದಾಖಲಿಸಲಾಗಿದೆ. ಅವರು ಈಗಾಗಲೇ ಒಂದು ಎಫ್‌ಐಆರ್‌ನಲ್ಲಿ ಪೊಲೀಸ್ ಕಸ್ಟಡಿಯಲ್ಲಿದ್ದಾರೆ ಮತ್ತು ಇನ್ನೊಂದರಲ್ಲಿ ನ್ಯಾಯಾಂಗ ಬಂಧನದಲ್ಲಿದ್ದಾರೆ, ಇಬ್ಬರ ವಿರುದ್ಧವೂ ಪಶ್ಚಿಮ ಬಂಗಾಳದಲ್ಲಿ ಕೇಸ್ ದಾಖಲಾಗಿದೆ. ಅಭಿವ್ಯಕ್ತಿ ಸ್ವಾತಂತ್ರ್ಯಕ್ಕೆ ಧಕ್ಕೆಯಾಗದಂತೆ ದ್ವೇಷ ಭಾಷಣವನ್ನ ನಿಯಂತ್ರಿಸುವ ಮಾರ್ಗಗಳನ್ನ ಸೂಚಿಸುವಂತೆ ಕೇಂದ್ರ, ರಾಜ್ಯ ಸರ್ಕಾರಗಳು ಮತ್ತು ವಜಾಹತ್ ಖಾನ್ ಪರ ಹಾಜರಿದ ವಕೀಲರಿಗೆ ಸುಪ್ರೀಂ ಸೂಚಿಸಿತು. ಪಶ್ಚಿಮ ಬಂಗಾಳದ ಹೊರಗೆ ಅವರ ವಜಾಹತ್ ಖಾನ್ ವಿರುದ್ಧ ದಾಖಲಾಗಿರುವ ಎಲ್ಲಾ ಎಫ್‌ಐಆರ್‌ಗಳಲ್ಲಿ ಅವರನ್ನು ಬಂಧಿಸದಂತೆ ಸುಪ್ರೀಂ ಕೋರ್ಟ್ ತಡೆ ನೀಡಿದ ಮೂರು ವಾರಗಳ ನಂತರ ಈ ಬಗ್ಗೆ ವಿಚಾರಣೆ ನಡೆಸಿತು. ಅವರಿಗೆ ಈ ಪರಿಹಾರವನ್ನು ಮುಂದುವರೆಸಿದ ನ್ಯಾಯಾಲಯ, ಇನ್ನಷ್ಟು ಎಫ್‌ಐಆರ್‌ಗಳನ್ನು ಹಾಕಿ ವ್ಯಕ್ತಿಯನ್ನು ಜೈಲಿಗೆ ಹಾಕುವುದರಲ್ಲಿ ಏನು ಪ್ರಯೋಜನ? ಎಂದು ಪ್ರಶ್ನಿಸಿತು. ಇದಕ್ಕೆ ಉತ್ತರಿಸಿದ ಖಾನ್ ಅವರ ವಕೀಲರು, ತಮ್ಮ ಕಕ್ಷಿದಾರರು ಹಿಂದಿನ ಟ್ವೀಟ್‌ಗಳಿಗೆ ಕ್ಷಮೆಯಾಚಿಸಿದ್ದಾರೆ ಎಂದು ಹೇಳಿದರು.

## ಪಂಚಭಾಷಾ ತಾರೆ ಡಾ. ಸರೋಜಾದೇವಿ ಇನ್ನಿಲ್ಲ



ಮಲ್ಲಮ್ಮನುಡಿ ವಾರ್ತೆ ಬೆಂಗಳೂರು, ಜು. 14– ಕನ್ನಡ ಸಿನಿಮಾದ ಮೊದಲ ಸೂಪರ್ ಸ್ಟಾರ್ ನಟಿ ಎಂದೇ ಹೆಸರಾಗಿದ್ದ ಪಂಚಭಾಷಾ ತಾರೆ ಬಿ. ಸರೋಜಾದೇವಿ ಇಂದು ನಿಧನರಾಗಿದ್ದಾರೆ. ಜು.15 ರಂದು ಚನ್ನಪಟ್ಟಣದ ದಶಾವರ ಗ್ರಾಮದಲ್ಲಿ ಸರೋಜಾದೇವಿಯವರ ಅಂತ್ಯಕ್ರಿಯೆ ನಡೆಯಲಿದೆ.

ವಯೋ ಸಹಜ ಕಾಯಿಲೆಯಿಂದ ಬಳಲುತ್ತಿದ್ದ ಅವರು ಇಂದು ಬೆಳಿಗ್ಗೆ ಬೆಂಗಳೂರಿನ ಮಲ್ಲೇಶ್ವರದಲ್ಲಿರುವ ತಮ್ಮ ಸ್ವಗೃಹದಲ್ಲಿ ಕೊನೆಯುಸಿರೆಳೆದಿದ್ದಾರೆ. ನಟಿ ಬಿ. ಸರೋಜಾದೇವಿ ಅವರಿಗೆ 87 ವರ್ಷ ವಯಸ್ಸಾಗಿತ್ತು. ಅವರಿಗೆ ಇಬ್ಬರು ಮಕ್ಕಳಿದ್ದಾರೆ.

ಕಳೆದ ಕೆಲ ದಿನಗಳಿಂದ ಸರೋಜಾದೇವಿ ಅವರು ವಯೋಸಹಜ ಕಾಯಿಲೆಗಳಿಂದ ಬಳಲುತ್ತಿದ್ದರು.

ಇಂದು ನಿಧನರಾಗಿರುವ ನಟಿ ಬಿ. ಸರೋಜಾದೇವಿಯವರ ಪಾರ್ಥೀವ ಶರೀರವನ್ನು ಮಲ್ಲೇಶ್ವರದ ನಿವಾಸದಲ್ಲಿ ಅಂತಿಮ ದರ್ಶನಕ್ಕೆ ಇಡಲಾಗಿದೆ.

ನಟಿ ಸರೋಜಾದೇವಿಯವರ ಪತಿ 1987 ರಲ್ಲಿ ನಿಧನರಾಗಿದ್ದು, ಅವರ ಸಮಾಧಿ ಪಕ್ಕದಲ್ಲೇ ಬಿ. ಸರೋಜಾದೇವಿಯವರ ಅಂತ್ಯಕ್ರಿಯೆ ನಡೆಸಲಾಗುವುದು ಎಂದು ಅವರ ಕುಟುಂಬದವರು ತಿಳಿಸಿದ್ದಾರೆ.

ಬೆಂಗಳೂರು ದಕ್ಷಿಣ ಜಿಲ್ಲೆಗೆ ಸೇರಿದ ಚನ್ನಪಟ್ಟಣ ತಾಲ್ಲೂಕಿನ ದಶಾವರ ಗ್ರಾಮದವರಾದ ಬಿ. ಸರೋಜಾದೇವಿಯವರು 1938 ರ ಜನವರಿ 7 ರಂದು ಭೈರಪ್ಪ ಮತ್ತು ರುದ್ರಮ್ಮ ದಂಪತಿಗಳ ಪುತ್ರಿಯಾಗಿ ಜನಿಸಿದ್ದರು. ಇವರ ತಂದೆ ಬೈರಪ್ಪ ಅವರು ಪೊಲೀಸ್ ಅಧಿಕಾರಿಯಾಗಿದ್ದರು.

ನಟಿ ಸರೋಜಾದೇವಿಯವರು ತಮ್ಮ 17ನೇ ವಯಸ್ಸಿನಲ್ಲೇ ಚಿತ್ರರಂಗ ಪ್ರವೇಶಿಸಿ ಸುಮಾರು 6 ದಶಕಗಳ ಕಾಲ ಭಾರತೀಯ ಚಿತ್ರರಂಗದಲ್ಲಿ ಮಿನುಗಿದ್ದರು.

ನಟಿ ಸರೋಜಾದೇವಿಯವರು ಕನ್ನಡ, ತೆಲುಗು, ತಮಿಳು, ಹಿಂದಿ, ಮಲೆಯಾಳಂ ಸೇರಿದಂತೆ 200ಕ್ಕೂ ಹೆಚ್ಚು ಚಿತ್ರಗಳಲ್ಲಿ ಅಭಿನಯಿಸಿದ್ದಾರೆ.

ಭಾರತೀಯ ಚಿತ್ರರಂಗದ ದಿಗ್ಗಜ ಕಲಾವಿದರುಗಳಾದ ಕನ್ನಡದ ವರನಟ ಡಾ.ರಾಜ್‌ಕುಮಾರ್, ಕಲ್ಯಾಣ್‌ಕುಮಾರ್, ಉದಯ್‌ಕುಮಾರ್ ಅವರ ಜತೆ ನಟಿಸಿದ್ದ ಸರೋಜಾದೇವಿಯವರು, ತೆಲುಗಿನಲ್ಲಿ ಖ್ಯಾತ ನಟರಾದ ಎ. ನಾಗೇಶ್ವರರಾವ್, ಎನ್.ಟಿ. ರಾಮರಾವ್ ಸೇರಿದಂತೆ ಹಲವು ಖ್ಯಾತನಟರೊಂದಿಗೆ ಅಭಿನಯಿಸಿದ್ದರು.

ತಮಿಳಿನಲ್ಲಿ ಶಿವಾಜಿ ಗಣೇಶನ್, ಜಮಿನಿ ಗಣೇಶನ್, ಎಂ.ಜಿ. ರಾಮಚಂದ್ರನ್ ಜತೆಯೂ ನಟಿಸಿದ್ದರು. ಹಿಂದಿಯಲ್ಲಿ ದಿಲೀಪ್‌ಕುಮಾರ್, ರಾಜೇಂದ್ರಕುಮಾರ್, ಶಮೀಕಪೂರ್, ಸುನೀಲ್ ದತ್ ಜತೆಗೆ ನಟಿಸಿ ಎಲ್ಲರ ಪ್ರೀತಿ, ಮೆಚ್ಚುಗೆಯನ್ನು ಗಳಿಸಿದ್ದರು.

2008 ರಲ್ಲಿ ಭಾರತದ 60ನೇ ಸ್ವಾತಂತ್ರ್ಯ ದಿನಾಚರಣೆ ಸಂದರ್ಭದಲ್ಲಿ ಜೀವಮಾನ ಸಾಧನೆಗಾಗಿ

(2ನೇ ಪುಟ ನೋಡಿ)

## ಸಮೋಸ, ಜಿಲೇಬಿ ತಿನ್ನುವವರಿಗೂ ಸಿಗರೇಟ್ ಪ್ಯಾಕೆಟ್‌ನಲ್ಲಿರುವಂತೆ ವಾರ್ನಿಂಗ್



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಜು.14: ಆರೋಗ್ಯಕ್ಕೆ ಹಾನಿಯುಂಟು ಮಾಡುವ ಆಹಾರದ ಬಗ್ಗೆ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಕೇಂದ್ರ ಆರೋಗ್ಯ ಸಚಿವಾಲಯವು ಇನ್ಮುಂದೆ ಸಮೋಸ , ಜಿಲೇಬಿ ಸೇರಿದಂತೆ ಇನ್ನಿತರೆ ತಿನಿಸುಗಳಿಗೂ ಸಿಗರೇಟ್ ಪ್ಯಾಕೆಟ್‌ನಲ್ಲಿರುವಂತೆ ಎಚ್ಚರಿಕೆ ನೀಡಲು ಮುಂದಾಗಿದೆ.

ಕೇಂದ್ರ ಆರೋಗ್ಯ ಸಚಿವಾಲಯದ ಆದೇಶದ ಹಿನ್ನೆಲೆ ನಾಗ್ಪುರದ ಎಐಐಎಂಎಸ್ ಸಂಸ್ಥೆಯ ತಜ್ಞರು ಭಾರತೀಯ ತಿಂಡಿಗಳ

(2ನೇ ಪುಟ ನೋಡಿ)

## ಶಕ್ತಿ ಯೋಜನೆಯಿಂದ ಸಾರಿಗೆ ಸಂಸ್ಥೆಗೆ ನಷ್ಟವಿಲ್ಲ



ಮಲ್ಲಮ್ಮನುಡಿ ವಾರ್ತೆ ಬೆಂಗಳೂರು, ಜು. 14– ಶಕ್ತಿ ಯೋಜನೆಯಿಂದ ರಾಜ್ಯ ಸಾರಿಗೆ ಸಂಸ್ಥೆಗೆ ಯಾವುದೇ ನಷ್ಟವಾಗಿಲ್ಲ. ಈ ಯೋಜನೆಯಿಂದ ಲಾಭವಾಗಿದೆ ಎಂದು ಸಾರಿಗೆ ಹಾಗೂ ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಹೇಳಿದರು.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಕ್ತಿ ಯೋಜನೆಯನ್ನು ಯಾವುದೇ ಕಾರಣಕ್ಕೂ ಸ್ಥಗಿತಗೊಳಿಸಲ್ಲ. ಬಿಜೆಪಿಯವರಿಗೆ ಹೊಟ್ಟೆಉರಿ ತಡೆಯಲಾಗುತ್ತಿಲ್ಲ. ಹಾಗಾಗಿ ಸುಳ್ಳು ಪ್ರಚಾರ ಮಾಡುತ್ತಿದ್ದಾರೆ. ಶಕ್ತಿ ಯೋಜನೆಯಿಂದ ಸಾರಿಗೆ ಸಂಸ್ಥೆಗೆ ನಷ್ಟವಾಗುತ್ತಿಲ್ಲ. ಲಾಭವಾಗುತ್ತಿದೆ ಎಂದರು.

ಆರಂಭದಲ್ಲಿ ಒಂದಿಷ್ಟು ಸಮಸ್ಯೆಗಳಿದ್ದವು. ಅವುಗಳನ್ನು ಸರಿಪಡಿಸಿಕೊಂಡು ಯೋಜನೆ ಜಾರಿ ಮಾಡಿದ್ದೇವೆ. 2 ವರ್ಷ 1 ತಿಂಗಳಲ್ಲಿ 500 ಕೋಟಿ ಟ್ರಿಪ್‌ಗಳಾಗಿವೆ ಎಂದರು.

ಸಾರಿಗೆ ವ್ಯವಸ್ಥೆಗಳು ಇರುವುದು ಲಾಭಕ್ಕಲ್ಲ. ಸಾರ್ವಜನಿಕರ ಸೇವೆಗಾಗಿ ಎಂದು ಹೇಳಿದ ಅವರು, ಶಕ್ತಿ ಯೋಜನೆ ಸಂಪೂರ್ಣ ಯಶಸ್ವಿಯಾಗಿದೆ ಎಂದರು.

(2ನೇ ಪುಟ ನೋಡಿ)

## ಮಾದಕ ದ್ರವ್ಯ ಸಾಗಣೆ ಆರೋಪ: ಲಿಂಗರಾಜ್ ಕಣ್ಣಿ ಬಂಧನ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಜು.14: ಮಾದಕ ದ್ರವ್ಯ ಸಾಗಣೆ ಮಾಡುತ್ತಿದ್ದ ಆರೋಪದ ಮೇರೆಗೆ ಕಲಬುರಗಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಲಿಂಗರಾಜ ಕಣ್ಣಿ ಅವರನ್ನು ಮಹಾರಾಷ್ಟ್ರದ ಕಲ್ಯಾಣ ಪೊಲೀಸರು ಬಂಧಿಸಿದ್ದಾರೆ.

ಥಾಣೆ ನಗರದಲ್ಲಿ ಮಾದಕ ದ್ರವ್ಯ ಎಂದು ಪರಿಗಣಿಸಲಾಗಿರುವ ನಿಷೇಧಿತ

120 ಕೊಡೆನ್ಯೆನ್ ಸಿರಪ್ ಮಾರಾಟ ಮಾಡುತ್ತಿದ್ದರು ಎಂದು ಹೇಳಲಾಗಿದ್ದು, ಇದೇ ವೇಳೆ ಪೊಲೀಸರು ಕಣ್ಣಿ ಅವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ.

ನಿಷೇಧಿತ ಮಾದಕ ದ್ರವ್ಯ ಹೊಂದಿರುವ ಆರೋಪದ ಹಿನ್ನೆಲೆಯಲ್ಲಿ ಎನ್‌ಡಿಪಿಎಸ್ ಕಾಯಿದೆ ಅಡಿ ಕಲ್ಯಾಣ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದು, ವಿಚಾರಣೆ ಮುಂದುವರೆದಿದೆ.

ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐಟಿ–ಬಿಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ಕಲಬುರಗಿ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್ ಅವರ ಪರಮಾಪ್ತರೂ ಆಗಿರುವ ಕಣ್ಣಿ ಬಂಧನದಿಂದಾಗಿ ಇದೀಗ ಜಿಲ್ಲಾ ಕಾಂಗ್ರೆಸ್ ವಲಯದಲ್ಲಿ ಸಂಚಲನ ಸೃಷ್ಟಿಸಿದೆ.

## ಶುಶ್ರೂಷಕರ ನೋಂದಣಿಗಾಗಿ ವಿಶೇಷ ಡಿಜಿ ಲಾಕರ್ ತಂತ್ರಜ್ಞಾನ ಲೋಕಾರ್ಪಣೆ: ಡಾ. ಶರಣ್ ಪ್ರಕಾಶ್ ಪಾಟೀಲ್



ಮಲ್ಲಮ್ಮನುಡಿ ವಾರ್ತೆ ಕಲಬುರಗಿ, ಜು, 14: ದೇಶದಲ್ಲೇ ಮೊದಲ ಬಾರಿಗೆ ಶುಶ್ರೂಷಕರ ನೊಂದಣಿಗಾಗಿ, ಕರ್ನಾಟಕ ರಾಜ್ಯ ಶುಶ್ರೂಷ ಪರಿಷತ್ ಅಭಿವೃದ್ಧಿಪಡಿಸಿರುವ ವಿಶೇಷ ಡಿಜಿ ಲಾಕರ್ ತಂತ್ರಜ್ಞಾನ ಜಾರಿಗೆ ಬಂದಿದೆ ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಜೀವನೋಪಾಯ ಮತ್ತು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಶರಣಪ್ರಕಾಶ್ ಆರ್. ಪಾಟೀಲ್ ತಿಳಿಸಿದರು.

ಈ ಕುರಿತು ಮಾಧ್ಯಮ ಪ್ರಕಟಣೆ ಹೊರಡಿಸಿರುವ ಸಚಿವರು, ಆಧಾರ್, ಡಿಜಿ ಲಾಕರ್ ಇ–ಕೆವೈಸಿ ಮೂಲಕ ನೋಂದಣಿಪ್ರಮಾಣ ಪತ್ರಗಳನ್ನು ವಿತರಿಸುವ ತಂತ್ರಜ್ಞಾನದ ಲೋಕಾರ್ಪಣೆ ಜುಲೈ 15 ಮಂಗಳವಾರ ನಡೆಯುಲಿದೆ ಎಂದರು.

ಯುಐಡಿಎಐ (UIDAI), ಸಿ–ಇಜಿ (C-eG), ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾನಿಲಯ ಹಾಗೂ ಕರ್ನಾಟಕ ರಾಜ್ಯ ಶುಶ್ರೂಷ ಪರೀಕ್ಷಾ ಮಂಡಳಿ ಸಹಯೋಗದೊಂದಿಗೆ ಈ ತಂತ್ರಜ್ಞಾನವನ್ನು ಅಭಿವೃದ್ಧಿಪಡಿಸಲಾಗಿದೆ ಎಂದು ಸಚಿವರು ತಿಳಿಸಿದರು.

ಈ ತಂತ್ರಜ್ಞಾನದ ನೆರವಿನಿಂದ ಆಧಾರ್ ಇ–ಕೆವೈಸಿ (E-Kyc)ಯಿಂದ ಶುಶ್ರೂಷಕರ ವೈಯಕ್ತಿಕ ಡಾಟಾ, ವಿಳಾಸ, ಫೋಟೋ, ಹಾಗೂ ಇತರೆ ಮಾಹಿತಿಗಳನ್ನು ಆಧಾರ್ ಸರ್ವರ್ ನಿಂದ ನೇರವಾಗಿ ಕರ್ನಾಟಕ ಶುಶ್ರೂಷ ಪರಿಷತ್ ಪಡೆದುಕೊಳ್ಳಬಹುದಾಗಿದೆ. ಈ ಹಿಂದೆ ರಾಜ್ಯದ ಬೇರೆ ಬೇರೆ ಜಿಲ್ಲೆಗಳಿಂದ ನೋಂದಣಿಗಾಗಿ ಕರ್ನಾಟಕ ರಾಜ್ಯ ಶುಶ್ರೂಷ ಪರಿಷತ್ತಿನ ಬೆಂಗಳೂರಿನ ಕೇಂದ್ರ ಕಚೇರಿಗೆ ಬರಬೇಕಾಗಿತ್ತು ಎಂದರು.

ತೊಂದರೆ ತಪ್ಪಿಸಲು ನೂತನ ತಂತ್ರಜ್ಞಾನ

ರಾಜ್ಯ ಮತ್ತು ಹೊರ ರಾಜ್ಯದ ಶುಶ್ರೂಷ ಸಮೂಹ ಕೇವಲ ನೋಂದಣಿಯ ಉದ್ದೇಶದಿಂದ ಊಟ, ವಸತಿಗಾಗಿ ಸಾವಿರಾರು

(2ನೇ ಪುಟ ನೋಡಿ)

## ಸ್ತ್ರೀಯರ ಸಬಲೀಕರಣಕ್ಕೆ ಶಕ್ತಿ ಯೋಜನೆ ಸಹಾಯಕ: ಅಮೃತರಾವ ಚಿಮಕೋಡೆ



ಮಲ್ಲಮ್ಮ ನುಡಿ ವಾರ್ತೆ ಬೀದರ. ಜು.14: ಸ್ತ್ರೀಯರ ಸಬಲೀಕರಣಕ್ಕೆ ಶಕ್ತಿ ಯೋಜನೆ ಸಹಾಯಕವಾಗಿದೆ ಎಂದು ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಅಮೃತರಾವ ಚಿಮಕೋಡೆ ಅವರು ತಿಳಿಸಿದರು.

ಅವರು ಸೋಮವಾರ ಬೀದರ ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ಹಮ್ಮಿಕೊಂಡಿದ್ದ ಶಕ್ತಿ ಯೋಜನೆಯಲ್ಲಿ ರಾಜ್ಯದಲ್ಲಿ 500 ಕೋಟಿ ಮಹಿಳೆಯರು ಉಚಿತ ಬಸ್ ಪ್ರಯಾಣ ಮಾಡಿರುವ ಸಲುವಾಗಿ ಪೂಜೆ ಸಲ್ಲಿಸಿ, ಸಿಹಿ ಹಂಚಿ ಮಾತನಾಡಿದರು.

ಮಹಿಳೆಯರು ಉಚಿತವಾಗಿ ಪ್ರವಾಸಿ ತಾಣಗಳಿಗೆ, ಧಾರ್ಮಿಕ ಸ್ಥಳಗಳಿಗೆ ಮತ್ತು ವ್ಯಾಪಾರ ವಹಿವಾಟುಗಳಿಗಾಗಿ ಪ್ರಯಾಣ ಮಾಡುವುದಾಗಿ ಹಾಗೂ ಪ್ರಯಾಣದಿಂದ ಉಳಿದ ಹಣವನ್ನು ದೈನಂದಿನ ಜೀವನಕ್ಕೆ ಬಳಸಬಹುದಾಗಿದೆ ಮತ್ತು ಪುರುಷರಿಗೆ ಎಲ್ಲದಕ್ಕೂ

(2ನೇ ಪುಟ ನೋಡಿ)



# ಒಂದನೇ ಪುಟದಿಂದ

## ಲೋಕಾರ್ಪಣೆ: ಡಾ. ಶರಣ್ ಪ್ರಕಾಶ್ ಪಾಟೀಲ್

ರೂಪಾಯಿ ವ್ಯಯಿಸಿ ಪರದಾಡುವ ಪರಿಸ್ಥಿತಿ ಇತ್ತು. ಜೊತೆಗೆ ಬೆಂಗಳೂರಿನ ಕೇಂದ್ರ ಕಚೇರಿಯಲ್ಲಿ ನೋಂದಣಿಗಾಗಿ ಸರತಿಯಲ್ಲಿ ನಿಂತು ಕಾಯಬೇಕಾಗಿತ್ತು. ಮಹಿಳೆಯರು, ಗರ್ಭಿಣಿಯರು, ಹಸುಗೂಸುಗಳ ತಾಯಂದಿರು ಸಾಕಷ್ಟು ತೊಂದರೆ ಅನುಭವಿಸಬೇಕಾಗಿತ್ತು. ನೂತನ ತಂತ್ರಜ್ಞಾನದ ಅಳವಡಿಕೆಯಿಂದ ಈ ಎಲ್ಲಾ ಸಮಸ್ಯೆಗಳಿಗೆ ಮುಕ್ತಿ ದೊರಕಿದಂತಾಗಿದೆ ಎಂದು ಡಾ. ಪಾಟೀಲ್ ತಿಳಿಸಿದರು.

ಕರ್ನಾಟಕ ರಾಜ್ಯ ಶುಶ್ರೂಷ ಪರಿಷತ್ತಿಗೆ ನೋಂದಣಿ ಉದ್ದೇಶದಿಂದ ನಾಡಿನ ನಾನಾ ಮೂಲೆಗಳಿಂದ ಮತ್ತು ವಿವಿಧ ಹೊರರಾಜ್ಯಗಳಿಂದ ಬರುತ್ತಿದ್ದ ಶುಶ್ರೂಷಕರ ತೊಂದರೆಗಳನ್ನು ತಪ್ಪಿಸಲು ದೇಶದಲ್ಲೇ ಪ್ರಥಮ ಬಾರಿಗೆ ಆಧಾರ್ ಮತ್ತು ಡಿಜಿ ಲಾಕರ್ ಇ-ಕೆವೈಸಿ ಮೂಲಕ ಅವಕಾಶ ಮಾಡಿಕೊಡಲಾಗುತ್ತಿದೆ. ವ್ಯಾಪಕವಾಗಿ ಅಭಿವೃದ್ಧಿಗೊಳ್ಳುತ್ತಿರುವ ಡಿಜಿಟಲ್ ತಂತ್ರಜ್ಞಾನ ಹಾಗೂ ಕೃತಕ ಬುದ್ಧಿಮತ್ತೆಯ ನೆರವಿನಿಂದ ನಮ್ಮ ಸರ್ಕಾರ ಅಳವಡಿಸಿಕೊಂಡಿರುವ ಈ ನೂತನ ತಂತ್ರಜ್ಞಾನ ಲಕ್ಷಾಂತರ ಶುಶ್ರೂಷಕರ ತೊಂದರೆ ತಾಪತ್ರಯಗಳಿಗೆ ಅಂತ್ಯ ಹಾಡಲಿದೆ ಎಂದು ಸಚಿವರು ಹೇಳಿದರು.

ನಕಲಿ ಹಾವಳಿ ತಡೆಗಟ್ಟಲು ಸಹಕಾರಿಹೊಸ ಡಿಜಿ ಲಾಕರ್ (Digi Locker-Requester)ತಂತ್ರಜ್ಞಾನದಿಂದ ಶುಶ್ರೂಷಕರ ಆಧಾರ್ ಕಾರ್ಡ್, ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಅಂಕಪಟ್ಟಿ ಮತ್ತಿತರ ಪ್ರಮಾಣಪತ್ರಗಳನ್ನು ಸಂಬಂಧಪಟ್ಟ ಆಯಾ ಪರೀಕ್ಷಾ ಬೋರ್ಡ್‌ಗಳಿಂದ ನೇರವಾಗಿ ಪಡೆದುಕೊಳ್ಳಬಹುದು. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾನಿಲಯ ಹಾಗೂ ಕರ್ನಾಟಕ ರಾಜ್ಯ ಶುಶ್ರೂಷ ಪರೀಕ್ಷಾ ಮಂಡಳಿಗಳು ಅಳವಡಿಸಿಕೊಂಡಿರುವ ಈ ತಂತ್ರಜ್ಞಾನದಿಂದ ಪರೀಕ್ಷಾ ಫಲಿತಾಂಶವನ್ನು ನೇರವಾಗಿ ಕರ್ನಾಟಕ ರಾಜ್ಯ ಶುಶ್ರೂಷ ಪರಿಷತ್ ಪಡೆದುಕೊಳ್ಳಲಿದೆ. ನಂತರ ಡಿಜಿ ಲಾಕರ್ ತಂತ್ರಜ್ಞಾನ (Digi Locker-Issuer)ದಿಂದ ಶುಶ್ರೂಷಕರಿಗೆ ನೇರವಾಗಿ ನೋಂದಣಿ ಪತ್ರವನ್ನು ವಿತರಿಸಬಹುದಾಗಿದೆ ಎಂದು ಶುಶ್ರೂಷ ಪರಿಷತ್ತಿನ ಕುಲಸಚಿವರಾದ

ಡಾ.ಕೆ.ಮಲ್ಲು ತಿಳಿಸಿದರು.ಈ ತಂತ್ರಜ್ಞಾನದ ಮತ್ತೊಂದು ಪ್ರಮುಖವಾದ ಅಂಶ ಎಂದರೆ, ನಕಲಿ ನೋಂದಣಿ ಪ್ರಮಾಣ ಪತ್ರಗಳ ಹಾವಳಿಯನ್ನೂ ತಡೆಗಟ್ಟಬಹುದಾಗಿದೆ ಎಂದು ಡಾ.ಕೆ.ಮಲ್ಲು ಮಾಹಿತಿ ನೀಡಿದರು.

## ಸಹಾಯಕ: ಅಮೃತರಾವ ಚಿಮಕೋಡೆ

ಅವಲಂಬಿತವಾಗಿರುವುದನ್ನು ತಪ್ಪಿಸಬಹುದು ಎಂದರು.ಕರ್ನಾಟಕ ರಾಜ್ಯದಲ್ಲಿ ಜುಲೈ.9 ಕ್ಕೆ ನಾಲ್ಕು ಸಾರಿಗೆ ಸಂಸ್ಥೆ ಸೇರಿ 500 ಕೋಟಿ ಮಹಿಳೆಯರು ಉಚಿತವಾಗಿ ಪ್ರಯಾಣಿಸಿದ್ದಾರೆ ಹಾಗೂ 12,669 ಕೋಟಿ ರೂಪಾಯಿ ಸಂದಾಯವಾಗಿದೆ. ಜುಲೈ.10ಕ್ಕೆ ಕಲ್ಯಾಣ ಕರ್ನಾಟಕ ಮತ್ತು ವಿಜಯಪುರ ಸೇರಿ 72 ಕೋಟಿ ಮಹಿಳೆಯರು ಉಚಿತವಾಗಿ ಪ್ರಯಾಣಿದ್ದು, 2532 ಕೋಟಿ ಸಂದಾಯವಾಗಿದೆ. ಬೀದರ ಜಿಲ್ಲೆಯಲ್ಲಿ 8.65 ಕೋಟಿ ಮಹಿಳೆಯರು ಉಚಿತವಾಗಿ ಪ್ರಯಾಣಸಿದ್ದು 249 ಕೋಟಿ ರೂಪಾಯಿ ಸಂದಾಯವಾಗಿದೆ ಮತ್ತು ಜಿಲ್ಲೆಯಲ್ಲಿ ದಿನಕ್ಕೆ ಸರಾಸರಿ 1.14 ಲಕ್ಷ ಮಹಿಳೆಯರು ಪ್ರಯಾಣಿಸಿದ್ದಾರೆ ಎಂದರು.

ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಮಾತನಾಡಿ, ಶಕ್ತಿ ಯೋಜನೆಯಿಂದ ಮಹಿಳೆಯರು ಹೆಚ್ಚಿನ ಪ್ರಮಾಣದಲ್ಲಿ ಪ್ರಯಾಣ ಮಾಡಲು ಅನುಕೂಲವಾಗಿದೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಗಿರೀಶ್ ಬದೋಲೆ ಮಾತನಾಡಿ, ಶಕ್ತಿ ಯೋಜನೆಯಲ್ಲಿ ಉಚಿತವಾಗಿ ಪ್ರಯಾಣ ಮಾಡಿರುವ ಮಹಿಳೆಯರ ಮುಖದಲ್ಲಿ ಸಂತಸ ಕಾಣಬಹುದಾಗಿದೆ ಎಂದರು.ಈ ಸಂದರ್ಭದಲ್ಲಿ ನಗರಸಭೆ ಅಧ್ಯಕ್ಷ ಮಹಮ್ಮದ್ ಗೌಸ್, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಉಪಾಧ್ಯಕ್ಷೆ ಪೂಜಾ ಜಾರ್ಜ್, ವಿಭಾಗೀಯ ನಿಯಂತ್ರಣಾಧಿಕಾರಿ ಚಂದ್ರಕಾಂತ ಪುಲೇಕರ, ವಿಭಾಗೀಯ ಸಂಚಾರಿ ಅಧಿಕಾರಿ ಇಂದ್ರಸೇನ ಎಂ. ಬಿರಾದಾರ, ಬೀದರ ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಎಂ.ಡಿ.ರಿಯಾಜ್, ಉಪಾಧ್ಯಕ್ಷ ರಾಜಕುಮಾರ ಮಡಿಗೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ತಾರೆ ಡಾ. ಸರೋಜಾದೇವಿ ಇನ್ನಿಲ್ಲ

ಸರೋಜಾದೇವಿಯವರಿಗೆ ಅಂದಿನ ರಾಷ್ಟ್ರಪತಿ ಪ್ರತಿಭಾ ಪಾಟೀಲ್ ಪ್ರಶಸ್ತಿ ನೀಡಿ ಗೌರವಿಸಿದ್ದರು.

2009 ರಲ್ಲಿ ರಾಜ್ಯ ಸರ್ಕಾರದಿಂದ ಡಾ. ರಾಜ್‌ಕುಮಾರ್ ಜೀವಮಾನ ಸಾಧನೆ ಪ್ರಶಸ್ತಿ, 2001 ರಲ್ಲಿ ಆಂಧ್ರ ಪ್ರದೇಶ ಸರ್ಕಾರದಿಂದ ಎನ್.ಟಿ.ಆರ್. ರಾಷ್ಟ್ರೀಯ ಪ್ರಶಸ್ತಿ ಹಾಗೂ 2009 ರಲ್ಲಿ ಮತ್ತ 2ನೇ ಬಾರಿಗೆ ಆಂಧ್ರ ಪ್ರದೇಶ ಸರ್ಕಾರದಿಂದ ಎನ್.ಟಿ.ಆರ್. ರಾಷ್ಟ್ರೀಯ ಪ್ರಶಸ್ತಿಯನ್ನು ಪಡೆದಿದ್ದರು.

1993 ರಲ್ಲಿ ತಮಿಳುನಾಡು ಸರ್ಕಾರದ ಎಂ,ಜಿ.ಆರ್. ಪ್ರಶಸ್ತಿ, 1988 ರಲ್ಲಿ ಕರ್ನಾಟಕ ಸರ್ಕಾರದ ರಾಜ್ಯೋತ್ಸವ ಪ್ರಶಸ್ತಿ, 1969ರಲ್ಲಿ ಕುಲವಿಳಕ್ಕು ಚಿತ್ರಕ್ಕೆ ಅತ್ಯುತ್ತಮ ನಟಿಯಾಗಿ ತಮಿಳುನಾಡು ರಾಜ್ಯ ಚಲನಚಿತ್ರ ಪ್ರಶಸ್ತಿ, 1965 ರಲ್ಲಿ ಕರ್ನಾಟಕದಿಂದ ಅಭಿನಯ ಸರಸ್ವತಿ ಗೌರವ, ಫಿಲ್ಮ್‌ಫೇರ್ ಪ್ರಶಸ್ತಿಗಳನ್ನು ಅವರು ಪಡೆದಿದ್ದರು.

2010ರಲ್ಲಿ ಭಾರತೀಯ ವಿದ್ಯಾಭವನ ಪದ್ಮಭೂಷಣ್ ಬಿ. ಸರೋಜಾದೇವಿ ರಾಷ್ಟ್ರೀಯ ಜೀವಮಾನ ಸಾಧನೆ ಪ್ರಶಸ್ತಿಯನ್ನು ಸ್ಥಾಪಿಸಿತ್ತು. ಈ ಪ್ರಶಸ್ತಿಗೆ ಕೆ.ಜೆ. ಯೇಸುದಾಸ್, ವೈ. ಜಯಂತಿಮಾಲಾ, ಅಂಜಲಿ ದೇವಿ, ಅಂಬರೀಷ್, ಜಯಂತಿ ಸೇರಿದಂತೆ ಹಲವು ಖ್ಯಾತ ನಟರು ಭಾಜನರಾಗಿದ್ದರು.

ನಟಿ ಬಿ. ಸರೋಜಾದೇವಿಯವರು 200ಕ್ಕೂ ಹೆಚ್ಚು ಚಿತ್ರಗಳಲ್ಲಿ ನಟಿಸಿದ್ದಾರೆ. ಕಿತ್ತೂರುರಾಣಿ ಚೆಮ್ಮಮ್ಮ, ಭಕ್ತ ಕನಕದಾಸ, ಬಾಳೇಬಂಗಾರ, ನಾಗಕನ್ಯಾ, ಬೆಟ್ಟದ ಹೂವು, ಕಸ್ತೂರಿ ನಿವಾಸ, ಬಬ್ರುವಾಹನ, ಕಥಾಸಂಗಮ, ಅಮರಶಿಲ್ಪಿ ಚಕಣಚಾರಿ, ಮಲ್ಲಪ್ಪಮ್ಮನ ಪವಾಡ ಸೇರಿದಂತೆ ನೂರಾರು ಕನ್ನಡ ಚಿತ್ರಗಳಲ್ಲಿ ನಟಿಸಿದ್ದರು. ಜತೆಗೆ ತಮಿಳು, ತೆಲುಗು, ಹಿಂದಿ ಭಾಷೆಗಳಲ್ಲೂ ಹಲವು ಚಿತ್ರಗಳಲ್ಲೂ ನಟಿಸಿ ಚಿತ್ರ ಪ್ರೇಮಿಗಳ ಮನಗೆದಿದ್ದರು.

ಕನ್ನಡದ ಚಲನಚಿತ್ರ ಮಹಾಕವಿ ಕಾಳಿದಾಸ (1955) ಚಿತ್ರದಲ್ಲಿ ಅಭಿನಯಿಸಿದ್ದ ಬಿ. ಸರೋಜಾದೇವಿ ನಂತರ ಕನ್ನಡ ಸಿನಿಮಾ ಸೇರಿದಂತೆ ಭಾರತದ ಹಲವು ಭಾಷೆಗಳಲ್ಲಿ ನಟಿಸಿ ಜನರ ಪ್ರೀತಿ, ವಿಶ್ವಾಸ, ಗೌರವಕ್ಕೆ ಪಾತ್ರರಾಗಿದ್ದರು. ಇತ್ತೀಚಿನ ಕೆಲ ವರ್ಷಗಳಿಂದ ನಟನೆಯಿಂದ ದೂರವಿದ್ದ ಅವರು, 2019 ರಲ್ಲಿ ಪವರ್ ಸ್ಟಾರ್ ಪುನೀತ್ ರಾಜ್‌ಕುಮಾರ್ ರವರ ನಟಸಾರ್ವಭೌಮ ಚಿತ್ರದಲ್ಲಿ ಪೋಷಕ ಕಲಾವಿದೆಯಾಗಿ ನಟಿಸಿದ್ದರು. ಇದೇ ಇವರ ಕೊನೆಯ ಚಿತ್ರವಾಗಿತ್ತು.ಪಂಚಭಾಷಾ ತಾರೆ ಬಿ. ಸರೋಜಾದೇವಿ ಅವರು ಕಿತ್ತೂರುರಾಣಿ ಚೆನ್ನಮ್ಮ ಚಿತ್ರದಲ್ಲಿ ರಾಣಿ ಚೆನ್ನಮ್ಮ ಪಾತ್ರದಲ್ಲಿ ಪರಾಕಾಯ ಪ್ರವೇಶ ಮಾಡಿ ನಟಿಸಿದ್ದು ಇಂದಿಗೂ ಆ ಪಾತ್ರ ಜನಮಾನಸದಲ್ಲಿ ಅಚ್ಚಳಿಯದಂತೆ ಉಳಿದಿದೆ. ನಟ ವಿಷ್ಣುವರ್ಧನ್, ಅಂಬರೀಷ್, ಚಿರಂಜೀವಿ ಸೇರಿದಂತೆ ಹಲವು ಖ್ಯಾತ ನಟರ ಚಿತ್ರಗಳಲ್ಲಿಯೂ ಅವರು ನಟಿಸಿ ಹೆಸರಾಗಿದ್ದರು. ಇಡೀ ಭಾರತೀಯ ಚಿತ್ರರಂಗಕ್ಕೆ ಮಾದರಿ ನಟಿಯಂತಿದ್ದ ಬಿ. ಸರೋಜಾದೇವಿಯವರ ಅಗಲಿಕೆ ಅವರ ಅಭಿಮಾನಿಗಳು, ಚಿತ್ರಪ್ರೇಮಿಗಳಲ್ಲಿ ನೋವು ತಂದಿದ್ದು, ಇಡೀ ಭಾರತೀಯ ಚಿತ್ರರಂಗವೇ ಇಂದು ದುಃಖ ಮಡುಗಟ್ಟಿದೆ.

ಪಂಚಭಾಷಾ ತಾರೆ ನಟಿ ಸರೋಜಾದೇವಿಯವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ, ಹೆಚ್.ಡಿ. ಕುಮಾರಸ್ವಾಮಿ, ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ ಸೇರಿದಂತೆ ಹಲವು ರಾಜಕೀಯ ನಾಯಕರು, ಕನ್ನಡ ಚಿತ್ರರಂಗದ ಖ್ಯಾತ ನಟರುಗಳಾದ ಡಾ. ಶಿವರಾಜ್‌ಕುಮಾರ್, ರವಿಚಂದ್ರನ್, ದೊಡ್ಡಣ್ಣ, ಶ್ರೀನಿವಾಸಮೂರ್ತಿ, ಸುದೀಪ್, ಯಶ್ ಸೇರಿದಂತೆ ಹಲವು ಖ್ಯಾತ ನಟ–ನಟಿಯರು ಶೋಕ ವ್ಯಕ್ತಪಡಿಸಿದ್ದಾರೆ.

ಇಂದು ನಮ್ಮನ್ನು ಅಗಲಿರುವ ನಟಿ ಬಿ. ಸರೋಜಾದೇವಿಯವರನ್ನು ಅಭಿನಯ ಸರಸ್ವತಿ, ಕನ್ನಡದ ಗಿಳಿ, ಮೊದಲ ಮಹಿಳಾ ಸೂಪರ್ ಸ್ಟಾರ್ ಎಂಬ ಹೆಗ್ಗಳಿಕೆಯನ್ನು ಪಡೆದಿದ್ದರು.

1962ರಲ್ಲೇ ದೇಶದ ಅತ್ಯುನ್ನತ ನಾಗರಿಕ ಗೌರವವಾದ ಪದ್ಮಶ್ರೀ, 1992 ರಲ್ಲಿ ಪದ್ಮಭೂಷಣ್ ಪ್ರಶಸ್ತಿಗಳು ಸಂದಿದ್ದವು. ಹಾಗೆಯೇ ಬೆಂಗಳೂರು ವಿಶ್ವವಿದ್ಯಾನಿಲಯದ ಗೌರವ ಡಾಕ್ಟರೇಟ್ ಮತ್ತು ತಮಿಳುನಾಡಿನ ಕಲೈಮಾಮಣಿ ಪ್ರಶಸ್ತಿಯನ್ನು ಪಡೆದಿದ್ದರು.

## ಸಾರಿಗೆ ಸಂಸ್ಥೆಗೆ ನಷ್ಟವಿಲ್ಲ

ಶಕ್ತಿ ಯೋಜನೆ ಜಾರಿ ಮಾಡಿದಾಗ ಪ್ರಯಾಣಿಕರ ಸಂಖ್ಯೆ ಏರಿಕೆಯಾಯಿತು. ಅದರಲ್ಲೂ ಮಹಿಳಾ ಪ್ರಯಾಣಿಕರ ಸಂಖ್ಯೆ ಏರಿಕೆಯಾದಾಗ ಸಮಸ್ಯೆಯಾಗಿದ್ದು ನಿಜ. ನಂತರ ಎಲ್ಲವನ್ನು ಸರಿಪಡಿಸಿಕೊಂಡು ಈಗ ಯಶಸ್ವಿಯಾಗಿ ಶಕ್ತಿ ಯೋಜನೆ ಮುನ್ನಡೆದಿದೆ ಎಂದರು.

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗ ಸಾರಿಗೆ ಸಂಸ್ಥೆಯ ಬಸ್‌ಗಳ 1.54 ಷೆಡ್ಯೂಲ್‌ಗಳಿದ್ದವು. ಈಗ 20 ಸಾವಿರ ಹೆಚ್ಚುವರಿ ಷೆಡ್ಯೂಲ್‌ಗಳನ್ನು ಆರಂಭಿಸಿದ್ದೇವೆ. ನಮ್ಮ ಸರ್ಕಾರ ವಿವಿಧ ಸಾರಿಗೆ ನಿಗಮಗಳಲ್ಲಿ 5 ಸಾವಿರ ಬಸ್‌ಗಳನ್ನು ಸೇರ್ಪಡೆ ಮಾಡಿದೆ. 9 ಸಾವಿರ ಸಿಬ್ಬಂದಿಗಳನ್ನು ನೇರ ನೇಮಕಾತಿ ಮೂಲಕ ತುಂಬಲಾಗಿದೆ. 1 ಸಾವಿರ ಹುದ್ದೆಗಳನ್ನು ಅನುಕಂಪ ಆಧಾರದ ಮೇಲೆ ಭರ್ತಿ ಮಾಡಲಾಗಿದೆ ಎಂದು ಹೇಳಿದರು. ಕೋವಿಡ್ ನಂತರ ಸ್ಥಗಿತಗೊಂಡಿದ್ದ 3800 ಬಸ್‌ಗಳ ಸೇವೆಯನ್ನು ಆರಂಭಿಸಿದ್ದೇವೆ ಎಂದು ಅವರು ಹೇಳಿದರು.

## ಸಿಗರೇಟ್ ಪ್ಯಾಕೆಟ್‌ನಲ್ಲಿರುವಂತೆ ವಾರ್ನಿಂಗ್

ಬಗ್ಗೆ ಅಧ್ಯಯನ ನಡೆಸಿದೆ. ಈ ವರದಿಯಲ್ಲಿ ಎಣ್ಣೆ ಮತ್ತು ಸಕ್ಕರೆ ಬಳಸಿ ತಯಾರಿಸುವ ತಿಂಡಿಗಳಲ್ಲಿ ಕೊಬ್ಬು ಮತ್ತು ಸಕ್ಕರೆಯ ಅಂಶ ಹೆಚ್ಚಾಗಿರುತ್ತದೆ. ಹೀಗಾಗಿ ಸಮೋಸ ಮತ್ತು ಜಿಲೇಬಿ ಪದೇ ಪದೇ ತಿನ್ನುವುದು ಆರೋಗ್ಯಕ್ಕೆ ಹಾನಿಕಾರಕ. ಇದು ಹಲವು ಕಾಯಿಲೆಗಳಿಗೆ ಕಾರಣವಾಗಬಹುದು ಎಂದು ತಿಳಿಸಿದೆ.ಈ ರೀತಿಯ ತಿನಿಸುಗಳನ್ನು ಅತೀ ಹೆಚ್ಚಾಗಿ ತಿನ್ನುವುದರಿಂದ ದೇಹದ ತೂಕ ಹೆಚ್ಚಾಗುತ್ತದೆ. ಈಗಾಗಲೇ ಭಾರತದ ನಗರಗಳ 100 ಜನರ ಪೈಕಿ 5 ಜನರ ತೂಕ ಅತಿಯಾಗಿ ಹೆಚ್ಚಾಳವಾಗಿದೆ. ಇದರಿಂದ ಸಕ್ಕರೆ ಕಾಯಿಲೆ ಮತ್ತು ಹೃದಯ ಸಂಬಂಧಿ ಕಾಯಿಲೆಯನ್ನು ಹೆಚ್ಚಿಸುತ್ತದೆ. ಅಂದರೆ ತಿನ್ನಲೇಬಾರದು ಅಂತಿಲ್ಲ, ಆದರೆ ಇತಿಮಿತಿಯಲ್ಲಿ ಸೇವನೆ ಮಾಡಬೇಕು ಎಂದು ವರದಿಯಲ್ಲಿ ಉಲ್ಲೇಖಿಸಿದೆ.ಇಂತಹ ತಿನಿಸುಗಳನ್ನು ಪ್ರತಿನಿತ್ಯ ಸೇವನೆ ಮಾಡೋದ್ರಿಂದ ಆರೋಗ್ಯದಲ್ಲಿ ಸಮಸ್ಯೆ ಕಂಡುಬರುತ್ತದೆ. ಹೀಗಾಗಿ ಜಂಕ್ ಫುಡ್ ಕಡಿಮೆ ಮಾಡಿಕೊಂಡರೆ ಆರೋಗ್ಯ ಉತ್ತಮವಾಗಿರುತ್ತದೆ ಎಂದು ಸಲಹೆ ನೀಡಿದೆ. ಹೀಗಾಗಿ ಸದ್ಯ ನಾಗ್ಪುರದಲ್ಲಿ ಜಂಕ್ ಫುಡ್ ತಿನ್ನೋದು ಆರೋಗ್ಯಕ್ಕೆ ಹಾನಿಕಾರಕ ಎಂಬ ಬೋರ್ಡ್ ಹಾಕುವ ಅಭಿಯಾನ ಶುರು ಮಾಡಲಾಗಿದೆ. ಜನಪ್ರಿಯ ಆಹಾರ ಮಳಿಗೆಗಳ ಪಕ್ಕದಲ್ಲಿ ಎಚ್ಚರಿಕೆ ಪೋಸ್ಟರ್‌ಗಳನ್ನು ಹಾಕಲಾಗಿದ್ದು, ಸಕ್ಕರೆ, ಕೊಬ್ಬಿನ ಬಗ್ಗೆ ಸ್ಪಷ್ಟ ಮಾಹಿತಿ ಹಾಗೂ ಪದೇ ಪದೇ ಸೇವನೆಯಿಂದ ದೀರ್ಘಕಾಲೀನ ಆರೋಗ್ಯ ಅಪಾಯಗಳನ್ನು ವಿವರಿಸುವ ಸಂದೇಶಗಳ ಉಲ್ಲೇಖಿಸಲಾಗಿದೆ.ಭಾರತದಲ್ಲಿ ಆರೋಗ್ಯ ಸಮಸ್ಯೆ ಹೆಚ್ಚಾಗುತ್ತಿದ್ದು, ಬೊಜ್ಜು, ಮಧುಮೇಹ, ಅಧಿಕ ರಕ್ತದೊತ್ತಡ ಮತ್ತು ಹೃದ್ರೋಗ ಸಮಸ್ಯೆ ತೀವ್ರವಾಗಿವೆ. ಹೀಗಾಗಿ ಸರ್ಕಾರ ಈ ಬಗ್ಗೆ ಗಮನ ಹರಿಸುತ್ತಿದ್ದು, ಕರಿದ ಮತ್ತು ಸಕ್ಕರೆಯುಕ್ತ ತಿಂಡಿಗಳ ಸೇವನೆಯಿಂದ ಈ ಕಾಯಿಲೆಗಳಿಗೆ ಪ್ರಮುಖ ಕಾರಣ ಎಂದು ತಿಳಿಸಿದೆ.ಇದು ನಿಷೇಧವಲ್ಲ, ಆದರೆ ಮಿತವಾಗಿ ಸೇವಿಸಲು ಸೂಚಿಸಲಾಗುತ್ತಿದೆ ಎಂದು ಸ್ಪಷ್ಟಪಡಿಸಿದೆ. ಮುಂಬರುವ ದಿನಗಳಲ್ಲಿ ಬೇರೆ ಬೇರೆ ನಗರಗಳಲ್ಲಿ ಈ ರೀತಿಯ ಪೋಸ್ಟರ್ ಅಂಟಿಸಲು ಚಿಂತಿಸಿದ್ದು, ಸಿಗರೇಟ್ ಮೇಲೆ ಇರುವ ಹಾಗೆಯೇ ತಿನಿಸುಗಳ ಮೇಲೆಯೂ ದುಷ್ಪರಿಣಾಮಗಳ ಎಚ್ಚರಿಕೆ ನೀಡಲು ಮುಂದಾಗಿದೆ.


# ಗೋವಿಂದರಾವ ಪಾಟೀಲ್ ಭಾಟಸಾಂಗವಿಕರ್: ಸಹಕಾರ ಕ್ಷೇತ್ರದ ದಿಗ್ಗಜ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.14: ತಾಲೂಕಿನ ಭಾಟಸಾಂಗವಿ ಗ್ರಾಮದಲ್ಲಿ ಡಿಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷರಾದ

ದಿ.ಗೋವಿಂದರಾವಪಾಟೀಲ್ ಭಾಟಸಾಂಗವಿಕರ್ ಅವರ ಪ್ರಥಮ ಪುಣ್ಯಸ್ಮರಣೋತ್ಸವ ನೆರವೇರಿತು.

ಬಳಿಕ ಮಾತನಾಡಿದ ವೈದ್ಯರಾದ ಡಾ.ದಿಲೀಪ ಪಾಟೀಲ್‌ಅವರು,ಗೋವಿಂದರಾವ ಪಾಟೀಲ್ ಭಾಟಸಾಂಗವಿಕರ್ ಅವರು ,ಶೈಕ್ಷಣಿಕ,ಸಾಮಾಜಿಕ ಮತ್ತು ವಿಶೇಷವಾಗಿ ಸಹಕಾರ ಕ್ಷೇತ್ರದಲ್ಲಿ ನಾನಾ ಹುದ್ದೆಗಳನ್ನು ಅಲಂಕರಿಸಿ ತ್ಯಾಗ ಮತ್ತು ನಿಸ್ವಾರ್ಥ ಭಾವನೆಯಿಂದ ಸೇವೆ ಸಲ್ಲಿಸಿ ಸಹಕಾರ ಕ್ಷೇತ್ರದ ದಿಗ್ಗಜ ಎನಿಸಿಕೊಂಡಿದ್ದಾರೆ.ಒಬ್ಬ ನಿಷ್ಠಾವಂತ ನ್ಯಾಯವಾದಿಯಾಗಿ ದು:ಖಿತ ಕಕ್ಷಿದಾರರಿಗೆ ನ್ಯಾಯ ಒದಗಿಸಿ ಕೊಟ್ಟಿದ್ದಾರೆ.ತಾಲೂಕು ಅಭಿವೃದ್ಧಿ ಮಂಡಳಿಯ ಸದಸ್ಯರಾಗಿ,ಎಪಿಎಮ್‌ಸಿಸದಸ್ಯರಾಗಿ ,ಜಿಲ್ಲಾ ಮಧ್ಯವರ್ತಿ ಸಹಕಾರ ಬ್ಯಾಂಕ್‌ನ (ಡಿಸಿಸಿ ಬ್ಯಾಂಕ್) 35 ವರ್ಷ ನಿರ್ದೇಶಕರಾಗಿ,06




ವರ್ಷ ಅಧ್ಯಕ್ಷರಾಗಿ ,ಬೆಂಗಳೂರಿನ ಅಪೇಕ್ಸ್ ಬ್ಯಾಂಕ್ ನಿರ್ದೇಶಕರಾಗಿ,ಎನ್‌ಎಸ್‌ಎಸ್‌ಕೆ ಸಕ್ಕರೆಕಾರ್ಖಾನೆನಿರ್ದೇಶಕರಾಗಿ,ಕಿಸಾನ ಶಿಕ್ಷಣ ಪ್ರಸಾರಕ ಮಂಡಳದ ಅಧ್ಯಕ್ಷರಾಗಿ,ನಬಾರ್ಡ್ ಬ್ಯಾಂಕಿನ ಪ್ರತಿನಿಧಿಯಾಗಿ,ನ್ಯಾಯವಾದಿ ಸಂಘದ ಅಧ್ಯಕ್ಷರಾಗಿ ಹೀಗೆ ಹತ್ತು ಹಲವು ಸಂಘ ಸಂಸ್ಥೆಗಳಲ್ಲಿ ದಕ್ಷತೆ ಮತ್ತು ಪ್ರಮಾಣಿಕತೆಯಿಂದ ಸೇವೆ ಸಲ್ಲಿಸಿ ,ನಿರುದ್ಯೋಗಿ ಯುವಕರಿಗೆ ಉದ್ಯೋಗ ಒದಗಿಸಿ ಆಶ್ರಯದಾತರಾಗಿದ್ದಾರೆ. ಇವರ ಸೇವೆ ಪರಿಗಣಿಸಿ ಹಲವು ಸಂಘ ಸಂಸ್ಥೆಗಳು ಪ್ರಶಸ್ತಿ–ಪುರಸ್ಕಾರ ನೀಡಿ ಗೌರವಿಸಿದ್ದಾರೆ.ದಿ.ಗೋವಿಂದರಾವ ಪಾಟೀಲ್ ಭಾಟಸಾಂಗವಿಕರ್ ಅವರು ಡಿಸಿಸಿ ಬ್ಯಾಂಕ್ ಅಭಿವೃದ್ಧಿಗಾಗಿ ಶ್ರಮಿಸಿದ ಸೇವೆ ಪರಿಗಣಿಸಿ ಬೀದರನಲ್ಲಿ ನಡೆದ ಡಿಸಿಸಿ ಬ್ಯಾಂಕ್ ಅಮೃತ ಮಹೋತ್ಸವ(ಪ್ಲಾ ??ಟಿನಮ್) ಸಮಾರಂಭದಲ್ಲಿ ಅಂದಿನ ಪ್ರಧಾನಿ ಐ.ಕೆ.ಗುಜ್ರಾಲ್ ಅವರಿಂದ ಗೌರವಿಸಲಾಯಿತು ಎಂದು ಹೇಳಿದರು. ಈ ಸಂದರ್ಭದಲ್ಲಿ ಕೆಎಸ್‌ಪಿ ಮಂಡಳದ ಅಧ್ಯಕ್ಷ ಅನೀಲ ಪಾಟೀಲ್ ಶಿಂದೆ,ಕಾರ್ಯದರ್ಶಿ ಡಾ.ಪ್ರಕಾಶ ಪಾಟೀಲ್ ಸೇರಿದಂತೆ ಬಂಧು,ಮಿತ್ರರು,ಹಿತೈಷಿಗಳು,ಅಭಿಮಾನಿಗಳು ಉಪಸ್ಥಿತರಿದ್ದರು

# ಗುರುಗಳನ್ನು ಸ್ಮರಿಸಿ ಸಲ್ಲಿಸುವ ಗೌರವವೇ ಗುರುವಂದನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.14– ಅಕ್ಷರ ಕಲಿಸಿ ಬಾಳಿಗೆ ಬೆಳಕಾದ ಗುರುಗಳನ್ನು ಸ್ಮರಿಸಿ, ಅವರಿಗೆ ಸಲ್ಲಿಸುವ ಗೌರವವೇ ಗುರುವಂದನೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಚ್.ಜಿ.ಮಿರ್ಜಿ ಹೇಳಿದರು.



ತಾಲೂಕಿನ ಭಗವತಿಯಲ್ಲಿ ಶನಿವಾರ ಜರುಗಿದ ಸ್ಥಳೀಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಕೋನಮ್ಮದೇವಿ ಪ್ರೌಢಶಾಲೆಯಲ್ಲಿ 2011ರಿಂದ 2016 ರವರೆಗೆ ಅಧ್ಯಯನ ಮಾಡಿದ ವಿದ್ಯಾರ್ಥಿಗಳು ಹಮ್ಮಿಕೊಂಡಿದ್ದ ಗುರುವಂದನೆ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಜನ್ಮ ನೀಡಿದ ತಂದೆ–ತಾಯಿ, ಅಕ್ಷರ ಕಲಿಸಿದ ಗುರುಗಳನ್ನು ವಿದ್ಯಾರ್ಥಿಗಳು ಎಂದಿಗೂ ಮರೆಯಬಾರದು. ಅವರ ಋಣ ತೀರಿಸುವುದರ ಮೂಲಕ ಗುರುದಕ್ಷಿಣೆ ಸಲ್ಲಿಸಬೇಕು ಎಂದು ಹೇಳಿದ ಮಿರ್ಜಿ,ಗುರುವಂದನೆ ಕಾರ್ಯಕ್ರಮಗಳು ಗುರು–ಶಿಷ್ಯರ ಸಂಬಂಧವನ್ನು ವೃದ್ಧಿಸುತ್ತವೆ ಎಂದು ಹೇಳಿದರು.

ಅಶೋಕ ಕೆಂಪಲಿಂಗಣ್ಣವರ, ಪ್ರೊ.ಎಸ್.ಎಸ್.ಭೂಸನ್ನವರ ಹಾಗೂ ಪಿಕೆಪಿಎಸ್ ನಿರ್ದೇಶಕ ಹಣಮಂತ ಚಿಮ್ಮಲಗಿ ಮಾತನಾಡಿದರು. ಸನ್ಮಾನಿತ ಶಿಕ್ಷಕರ ಪರವಾಗಿ ಆರ್.ಎಸ್. ಮನಗೂಳಿ,ಎಂ.ಎಂ.ಬೂದಿಹಾಳ, ಎಂ.ಎನ್.ಬಿರಾದಾರ ಮಾತನಾಡಿದರು.

ಅಧ್ಯಕ್ಷತೆಯನ್ನು ಎಸ್.ಡಿಎಂಸಿ ಅಧ್ಯಕ್ಷ ಎಸ್.ಎಂ.ಬಿರಾದಾರ ವಹಿಸಿದ್ದರು. ಗ್ರಾಪಂ ಅಧ್ಯಕ್ಷ ಶಿವಪುತ್ರಪ್ಪ ದೊಡಮನಿ, ಮುಖ್ಯಗುರು ಎಸ್.ಎಸ್.ಬಳೂಲದ, ಶಿಕ್ಷಣ ಸಂಯೋಜಕಿ ಶಿಲ್ಪಾ ಪಾಟೀಲ,ಎಸ್.ಜಿ.ಹೊಸಮನಿ, ಚೇತನ ಗೌಡರ, ರಾಧಿಕಾ ಹೊಸಮನಿ,ರಶ್ಮಿಕಾ ಮೂಲಿಮನಿ ಅತಿಥಿಗಳಾಗಿದ್ದರು.

ಹಳೆಯ ವಿದ್ಯಾರ್ಥಿಗಳು ಗುರುಗಳ ಪಾದಪೂಜೆ ನೆರವೇರಿಸಿ, ಸನ್ಮಾನಿಸಿದರು.

# ಹುಮನಾಬಾದ್‌ನ ಕೆಮಿಕಲ್ ಫ್ಯಾಕ್ಟರಿಗಳಿಂದ ಜನರಿಗೆ ತೊಂದರೆ, ರೈತರ ಬೆಳೆ ಹಾನಿ: ಜನಪ್ರತಿನಿಧಿಗಳ ನಿರ್ಲಕ್ಷ್ಯ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್, ಜು. 14: ಹುಮನಾಬಾದ್‌ನಹೊರವಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಕೆಮಿಕಲ್ ಫ್ಯಾಕ್ಟರಿಗಳಿಂದ ಸ್ಥಳೀಯ ಜನತೆಗೆ ಮತ್ತು ರೈತರಿಗೆ ತೀವ್ರ ತೊಂದರೆ–ಯಾಗುತ್ತಿದ್ದು, ಈ ಕುರಿತು ಜನಪ್ರತಿನಿಧಿಗಳನಿರ್ಲಕ್ಷ್ಯದಿಂದಾಗಿ ಸಮಸ್ಯೆ ಉಲ್ಬಣಗೊಂಡಿದೆ. ಕೆಮಿಕಲ್ ಫ್ಯಾಕ್ಟರಿಗಳಿಂದ ಬಿಡುಗಡೆಯಾಗುವರಾಸಾಯನಿಕ ತ್ಯಾಜ್ಯ, ದುರ್ವಾಸನೆ, ಮತ್ತು ವಾಯುಮಾಲಿನ್ಯದಿಂದ ಜನರ ಆರೋಗ್ಯ ಮತ್ತು ರೈತರ ಬೆಳೆಗಳು ಗಂಭೀರವಾಗಿ ಹಾನಿಗೊಳಗಾಗುತ್ತಿವೆ.

ದುರ್ವಾಸನೆಯಿಂದಕಂಗಾಲಾದ ಜನತೆ: ಹುಮನಾಬಾದ್‌ನ ಹೊರವಲಯದ ಕೆಮಿಕಲ್ ಫ್ಯಾಕ್ಟರಿಗಳಿಂದಹೊರಸೂಸುವ ರಾಸಾಯನಿಕ ತ್ಯಾಜ್ಯದ ದುರ್ವಾಸನೆಯಿಂದ ಸ್ಥಳೀಯ ನಿವಾಸಿಗಳಬದುಕುದುಸ್ತರವಾಗಿದೆ. "ನಾವುಕಿಟಕಿಗಳನ್ನುತೆರೆಯಲಾಗದ ಸ್ಥಿತಿಯಲ್ಲಿದ್ದೇವೆ, ಹೊರಗೆ ಹೋಗಲೂ ಆಗುತ್ತಿಲ್ಲ. ರಾತ್ರಿಯಿಡೀದುರ್ವಾಸನೆಯಿಂದ ಉಸಿರಾಟದ ತೊಂದರೆ ಎದುರಾಗುತ್ತಿದೆ,"ಎಂದುಸ್ಥಳೀಯ ನಿವಾಸಿಯೊಬ್ಬರು ತಮ್ಮ ಕಳವಳ ವ್ಯಕ್ತಪಡಿಸಿದ್ದಾರೆ. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ (ಏಖಕಅಃ) ಮತ್ತು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಗೆ (ಅಕಅಃ) ದೂರು ನೀಡಿದರೂ ಯಾವುದೇ ಪರಿಹಾರಕಂಡುಬಂದಿಲ್ಲಎಂದು ಸಾಮಾಜಿಕ ಮಾಧ್ಯಮದಲ್ಲಿ ದೂರಲಾಗಿದೆ.

ರೈತರಿಗೆ ಭಾರೀ ಹಾನಿ: ಕೆಮಿಕಲ್ ಫ್ಯಾಕ್ಟರಿಗಳಿಂದ ಬಿಡುಗಡೆಯಾಗುವರಾಸಾಯನಿಕ ತ್ಯಾಜ್ಯ ಮತ್ತು ವಾಯು ಮಾಲಿನ್ಯದಿಂದ ಸುತ್ತಮುತ್ತಲಿನ ರೈತರ ಬೆಳೆಗಳಿಗೆ ತೀವ್ರ ಹಾನಿಯಾಗುತ್ತಿದೆ. ವಿಶೇಷವಾಗಿ, ಈ ಪ್ರದೇಶದಲ್ಲಿ ಹೆಸರಾಗಿರುವ ಮಾವಿನ ಫಸಲು ಗಂಭೀರವಾಗಿ ಕ್ಷೀಣಿಸಿದೆ. "ಮಾವಿನ ಮರಗಳ ಎಲೆಗಳು ಕಂದುಬಣ್ಣಕ್ಕೆ ತಿರುಗಿವೆ, ಫಲಗಳು ಸರಿಯಾಗಿ ಬೆಳೆಯುತ್ತಿಲ್ಲ. ರಾಸಾಯನಿಕ ಮಾಲಿನ್ಯದಿಂದ ನಮ್ಮ ಜೀವನೋಪಾಯವೇ ಅಪಾಯದಲ್ಲಿದೆ," ಎಂದು ಸ್ಥಳೀಯ ರೈತರಾದ ಶಿವಪ್ಪತಮ್ಮ ಗೋಳನ್ನು ಹೇಳಿಕೊಂಡಿದ್ದಾರೆ. ಕೃಷಿಯೇ ಆಧಾರವಾಗಿರುವ ಈ ಪ್ರದೇಶದ ರೈತರಿಗೆ ಈ ಸಮಸ್ಯೆ ಆರ್ಥಿಕ ಸಂಕಷ್ಟವನ್ನು ತಂದಿದೆ.

ಜನಪ್ರತಿನಿಧಿಗಳ ನಿರ್ಲಕ್ಷ್ಯ: ಈ ಸಮಸ್ಯೆಗಳ ಕುರಿತು ಸ್ಥಳೀಯ ಜನಪ್ರತಿನಿಧಿಗಳು ಮತ್ತು ಸರ್ಕಾರಿ ಅಧಿಕಾರಿಗಳಿಗೆ ಮನವಿಗಳನ್ನು ಸಲ್ಲಿಸಿದರೂ, ಯಾವುದೇ ಗಮನಾರ್ಹ ಕ್ರಮ ಕೈಗೊಳ್ಳಲಾಗಿಲ್ಲ. "ನಾವು ದೂರು ನೀಡಿದರೂ ಯಾರೂ ಕೇಳುತ್ತಿಲ್ಲ. ಜನಪ್ರತಿನಿಧಿಗಳು ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿಲ್ಲ," ಎಂದು ಸ್ಥಳೀಯ ಸಾಮಾಜಿಕ ಕಾರ್ಯಕರ್ತ ರಮೇಶ್ ಆರೋಪಿಸಿದ್ದಾರೆ. ಕೆಮಿಕಲ್ ಫ್ಯಾಕ್ಟರಿಗಳಿಂದಾಗುವ ಮಾಲಿನ್ಯವನ್ನು ತಡೆಗಟ್ಟಲು ಕಠಿಣ ಕಾನೂನು ಕ್ರಮಗಳ ಅಗತ್ಯವಿದೆ ಎಂದು ಜನತೆ ಒತ್ತಾಯಿಸುತ್ತಿದ್ದಾರೆ.

ಕೃತಿಗೆ ಕರೆ: ಸ್ಥಳೀಯರು ಮತ್ತು ರೈತರು ಕೆಮಿಕಲ್ ಫ್ಯಾಕ್ಟರಿಗಳಿಂದ ಉಂಟಾಗುವ ಮಾಲಿನ್ಯವನ್ನು ನಿಯಂತ್ರಿಸಲು ಸರ್ಕಾರ ಕೂಡಲೇ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದ್ದಾರೆ. ಮಾಲಿನ್ಯ ನಿಯಂತ್ರಣ ಮಂಡಳಿಗಳು ಫ್ಯಾಕ್ಟರಿಗಳ ಮೇಲೆ ಕಠಿಣ ನಿಗಾವಹಿಸಿ,ತ್ಯಾಜ್ಯ ನಿರ್ವಹಣೆಗೆ ಕಟ್ಟುನಿಟ್ಟಾದ ಮಾರ್ಗಸೂಚಿಗಳನ್ನು ಜಾರಿಗೊಳಿಸಬೇಕು. ಜೊತೆಗೆ, ಹಾನಿಗೊಳಗಾದ ರೈತರಿಗೆ ಸೂಕ್ತ ಪರಿಹಾರ ಮತ್ತು ಬೆಂಬಲ ನೀಡುವಂತೆ ಒತ್ತಾಯಿಸಲಾಗಿದೆ.

ಈ ಸಮಸ್ಯೆಯನ್ನು ಶೀಘ್ರವಾಗಿ ಪರಿಹರಿಸದಿದ್ದರೆ,ಜನರ ಆರೋಗ್ಯ, ಪರಿಸರ,ಮತ್ತು ಕೃಷಿಯ ಮೇಲೆ ದೀರ್ಘಕಾಲೀನ ದುಷ್ಪರಿಣಾಮಗಳು ಉಂಟಾಗಬಹುದು ಎಂದು ತಜ್ಞರು ಎಚ್ಚರಿಕೆ ನೀಡಿದ್ದಾರೆ.

# ಕೆರೆ ತುಂಬಿಸುವ ಯೋಜನೆ ಶೀಘ್ರ ಆರಂಭ: ಶಾಸಕ ಪ್ರಭು ಚವ್ಹಾಣ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜು.14:ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಸೋಮವಾರ ಕಮಲನಗರ ತಾಲಕಿನ ಬಳತ್(ಬಿ) ಗ್ರಾಮದ ವ್ಯಾಪ್ತಿಯಲ್ಲಿ ಸಂಚರಿಸಿ ಹಾಲಹಳ್ಳಿ ಬ್ಯಾರೇಜ್ ಮೇಲ್ಭಾಗದಲ್ಲಿ ಮಾಂಜ್ರಾ ನದಿಯಿಂದ 0.95 ಟಿ.ಎಂ.ಸಿ ನೀರನೆತ್ತಿ 30 ಸಣ್ಣ ಕೆರೆಗಳು ಮತ್ತು 6 ಇಂಗು ಕೆರೆಗಳು ಸೇರಿ 36 ಕೆರೆಗಳು ತುಂಬಿಸುವ ಯೋಜನೆಯ ತಯಾರಿಯ ಬಗ್ಗೆ ಮಾಹಿತಿ ಪಡೆದರು.



ಬಳತ್(ಬಿ) ಗ್ರಾಮದ ವ್ಯಾಪ್ತಿಯಲ್ಲಿ ನಿರ್ಮಿಸಲು ಉದ್ದೇಶಿಸಿರುವ ಜಾಕ್ವೆಲ್, ಪಂಪ್‌ಹೌಸ್ ಮತ್ತು ವಿದ್ಯುತ್ ಉಪಕೇಂದ್ರದ ಸ್ಥಳವನ್ನು ವೀಕ್ಷಿಸಿದರು. ಕಾರಂಜಾ ಯೋಜನೆಯ ಕಾರ್ಯನಿರ್ವಾಹಕ ಅಭಿಯಂತರರಾದ ಸಂತೋಷ ಮಾಕಾ ಅವರು ಶಾಸಕರಿಗೆ ಯೋಜನೆಯ ಬಗ್ಗೆ ವಿವರಣೆ ನೀಡಿದರು.

ಈ ಸಂದರ್ಭದಲ್ಲಿ ಶಾಸಕರು ಮಾತನಾಡಿ, ಔರಾದ(ಬಿ) ವಿಧಾನಸಭಾ ಕ್ಷೇತ್ರದಲ್ಲಿ ಪ್ರತಿ ವರ್ಷ ಎದುರಾಗುವ ಕುಡಿಯುವ ನೀರಿನ ಸಮಸ್ಯೆ ಇತ್ಯರ್ಥಪಡಿಸಬೇಕು ಮತ್ತು ನಮ್ಮ ರೈತರಿಗೆ ಅನುಕೂಲ ಕಲ್ಪಿಸಬೇಕೆಂಬ ಉದ್ದೇಶದಿಂದ ಸಾಕಷ್ಟು ಪ್ರಯತ್ನಪಟ್ಟು ಮುಖ್ಯಮಂತ್ರಿಗಳು ಮತ್ತು ಸಚಿವರ ಮೇಲೆ ಒತ್ತಡ ತಂದು 560 ಕೋಟಿ ಬೃಹತ್ ಮೊತ್ತದ ಯೋಜನೆಯನ್ನು ತಂದಿದ್ದೇನೆ. ಔರಾದ(ಬಿ) ಇತಿಹಾಸದಲ್ಲಿಯೇ ಇದು ಅತಿ ದೊಡ್ಡ ಯೋಜನೆಯಾಗಿದ್ದು, ಕೆಲವೇ ದಿನಗಳಲ್ಲಿ ಕಾಮಗಾರಿ ಆರಂಭವಾಗಲಿದೆ ಎಂದು ಹೇಳಿದರು.

ನಮ್ಮೆಲ್ಲರಿಗೆ ಅನ್ನ ನೀಡಿ ಪೋಷಿಸುವ ರೈತರ ಕೈ ಬಲಪಡಿಸಬೇಕು. ಅವರು ಆರ್ಥಿಕವಾಗಿ ಸದೃಢರಾಗಲು ಈ ಯೋಜನೆ ಮಹತ್ವದ ಪಾತ್ರ ವಹಿಸಲಿದೆ. ಅಧಿಕಾರಿಗಳು ಕೇವಲ ಕಛೇರಿಗೆ ಸೀಮಿತವಾಗದೇ ಸ್ಥಳಕ್ಕೆ ಭೇಟಿ ನೀಡಿ ವಾಸ್ತವಾಂಶವನ್ನು ಅರಿಯಬೇಕು. ನಾನು ಜಾಕ್ವೆಲ್, ಪಂಪ್‌ಹೌಸ್, ಪವರ್ ಸಬ್ ಸ್ಟೇಷನ್ ನಿರ್ಮಿಸುವ ಸ್ಥಳಕ್ಕೆ ಭೇಟಿ ನೀಡಿದ್ದು, ಮುಂದಿನ ದಿನಗಳಲ್ಲಿ ಕಾಮಗಾರಿ ನಡೆಯುವ ಎಲ್ಲ ಕಡೆಗಳಿಗೆ ಭೇಟಿ ನೀಡಲಿದ್ದೇನೆ ಎಂದರು.

ಕ್ಷೇತ್ರದಲ್ಲಿ ಸಾಮಾನ್ಯವಾಗಿ ಬೇಸಿಗೆ ಅವಧಿಯಲ್ಲಿ ಎಲ್ಲ ಕೆರೆಗಳು ಬತ್ತಿ ಹೋಗಿ ನೀರಿನ ಆಭಾವ ಉಂಟಾಗಿ ಜನ, ಜಾನುವಾರುಗಳು, ಪಶು, ಪಕ್ಷಿಗಳಿಗೂ ನೀರು ಸಿಗುವುದು ಕಷ್ಟವಾಗುತ್ತದೆ. ಎಲ್ಲ ಕಾಲದಲ್ಲಿಯೂ ನೀರು ಲಭ್ಯವಿರಬೇಕೆಂಬ ಸದಾಶಯದ ದಂದಿಗೆ ಬಹುದೊಡ್ಡ ಯೋಜನೆಯನ್ನು ತಂದಿದ್ದು, ಕಾಮಗಾರಿ ಯೋಜನಾಬದ್ಧವಾಗಿ ನಡೆಯಬೇಕು. ಯೋಜನೆಯ ಯಶಸ್ವಿಗೆ ರೈತರು, ಸ್ಥಳೀಯರು ನೀಡುವ ಸಲಹೆ ಸೂಚನೆಗಳನ್ನು ಪರಿಗಣಿಸಬೇಕು. ರೈತರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಕೆಲಸ ಮಾಡಬೇಕಿದೆ ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಕೆಎನ್‌ಎನ್‌ಎಲ್ ಭಾಲ್ಕಿ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರ ಜ್ಞಾನೇಶ್ವರ ಮಂಡೆ, ಎಇಇ ಜನವಾಡಾ ಸಂಜುಕುಮಾರ ಹಳ್ಳೆ, ಇಲಾಖೆಯ ಮಾರುತೆಪ್ಪ, ಮುಖಂಡರಾದ ರಾಮಶೆಟ್ಟಿ ಪನ್ನಾಳೆ, ಕಿರಣ ಪಾಟೀಲ, ಶಿವಕುಮಾರ ವಡ್ಡೆ, ಬಸವರಾಜ ಪಾಟೀಲ, ಪ್ರವೀಣ ಕಾರಬಾರಿ, ಶಿವರಾಜ ಅಲ್ಮಾಜೆ, ಅಶೋಕ ಮೇತ್ರೆ, ಗಿರೀಶ ವಡೆಯರ್, ಸುಭಾಷ ಲಕ್ಷ್ಮಿ ??ನಗರ, ಯೋಗೇಶ ಬಿರಾದಾರ, ಸಂದೀಪ ಪಾಟೀಲ, ಇನಿಲ್ ಹೊಳಸಮುದ್ರೆ, ಭರತ ಕದಂ ಸೇರಿದಂತೆ ಇತರರಿದ್ದರು.

## ವನಮಹೋತ್ಸವ ಅರಣ್ಯ ಸಂರಕ್ಷಣೆ ಅಭಿವೃದ್ಧಿಗೆ ಸಹಾಯ:- ಶೈಲೇಂದ್ರ ಕಾವಡಿ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಪರಿಸರ ಅಸಮತೋಲದಿಂದ ವಾಯು ಗುಣದಲ್ಲಿ ಬದಲಾವಣೆಯಾಗಿ ಹಲವಾರು ಪ್ರಕೃತಿ ವಿಕೋಪಗಳು ಸಂಭವಿಸಲಾರಂಭಿಸಿವೆ. ಪರಿಸರ ಸಮತೋಲ ಕಾಪಾಡಲು ಮರಗಿಡ ಬೆಳೆಸಿ ಪರಿಸರ ಸಂರಕ್ಷಸಬೇಕೆಂದು ಪರಿಸರವಾಹಿನಿ ಬೀದರ್ ಅಧ್ಯಕ್ಷ ಶೈಲೇಂದ್ರ ಕಾವಡಿ ತಾಲೂಕಿನ ಕಾರಪಾಕಪಳ್ಳಿ ಗ್ರಾಮದಲ್ಲಿ ಪರಿಸರವಾಹಿನಿ ಬೀದರ್ ಹಾಗೂ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವನಶ್ರೀ ಇಕೋ ಕ್ಲಬ್ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ವನ ಮಹೋತ್ಸವ ಸಮಾರೋಪ ಹಾಗೂ ಪರಿಸರ ಸಂರಕ್ಷಣೆ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತಾ ಕರೆ ನೀಡಿದರು. 1950 ರಿಂದ ಆರಂಭಗೊಂಡಿರುವ ವನ ಮಹೋತ್ಸವ ಕಾರ್ಯಕ್ರಮ ಅರಣ್ಯ ಸಂರಕ್ಷಣೆ ಅಭಿವೃದ್ಧಿಗೆ ತುಂಬಾ ಸಹಾಯವಾಗಿದೆ. ಶಾಲಾ ವಿದ್ಯಾರ್ಥಿಗಳಲ್ಲಿ ಅರಣ್ಯ ಹಾಗೂ ವನ್ಯಜೀವಿಗಳ ಸಂರಕ್ಷಣೆ ಅರಿವು ಒಡಮೂಡಿಸಲು ಸಹಾಯವಾಗಿದೆ ರಾಷ್ಟ್ರೀಯ ಹಸಿರು ಪಡೆ ಯೋಜನೆ ಕೂಡ ವಿದ್ಯಾರ್ಥಿಗಳಲ್ಲಿ ಪರಿಸರ ಸಂರಕ್ಷಣೆಗೆ ಸಹಾಯವಾಗಿದೆ ಎಂದರು. ವರ್ಷದ ಪರಿಸರ ದಿನಾಚರಣೆ ಘೋಷವಾಕ್ಯವಾದ ಪ್ಲಾಸ್ಟಿಕ್ ಮಾಲಿನ್ಯ ಹೋಗಲಾಡಿಸಿ ಈ ಘೋಷ ವಾಕ್ಯ ಕೃತಿಯಲ್ಲಿ ತರಲು ಪ್ರತಿಯೊಬ್ಬರು ಪ್ಲಾಸ್ಟಿಕ್ ನಿಷೇಧಿಸಲು ವಿಶೇಷ ಕಾಳಜಿ ವಹಿಸಲು ಶೈಲೇಂದ್ರ ಕಾವಡಿ ಮನವಿ ಮಾಡಿದರು. ಬೀದರ್ ಜಿಲ್ಲೆಯಲ್ಲಿಯೇ ಕಾರಪಾಕಪಳ್ಳಿ ಕಾಯಿದಿಟ್ಟ ಅರಣ್ಯ ಪ್ರಸಿದ್ಧ ಔಷಧೀಯ ವೃಕ್ಷಗಳ ವನವಾಗಿದೆ, ಇತ್ತೀಚಿನ ದಿನಗಳಲ್ಲಿ ಅರಣ್ಯ ನಾಶವಾಗುತ್ತಿದೆ ಈ ಅರಣ್ಯ ಸಂರಕ್ಷಣೆಗೆ ವಿಶೇಷ ಕಾಳಜಿ ವಹಿಸಲು ಗ್ರಾಮ ಪಂಚಾಯತ್ ಅವರು ವಿಶೇಷ ಕಾಳಜಿ ವಹಿಸಲು ತಿಳಿಸಿದರು. ಈ ಭಾಗದಲ್ಲಿ ಕಾದಿಟ್ಟ ಅರಣ್ಯ ಪ್ರದೇಶ ಹೆಚ್ಚಿದ ಕಾರಣ ಕಾಡು ಹಂದಿ, ವನ್ಯಜೀವಿಗಳು, ರೈತರ ಬೆಳೆ ಹಾನಿ ಮಾಡುತ್ತಿವೆ. ರೈತರ ಹೊಲಗಳಿಗೆ ವನ್ಯಜೀವಿಗಳು ಪ್ರವೇಶಿಸಿದಂತೆ ಸೋಲಾರ್ ತಂತಿ ಬೇಲಿ ಯೋಜನೆ ಅರಣ್ಯ ಇಲಾಖೆಯವರು ಮಂಜೂರು ಮಾಡಲು ಶೈಲೇಂದ್ರ ಕಾವಡಿ ಆಗ್ರಹಿಸಿದರು. ಎಸ್ ಡಿ ಎಮ್ ಸಿ ಅಧ್ಯಕ್ಷ ರಾಜಕುಮಾರ ಕಾಡವಾದ ಅಧ್ಯಕ್ಷತೆ ವಹಿಸಿದ್ದರು. ಗ್ರಾಮ ಪಂಚಾಯತ್ ಅಧ್ಯಕ್ಷೆ ಲೀಲಾವತಿ ಪಾಟೀಲ್ ಪರಿಸರ ಜಾಗೃತಿ ಅಂಗವಾಗಿ ಹಮ್ಮಿಕೊಂಡಿದ್ದ ವಿವಿಧ ಸ್ಪರ್ಧೆಯಲ್ಲಿ ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನ ಹಾಗೂ ಸಸಿ ವಿತರಿಸಿದರು. ಶಾಲಾ ಮುಖ್ಯಗುರುಗಳಾದ ಶಾರದಾ, ಗ್ರಾಮ ಪಂಚಾಯತ್ ಸದಸ್ಯರಾದ ಕುಮಾರಸ್ವಾಮಿ, ಎಸ್ ಡಿ ಎಂ ಸಿ ಸದಸ್ಯ ಗೈಬಣ, ಶಾಂತಮ್ಮ, ಶಿವಲೀಲಾ, ಬೀಟ್ ಫಾರೆಸ್ಟ್ ಗಳಾದ ಮಾಳಪ್ಪ, ಸದಾನಂದ, ಸಿಆರ್‌ಪಿ ರಾಜಪ್ಪ ಬಂಬಳಗಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

## ತಾಲೂಕ ಪಂಚಾಯತ ನೂತನ ಕಚೇರಿ ನಿರ್ಮಾಣಕ್ಕೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ :- ತಾಲೂಕಿನ ಬೀದರ್ ದಕ್ಷಿಣ ಮತ ಕ್ಷೇತ್ರದಲ್ಲಿ 9 ಗ್ರಾಮ ಪಂಚಾಯತ್, ಹುಮನಾಬಾದ ಮತ ಕ್ಷೇತ್ರದಲ್ಲಿ 5 ಗ್ರಾಮ ಪಂಚಾಯತ್ ತಾಲೂಕಿನಲ್ಲಿ ಒಟ್ಟು 14 ಗ್ರಾಮ ಪಂಚಾಯತ್ ಒಳಗೊಂಡಿವೆ. 2017ರಲ್ಲಿ ಹೊಸ ತಾಲೂಕ ಕೇಂದ್ರವಾಗಿ ರಚನೆಗೊಂಡಿದ್ದು ಚಿಟಗುಪ್ಪದಲ್ಲಿ ತಾಲೂಕ ಪಂಚಾಯತ್ ಕಚೇರಿಯಿಲ್ಲದೆ ಸಾರ್ವಜನಿಕರ ಕೆಲಸ ಕಾರ್ಯಗಳಿಗೆ ತುಂಬಾ ಸಮಸ್ಯೆಯಾಗುತ್ತಿದೆ ನೂತನ ತಾಲೂಕ ಪಂಚಾಯತ್ ಕಚೇರಿ ನಿರ್ಮಾಣ ಮಾಡಲು ಸರ್ವೆ ನಂಬರ್ 340ರಲ್ಲಿ 2 ಎಕರೆ ಸರ್ಕಾರಿ ಜಮೀನು ಕಾಯ್ದಿರಿಸಲಾಗಿದೆ. ಕೂಡಲೇ ನೂತನ ತಾಲೂಕ ಪಂಚಾಯತ ಕಚೇರಿ ನಿರ್ಮಾಣ ಮಾಡಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಬೆಂಗಳೂರಿನ ವಿಕಾಸ ಸೌದಧಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ ಖರ್ಗೆ ಅವರಿಗೆ ಶಾಸಕ ಡಾ. ಸಿದ್ದಲಿಂಗಪ್ಪಾ ಪಾಟೀಲ್ ಮನವಿ ಪತ್ರವನ್ನು ಸಲ್ಲಿಸಿದರು.

## ಕನ್ನಡ ಶಾಲೆಗಳ ಸಬಲೀಕರಣ ಕಾಯ್ದೆಗೆ ಅಗ್ರಹಿಸಿ ಧರಣಿ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಕನ್ನಡ ಶಾಲೆಗಳ ರಕ್ಷಣೆಗೆ ಹಾಗೂ ಖಾಸಗಿ ಶಾಲೆಗಳಿಗೆ ವಿಧಿಸಿರುವ ಷರತ್ತುಗಳನ್ನು ಸಡಿಲಗೊಳಿಸಲು ಹಾಗೂ ಸರಳೀಕರಿಸಲು "ಕನ್ನಡ ಶಾಲೆಗಳ ಸಬಲೀಕರಣ ಕಾಯ್ದೆಗೆ" ಆಗ್ರಹಿಸಿ ಕಲ್ಯಾಣ ಕರ್ನಾಟಕ ಅನುದಾನ ರಹಿತ ಖಾಸಗಿ ಶಾಲಾ ಆಡಳಿತ ಮಂಡಳಿ ಸಂಘ (ರಿ) ಕನ್ನಡ ಸಂರಕ್ಷಣಾ ಸಮಿತಿ, ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಕನ್ನಡ ಪರ ಸಂಘಟನೆಗಳ ತಾಲ್ಲೂಕಾ ಘಟಕ ಚಿಟಗುಪ್ಪ ವತಿಯಿಂದ ಒಂದು ದಿನದ ಧರಣಿ ನಡೆಸಲಾಯಿತ್ತು. 9-10 ವರ್ಷಗಳಿಂದ ಕರ್ನಾಟಕದಲ್ಲಿ ಸಾವಿರಾರು ಕನ್ನಡ ಶಾಲೆಗಳು ಮುಚ್ಚಿರುವುದಕ್ಕೆ ಕಾರಣ ಸರ್ಕಾರದ ವಿಪರೀತ ಕಠಿಣ ನಿಮಯಗಳು, ಇವುಗಳಿಂದ ಕನ್ನಡ ಶಾಲೆಗಳು, ಅದೇ ರೀತಿಯಾಗಿ ಖಾಸಗಿ ಅನುದಾನ ರಹಿತ ಶಾಲೆಗಳಿಗೆ ಸರ್ಕಾರ ವಿಧಿಸುತ್ತಿರುವ ವಿಪರೀತ ಕಠಿಣ ನಿಮಯಗಳಿಂದ ಈ ಶಾಲೆಗಳು ಸೋತು ಸೊರಗುತ್ತಿವೆ. ಇವತ್ತು ನಮ್ಮ ಮಾತೃಭಾಷೆ ಉಳಿಯಬೇಕು, ಕನ್ನಡ ಉಳಿಯಬೇಕು ಅಂ-ದರೆ ಕನ್ನಡ ಶಾಲೆಗಳ ಸಮಗ್ರ ವಿಕಾಸವಾಗಬೇಕು. ಇದು ಸರ್ಕಾರದ ಮುಖ್ಯ ಧ್ಯೇಯವಾಗಿರಬೇಕು. ಆದರೆ ದುರದೃಷ್ಟವಶಾತ್ ಇದು ಆಗುತ್ತಿಲ್ಲ. ಸರ್ಕಾರದ ದಿವ್ಯ ನಿರ್ಲಕ್ಷ್ಯದಿಂದ ಪ್ರತಿ ವರ್ಷ ಸಾವಿರಾರು ಕನ್ನಡ ಶಾಲೆಗಳು ಮುಚ್ಚುತ್ತಿರುವುದು ಕರ್ನಾಟಕದ ಮಟ್ಟಿಗೆ ಬಹಳ ಚಿಂತಾಜನಕ ಸಂಗತಿಯಾಗಿದೆ. ಹಲವಾರು ಖಾಸಗಿ ಕನ್ನಡ ಮಾಧ್ಯಮ ಶಾಲೆಗಳು ಸರ್ಕಾರದ ನೂರಾರು ನಿಯಮಗಳಿಂದ ಸೋತು ಸುಣ್ಣವಾಗಿವೆ ಆದ್ದರಿಂದ ಶಾಲೆಗಳನ್ನು ನಡೆಸಲು ಆಗದ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಪರಿಸ್ಥಿತಿಯಲ್ಲಿ ಕನ್ನಡ ಶಾಲೆಗಳ ಮಾರಣ ಹೋಮ ಆಗುತ್ತಿದೆ ಎಂದು ಈ ಕೆಳಗಿನ ಬೇಡಿಕೆಗಳ ಈಡೇರಿಕೆಗಾಗಿ ಆಗ್ರಹಿಸಿ, ರಾಜ್ಯದ ಎಲ್ಲಾ ತಾಲೂಕಾ ಕೇಂದ್ರಗಳಲ್ಲಿ ವಿವಿಧ ಸಂಘಟನೆಯ ಹಾಗೂ ಕನ್ನಡಪರ ಸಂಘಟನೆಯ ಖಾಸಗಿ ಅನುದಾನ ರಹಿತ ಶಾಲಾ ಆಡಳಿತ ಮಂಡಳಿಯ ಆಶ್ರಯದಲ್ಲಿ ಒಂದು ದಿನದ ಧರಣಿ ಸತ್ಯಾಗ್ರಹ ನಡೆಸಲಾಯಿತು. ನ್ಯಾಯಯುತವಾದ ಈ ಬೇಡಿಕೆಗಳನ್ನು ಈಡೇರಿಸುವ ಮೂಲಕ ಕನ್ನಡ ಭಾಷೆ, ಕನ್ನಡ ಸಂಸ್ಕೃತಿ ಉಳಿಸಲು ಸರ್ಕಾರ "ಕನ್ನಡ ಶಾಲೆಗಳ ಸಬಲೀಕರಣ ಕಾಯ್ದೆ" ಜಾರಿಗೆ ತರಲು ಅಗ್ರಹಿಸಿ ಕನ್ನಡ ಶಾಲೆಗಳನ್ನು ಪ್ರಾರಂಭಿಸಲು ಷರತ್ತುಗಳನ್ನು ಸರಳೀಕರಣಗೊಳಿಸಬೇಕು, ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಅನುಮತಿ ನವೀಕರಣ ಪ್ರಕ್ರೀಯೆ ಸರಳಗೊಳಿಸಬೇಕು, 1995ರ ನಂತರ ಪ್ರಾರಂಭವಾದ ಖಾಸಗಿ ಶಾಲೆಗಳನ್ನು ಅನುದಾನಕ್ಕೊಳಪಡಿಸಬೇಕು. ಬಡ ಮಕ್ಕಳಿಗೆ ದಾರಿ ದೀಪವಾದ ಆರ.ಟಿ.ಇ ಖಾಸಗಿ ಶಾಲೆಗಳಿಗೆ ಮರು ಜಾರಿ ಮಾಡಬೇಕು, ಅನುದಾನಿತ ಶಾಲೆಯಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಬೇಕು, 371 ಜೆ ಕಾನೂನಿನಡಿಯಲ್ಲಿ ಸಿಗಬೇಕಾದ ಎಲ್ಲಾ ಸೌಲಭ್ಯಗಳನ್ನು ಶಾಲೆಗಳಿಗೆ ನೀಡಬೇಕು, ರಾಜ್ಯಾದ್ಯಂತ ಅನಧಿಕೃತ ಕೋಚಿಂಗ ಸೆಂಟರ್‌ಗಳನ್ನು ಮುಚ್ಚಿಸಬೇಕು, ಕನ್ನಡ ಶಾಲೆಗಳನ್ನು ರಕ್ಷಿಸಿ ಕನ್ನಡವನ್ನು ಉಳಿಸಬೇಕು, ಕನ್ನಡ ಶಾಲೆಗಳನ್ನು ಉಳಿಸಿ ಕರ್ನಾಟಕ ಪಬ್ಲಿಕ್ ಶಾಲೆ ಇಂಗ್ಲೀಷ ಮಾಧ್ಯಮ ಶಾಲೆಗಳನ್ನು ಪ್ರಾರಂಭವನ್ನು ಕೈ ಬಿಡಬೇಕು ಎಂದು ಬೇಡಿಕೆಯುಳ್ಳ ಮನವಿ ಪತ್ರವನ್ನು ಮಾನ್ಯ ಮುಖ್ಯಮಂತ್ರಿ ಸಿದ್ಧರಾಮಯ್ಯಾನವರಿಗೆ ಬರೆದ ಮನವಿ ಪತ್ರವನ್ನು ತಹಸೀಲ್ದಾರ ಚಿಟಗುಪ್ಪ ರವರ ಮುಖಾಂತರ ಕೊಡಲಾಯಿತ್ತು. ಈ ಸಂದರ್ಭದಲ್ಲಿ ಕಲ್ಯಾಣ ಕರ್ನಾಟಕ ಅನುದಾನ ರಹಿತ ಖಾಸಗಿ ಶಾಲಾ ಆಡಳಿತ ಮಂಡಳಿ ಸಂಘದ ತಾಲೂಕಾಧ್ಯಕ್ಷ ಸುರೇಶ ಚೌಧರಿ, ಕಾರ್ಯದರ್ಶಿ ಚಂದ್ರಶೇಖರ್ ದಾನಪ, ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕಾಧ್ಯಕ್ಷ ಅನೀಲಕುಮಾರ್ ಸಿಂಧೆ, ನಿವೃತ್ತ ಶಿಕ್ಷಕ ಮಹಾರುದ್ರಪ್ಪ ಅಣದುರೆ, ಸೂರ್ಯಕಾಂತ ಮಠಪತಿ ಸೇರಿದಂತೆ ಅನುದಾನ ರಹಿತ ಶಾಲಾ ಆಡಳಿತ ಮಂಡಳಿಯ ಅಧ್ಯಕ್ಷರು, ಶಿಕ್ಷಕರು ಉಪಸ್ಥಿತರಿದ್ದರು.

## ಆಲೋಚನೆಗಳು ಶಕ್ತಿಯುತವಾಗಿರಲಿ ಹಾರಕೂಡ ಶ್ರೀ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಜು 14 ನಮ್ಮ ಆಲೋಚನೆಗಳು ಶಕ್ತಿಯುತವಾದಷ್ಟು ಬದುಕಿನಲ್ಲಿ ಗಟ್ಟಿತನ ಮತ್ತು ಸವಾಲುಗಳನ್ನು ಎದುರಿಸುವ ಸಾಮರ್ಥ್ಯ ಹೆಚ್ಚಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಖೇರ್ಡ್ ಕೆ. ಗ್ರಾಮದ ನಾಗೇಂದ್ರಪ್ಪ ಭೂತೆ ಪರಿವಾರದ ವತಿಯಿಂದ ಆಯೋಜಿಸಿದ ಗುರುವಂದನೆ ಹಾಗೂ 851ನೇ ತುಲಾಭಾರ ಸಮಾರಂಭದ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಸಜ್ಜನರ ಸಾಂಗತ್ಯ, ಗುರುವಿನ ಸಾನಿಧ್ಯದಿಂದ ಪಡೆದ ಅನುಭವಗಳಿಂದ ಬದುಕಿನ ಪಾಠವನ್ನು ಯಶಸ್ವಿಯಾಗಿ ಓದಿ ಮುಗಿಸಿ ಭಗವಂತನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಲು ಸಾಧ್ಯವಾಗುತ್ತದೆ.

ಎಂತಹ ವಿಷಮ ಪರಿಸ್ಥಿತಿ ಬಂದರೂ ಜೀವನೋತ್ಸಾಹ ಕಳೆದುಕೊಳ್ಳಬಾರದು ನಮ್ಮ ಆಲೋಚನೆಗಳು ಶುಭ್ರವಾದಷ್ಟು ಬದುಕಿಗೆ ಹೊಳಪು ಬರುತ್ತದೆ.

ಹಾಗಾಗಿ ದುರಾಲೋಚನೆ ಯಾವತ್ತೂ ಸಲ್ಲದು, ಗರಿಬಿಚ್ಚಿ ಆಡುವ ನವಿಲಿನಂತೆ ಆಲೋಚನೆಯ ಪರಿ ಸಂತಸದಾಯಕವಾಗಿದ್ದು, ಉತ್ಸಾಹದ ಚೆಲುಮೆ ಬತ್ತದಂತೆ ಧನಾತ್ಮಕ ಚಿಂತನಾ ಶೈಲಿ ರೂಢಿಸಿಕೊಳ್ಳಬೇಕು ಎಂದು ನುಡಿದರು.

ಭೂತೆ ಪರಿವಾರ ಹಾಗೂ ಎಲ್ಲಾ ಭಕ್ತರಿಗೂ ಸನ್ಮಂಗಳವಾಗಲಿ ಎಂದು ಶುಭ ಹಾರೈಸಿದರು. ಈ ಸಂದರ್ಭದಲ್ಲಿ

, ಬಸವಂತರಾವ ದೇಶಮುಖ ಜಿಲ್ಲಾ ಪಂಚಾಯಿತಿ ನಿವೃತ್ತ ಉಪ ಕಾರ್ಯದರ್ಶಿ ಬಿ. ಕೆ. ಹಿರೇಮಠ, ಚಂದ್ರಕಾಂತ ಘಂಟಿ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ನಾಗೇಂದ್ರಪ್ಪ ಭೂತೆ ಸ್ವಾಗತಿಸಿದರು. ಕಾರ್ತಿಕ ಸ್ವಾಮಿ ಯಲ್ಲದಗುಂಡಿ ಪ್ರಾರ್ಥನ ಗೀತೆ. ಸಂತೋಷ ಅಳ್ಳೆ ನಿರೂಪಿಸಿದರು. ಸೂರ್ಯಕಾಂತ ಭೂತೆ ವಂದಿಸಿದರು.

## ಅಸ್ಲಾಂಮಿಯಾ ಅವರ 58ನೇ ಜನ್ಮ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಸಮಾಜದಲ್ಲಿ ಪ್ರತಿಯೊಬ್ಬರಿಗೂ ಪ್ರೀತಿ ಮಮತೆ ತೋರಿಸುವ ಗುಣ ಮಹಮ್ಮದ್ ಅಸ್ಲಾಂಮಿಯಾ ಹೊಂದಿದ್ದಾರೆ ಎಂದು ಪಟ್ಟಣದಲ್ಲಿ ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಅವರ 58ನೇ ವರ್ಷದ ಜನ್ಮ ದಿನಾಚರಣೆಯಲ್ಲಿ ಪತ್ರಕರ್ತ ರಾಜಕುಮಾರ ಆರ್. ಹಡಪದ ಮಾತನಾಡುತ್ತ ತಿಳಿಸಿದರು. ಅಸ್ಲಾಂಮಿಯಾ ಅವರು ನಿಸ್ವಾರ್ಥದಿಂದ ಸಮಾಜ ಸೇವೆ ಮಾಡುತ್ತಿರುವುದು ಶ್ಲಾಘನೀಯವಾಗಿದೆ. ಅವರ ಜೀವನದಲ್ಲಿ ಇನ್ನೂ ಉನ್ನತ ಮಟ್ಟಕ್ಕೆ ಹೋಗಿ ಬಡ ಜನರ ಸೇವೆ ಮಾಡಲಿ ಎಂದರು. ಪರಿಸರ ಮತ್ತು ಮಕ್ಕಳನ್ನು ಬಹಳ ಕಾಳಜಿಯಿಂದ ಪ್ರೀತಿಸುತ್ತಾರೆ, ಇವರ ಹತ್ತಿರ ಒಂದು ಬಾರಿ ಒಬ್ಬ ವ್ಯಕ್ತಿ ಬಂದರೆ ಪುನಃ ಮತ್ತೆ ಬರಬೇಕು ಎಂದು ಅನಿಸುತ್ತದೆ. ಅಷ್ಟೊಂದು ಪ್ರೀತಿ ಮಮತೆಯಿಂದ ಮಾತನಾಡುವುದು ನಿಜವಾಗಿಯೂ ಹೆಮ್ಮೆ ಪಡುವಂತಿದೆ ಎಂದು ಹೇಳಿದರು. ಮಹಮ್ಮದ್ ಅಸ್ಲಾಂಮಿಯಾ ಮಾತನಾಡಿ, ನನ್ನ ಹುಟ್ಟು ಹಬ್ಬವನ್ನು ಆಚರಣೆ ಮಾಡುತ್ತಿರುವುದು ನನ್ನಗೆ ತುಂಬಾ ಖುಷಿ ತಂದಿದೆ. ನಿಮ್ಮೆಲ್ಲರ ಪ್ರೀತಿ, ವಿಶ್ವಾಸ, ಸಹಕಾರ ನನ್ನೊಂದಿಗೆ ಸದಾ ಕಾಲ ಹೀಗೆ ಇರಲಿ, ನಿಮ್ಮೆಲ್ಲರ ಪ್ರೀತಿ ವಿಶ್ವಾಸ ಸಹಕಾರದಿಂದ ನನ್ನಗೆ ಅನೇಕ ಪ್ರಶಸ್ತಿಗಳು ದೊರಕಿವೆ ಎಂದು ಸಂತಸ ವ್ಯಕ್ತಪಡಿಸಿದ್ದರು. ಈ ಸಂದರ್ಭದಲ್ಲಿ ಅವರ ಸುಪುತ್ರ ಮಹಮ್ಮದ್ ಅಬ್ದುಲ್ ಮತಿನ ಶಾದಬ್ ಇಂಜಿನಿಯರ್, ಪತ್ರಕರ್ತರಾದ ಸೈಯದ್ ಅಜೀಮ, ಖಾಜಾಮಿಯಾ ಶೇರಿಕಾರ್, ಮಹಮ್ಮದ್ ಅಹ್ಮದ್, ಮುಜೀಬ್, ಅಭಿಷೇಕ್ ಮುಸ್ತರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ರಾಯಚೂರಲ್ಲಿ ಒಳಚರಂಡಿ ನಿರ್ಮಾಣ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ: ಜಿಲ್ಲಾಧಿಕಾರಿ ನಿತೀಶ್ ಕೆ.



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 14- ರಾಯಚೂರು ಮಹಾನಗರದ ವ್ಯಾಪ್ತಿಯ ತಗ್ಗು ಪ್ರದೇಶಗಳ ಮಳೆ ನೀರು ಒಳಚರಂಡಿ ನಿರ್ಮಾಣ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ದೊರೆತಿದ್ದು, ಲೋಕೋಪಯೋಗಿ ಇಲಾಖೆ, ರಾಯಚೂರು ವಿಭಾಗದಿಂದ ಟೆಂಡರ್ ಸಹ ಕರೆಯಲಾಗಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ತಿಳಿಸಿದ್ದಾರೆ.

ರಾಯಚೂರು ಮಹಾನಗರದ ವ್ಯಾಪ್ತಿಯಲ್ಲಿ ಹೆಚ್ಚು ಮಳೆಯಾದಲ್ಲಿ ಚರಂಡಿಯ ಕೊರತೆಯಿಂದ ಪ್ರತಿ-ಕೂಲ ಪ್ರವಾಹಗಳು ಮತ್ತು ಅತಿ ಹೆಚ್ಚು ನಷ್ಟಗಳು ಉಂಟಾಗುತ್ತದೆ. ಈ ಪ್ರವಾಹದಿಂದ ಆರ್ಥಿಕ, ಸಾಮಾಜಿಕ, ಆರೋಗ್ಯ ಹಾಗೂ ಪರಿಸರದ ಮೇಲೆ ಅನೇಕ ರೀತಿಯ ಪ್ರತಿಕೂಲ ಪರಿಣಾಮಗಳು ಉಂಟಾಗುತ್ತದೆ.

ಬಹಳ ವರ್ಷಗಳಿಂದ ರಾಯಚೂರು ಮಹಾನಗರದ ವ್ಯಾಪ್ತಿಯ ತಗ್ಗು ಪ್ರದೇಶದ ಏರಿಯಾಗಳಲ್ಲಿ ಮಳೆಗಾಲದ ಸಂದರ್ಭದಲ್ಲಿ ಹೆಚ್ಚು ಮಳೆಯಾದಲ್ಲಿ ನಾಗರಿಕರು ವಾಸಿಸುವ ಮನೆಗಳಿಗೆ ಮಳೆ ನೀರು ನುಗ್ಗಿ ಅಪಾರ ಪ್ರಮಾಣದ ನಷ್ಟ ಉಂಟಾಗುತ್ತದೆ. ಈ ಸಮಸ್ಯೆಯನ್ನು ಬಗೆಹರಿಸಿ ಶಾಶ್ವತ ಪರಿಹಾರ ಕಂಡುಕೊಳ್ಳವುದು ಅತಿ ಅವಶ್ಯವಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ರಾಜ್ಯ ವಿಪತ್ತು ಉಪಶಮನ ನಿಧಿಯ ಮಾರ್ಗಸೂಚಿಗಳನ್ವಯ ರಾಯಚೂರು ಮಹಾನಗರ ವ್ಯಾಪ್ತಿಯ ತಗ್ಗು ಪ್ರದೇಶಗಳ ಮಳೆ ನೀರು ಒಳಚರಂಡಿ ನಿರ್ಮಾಣ ರೂ. 16.61 ಕೋಟಿಗಳ ಕಾಮಗಾರಿಗಳನ್ನು ಲೋಕೋಪಯೋಗಿ ಇಲಾಖೆ, ರಾಯಚೂರು ವಿಭಾಗದ ಮುಖಾಂತರ ಕೈಗೊಳ್ಳಲು ಮಾನ್ಯ ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಅದರಂತೆ ಮಾನ್ಯ ಸರಕಾರದಿಂದ ಈ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ದೊರೆತಿದ್ದು, ಲೋಕೋಪಯೋಗಿ ಇಲಾಖೆಯಿಂದ ಕಾಮಗಾರಿಗೆ ಟೆಂಡರ್ ಕರೆಯಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

## ಇಲಾಖೆಯ ಅಧೀಕೃತ ಆದೇಶವಿಲ್ಲದೆ ಶಾಲೆಯ ಸಮಯದಲ್ಲಿ ಸಭೆ ಸಮಾರಂಭ ಮಾಡುವಂತಿಲ್ಲ:- ಗುಡಾಳ್

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಹುಮನಾಬಾದ ಹಾಗೂ ಚಿಟಗುಪ್ಪ ತಾಲ್ಲೂಕಿನ ಎಲ್ಲಾ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಯಾವುದೇ ತರಬೇತಿ, ಸಭೆ ಸಮಾರಂಭ ಹಾಗೂ ಕಾರ್ಯಕ್ರಮಗಳು ಇಲಾಖೆಯ ಅಧೀಕೃತ ಆದೇಶವಿಲ್ಲದೆ ಶಾಲಾ ಸಮಯದಲ್ಲಿ ನಡೆಸಬಾರದು, ಅಲ್ಲದೆ ಬೇರೆ ಸಭೆ ಸಮಾರಂಭಗಳಲ್ಲಿ ಶಿಕ್ಷಕರು ಭಾಗವಹಿಸಬಾರದು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ವೆಂಕಟೇಶ ಗುಡಾಳ ತಿಳಿಸಿದ್ದಾರೆ. ಭಾನುವಾರ ಪತ್ರಿಕಾ ಪ್ರಕಟಣೆ ನೀಡಿದ ಅವರು, ಶಾಲಾ ಸಮಯದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಕಛೇರಿಗೆ ಭೇಟಿ ನೀಡುವಂತಿಲ್ಲ. ಕಛೇರಿಯ ಆಡಳಿತಾತ್ಮಕ ವಿಷಯಗಳಿದ್ದಾಗ ಮಾತ್ರ ಮುಖ್ಯ ಗುರುಗಳು ವಾಟ್ಸಪ್ ಮೂಲಕ ಸಂದೇಶ ಕಳಿಸಬೇಕು. ಕಛೇರಿಗೆ ಸಂಬಂಧಿಸಿದ ಕೆಲಸಗಳಿಗೆ ಶನಿವಾರದಂದು ಅದು ಕೂಡ ಶಾಲಾ ಅವಧಿಯ ನಂತರ ಅಗತ್ಯವಿದ್ದರೆ ಮಾತ್ರ ಭೇಟಿ ನೀಡಬೇಕು. ಶಾಲೆಗಳ ಉಸ್ತುವಾರಿ ಅಧಿಕಾರಿಗಳಾದ ಸಿ.ಆರ್.ಪಿ, ಬಿ.ಆರ್.ಪಿ, ಇ.ಸಿ. ಓ,ಬಿ.ಐ.ಇ.ಆರ್ ಸಿಬ್ಬಂದಿಯವರು ಕೂಡಾ ತಮ್ಮ ತಮ್ಮ ವ್ಯಾಪ್ತಿಯ ಶಾಲೆಗಳಿಗೆ ಪ್ರವಾಸ ಕೈಗೊಂಡು ಶಾಲಾ ಶೈಕ್ಷಣಿಕ ಚಟುವಟಿಕೆಗಳಲ್ಲಿ ಭಾಗವಹಿಸಬೇಕು. ಮುಖ್ಯವಾಗಿ ಶಾಲೆಗಳಲ್ಲಿ ಅಗತ್ಯ ಸಂದರ್ಭದಲ್ಲಿ ಮಾತ್ರ ಮುಖ್ಯೋಪಾಧ್ಯಾಯರನ್ನು ಹೊರತುಪಡಿಸಿ ಶಿಕ್ಷಕರಾಗಲಿ, ಸಿಬ್ಬಂದಿಗಳಾಗಲಿ ಮೊಬೈಲ್ ಬಳಕೆ ಮಾಡಬಾರದು, ಆದೇಶವನ್ನು ಉಲ್ಲಂಘಿಸಿ ಮೊಬೈಲ್ ಬಳಕೆ ಮಾಡಿದರೆ ಸಂಬಂಧಿಸಿದ ಶಿಕ್ಷಕ/ಸಿಬ್ಬಂದಿ ಮತ್ತು ಮುಖ್ಯಗುರುಗಳ ಮೇಲೆ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರವಾಸೋದ್ಯಮ ಆಯುಕ್ತ-ರಿಂದ ಮಂತ್ರಾಲಯ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 14-ಪ್ರವಾಸೋದ್ಯಮ ಇಲಾಖೆಯ ಆಯುಕ್ತರು ಹಾಗೂ ಕೆ.ಎಸ್.ಟಿ.ಡಿ.ಸಿಯ ವ್ಯವಸ್ಥಾಪಕ ನಿರ್ದೇಶಕರಾದ ಡಾ.ರಾಜೇಂದ್ರ ಕೆ.ವಿ. ಅವರು ಜುಲೈ 15ರಂದು ಆಂಧ್ರಪ್ರದೇಶದ ಕರ್ನೂಲ್ ಜಿಲ್ಲೆಯ ಮಂತ್ರಾಲಯಕ್ಕೆ ಪ್ರವಾಸ ಕೈಗೊಂಡಿದ್ದಾರೆ.

ಜುಲೈ 15ರಂದು ಬೆಳಗ್ಗೆ ರೈಲು ಮಾರ್ಗವಾಗಿ ಮಂತ್ರಾಲಯಕ್ಕೆ ಆಗಮಿಸಲಿರುವ ಆಯುಕ್ತರು, ಬೆಳಿಗ್ಗೆ 10 ಗಂಟೆಗೆ ಸಾರಿಗೆ ಮತ್ತು ಮುಜುರಾಯಿ ಇಲಾಖೆ ಸಚಿವರ ಅಧ್ಯಕ್ಷತೆಯಲ್ಲಿ ನಡೆಯುವ ಕರ್ನಾಟಕ ರಾಜ್ಯ ವಸತಿ ಗೃಹ ಕಟ್ಟಡದ ಸ್ಥಳ ಪರಿಶೀಲನೆ ಹಾಗೂ ಸಂಬಂಧಪಟ್ಟ ಅಧಿಕಾರಿಗಳ ಸಭೆಯಲ್ಲಿ ಭಾಗಿಯಾಗಲಿದ್ದಾರೆ. ರಾತ್ರಿ 8 ಗಂಟೆಗೆ ಮಂತ್ರಾಲಯದಿಂದ ನಿರ್ಗಮಿಸಿ ರಸ್ತೆ ಮೂಲಕ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ವಿವಿಧ ಖಾಲಿ ಹುದ್ದೆಗಳ ನೇಮಕಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 14 - ರಾಷ್ಟ್ರೀಯ ಆರೋಗ್ಯ ಅಭಿಯಾನ ಯೋಜನೆಯಡಿ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದಲ್ಲಿ ಗುತ್ತಿಗೆ ಆಧಾರದ ಮೇಲೆ ಹುದ್ದೆಗಳ ನೇಮಕಾತಿ ಮಾಡಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಲಿಂಗಸೂಗೂರು ತಾಲೂಕಿನಲ್ಲಿ ಮಾನಸಿಕ ಆರೋಗ್ಯ ಕಾರ್ಯಕ್ರಮಕ್ಕೆ ಮನೋವೈದ್ಯರು-01 ಹುದ್ದೆಗೆ ವೈದ್ಯಕೀಯ ಪದವೀಧರರು ಎಂ.ಬಿ.ಬಿ.ಎಸ್ ಮತ್ತು ಎಮ್.ಸಿ.ಐ ನಿಂದ ಮಾನ್ಯತೆ ಪಡೆದ ಸಂಸ್ಥೆಯಿಂದ ಮನೋವೈದ್ಯಶಾಸ್ತ್ರದಲ್ಲಿ ಎಂ.ಡಿ ಅಥವಾ ಡಿ.ಪಿ.ಎಮ್ ಪದವಿ ಹೊಂದಿರಬೇಕು. ಕಮ್ಯೂನಿಟಿ ನರ್ಸ್ -01 ಹುದ್ದೆಗೆ ಕರ್ನಾಟಕ ನರ್ಸಿಂಗ್ ಕೌನ್ಸಿಲ್ ಆಫ್ ಇಂಡಿಯಾದಿಂದ ಮಾನ್ಯತೆ ಪಡೆದ ಸಂಸ್ಥೆಯಿಂದ ನರ್ಸಿಂಗ್‌ನಲ್ಲಿ ಬಿ.ಎಸ್.ಸಿ ನರ್ಸಿಂಗ್ ಪದವಿ (ಮೊದಲ ಅಧ್ಯತೆ) ಅಥವಾ ಜನರಲ್ ನರ್ಸಿಂಗ್ (ಜಿ.ಎನ್. ಎಮ್) ಪದವಿ ಪಡೆದಿರಬೇಕು. ಆಪ್ತಸಮಾಲೋಚಕರು-01 ಹುದ್ದೆಗೆ ಸಮಾಜ ಸೇವಕರ ಸ್ನಾತಕೋತ್ತರ ಪದವಿ (ಎಂ. ಎಸ್.ಡಬ್ಲ್ಯೂ) ಪಡೆದಿರಬೇಕು. ಹಾಗೂ ಆಪ್ತಸಮಾಲೋಚಕರು ಒಂದು ಹುದ್ದೆಗೆ ಗೌರವಧನದ ಪ್ರಕಾರ ಸ್ವ-ಹಸ್ತಾಕ್ಷರದಿಂದ ಅರ್ಜಿಯನ್ನು ಭರ್ತಿಮಾಡಿ ಹಾಗೂ ಹುದ್ದೆಗೆ ಸಂಬಂಧಿಸಿದ ಎಲ್ಲಾ ದಾಖಲಾತಿಗಳೊಂದಿಗೆ ಎರಡು ಭಾವಚಿತ್ರದೊಂದಿಗೆ ಜುಲೈ 22ರ ಸಂಜೆ 5 ಗಂಟೆಯೊಳಗಾಗಿ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಕಾರ್ಯಾಲಯಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 8151896578ಗೆ ಸಂಪರ್ಕಿಸುವಂತೆ ಅಥವಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಾಲಯ ವಿಭಾಗವನ್ನು ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಶಿ ಶೆಂಬೆಳ್ಳಿಗೆ ಶ್ರೀ ಕುಮಾರ ಸ್ವಾಮಿ ಪತ್ರಿಕಾ ಭೂಷಣ ಪ್ರಶಸ್ತಿ: ಕೆಯುಡಬ್ಲ್ಯುಜೆ ಹರ್ಷ

ಮಲ್ಲಮ್ಮ ನುಡಿ ವಾರ್ತೆ

ಬೀದರ.ಜು.14:ಸಾಮಾಜಿಕ ಬದ್ಧತೆಯ ಪತ್ರಿಕಾ ಸೇವೆಗಾಗಿ ಪ್ರಜಾವಾಣಿ ದಿನಪತ್ರಿಕೆಯ ಬೀದರಜಿಲ್ಲಾವರದಿಗಾರರಾದ ಶಶಿಕಾಂತಶೆಂಬೆಳ್ಳಿಯವರನ್ನು" ಮಹಾತಪಸ್ವಿಶ್ರೀಕುಮಾರಸ್ವಾಮಿ ಪತ್ರಿಕಾ ಭೂಷಣ' ಪ್ರಶಸ್ತಿಗೆ ಆಯ್ಕೆಮಾಡಿದೆ. ಮಹಾಶೈವ ಧರ್ಮಪೀಠದ 2025 ನೇ ಸಾಲಿನ ಪತ್ರಿಕಾ ಭೂಷಣ ಪ್ರಶಸ್ತಿಗೆ ಶೆಂಬೆಳ್ಳಿ ಅವರನ್ನು ಆಯ್ಕೆ ಮಾಡಿದರು.

ಗಬ್ಬೂರಿನ ಮಹಾಶೈವ ಧರ್ಮಪೀಠದ ಪೀಠಾಧ್ಯಕ್ಷರಾದ ಶ್ರೀ ಮುಕ್ಕಣ್ಣ ಕರಿಗಾರ ಅವರ ಅಧ್ಯಕ್ಷತೆಯಲ್ಲಿ ಶನಿವಾರ ನಡೆದ ಮಹಾಶೈವ ಧರ್ಮಪೀಠದ ಸಾಂಸ್ಕೃತಿಕ ಸಮಿತಿಯು ' 2025 ನೇ ವರ್ಷದ ' ಮಹಾತಪಸ್ವಿಶ್ರೀಕುಮಾರಸ್ವಾಮಿ ಪತ್ರಿಕಾ ಭೂಷಣ ಪ್ರಶಸ್ತಿ' ಗೆ ಶೆಂಬೆಳ್ಳಿ ಅವರನ್ನು ಆಯ್ಕೆ ಮಾಡಿತು. ಪತ್ರಿಕಾ ಪ್ರಶಸ್ತಿ' ಪುರಸ್ಕೃತರ ಹೆಸರನ್ನು ಮುಂದಿನ ಸಭೆಯಲ್ಲಿ ಅಂತಿಮಗೊಳಿಸಲು ನಿರ್ಣಯಿಸಲಾಯಿತು.

ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಗಬ್ಬೂರು ಗ್ರಾಮದ ಮಹಾಶೈವ ಧರ್ಮಪೀಠವು ಪ್ರತಿವರ್ಷ ಪೀಠಾಧ್ಯಕ್ಷರಾದ ಶ್ರೀ ಮುಕ್ಕಣ್ಣ ಕರಿಗಾರ ಅವರ ಗುರುಗಳಾದ ಧಾರವಾಡದ ತಪೋವನದ ಮಹಾತಪಸ್ವಿ ಶ್ರೀ ಕುಮಾರಸ್ವಾಮಿಗಳವರ ಜನ್ಮದಿನೋತ್ಸವವಾದನೂಲಹುಣ್ಣಿಮೆಯ ದಿನದಂದು ' ಮಹಾಶೈವ ಗುರುಪೂರ್ಣಿಮೆ ಆಚರಿಸಿ,, ಪತ್ರಿಕಾ ಕ್ಷೇತ್ರದಲ್ಲಿ ಗಮನಾರ್ಹ ಸೇವೆ ಸಲ್ಲಿಸಿದ ವ್ಯಕ್ತಿಗಳನ್ನು ಗುರುತಿಸಿ ,ರಾಜ್ಯ ಮಟ್ಟದ ಪ್ರಶಸ್ತಿ ನೀಡಿ,ಗೌರವಿಸುತ್ತಿದೆ. ಪ್ರಜಾವಾಣಿ ಪತ್ರಿಕೆಯ ವರದಿಗಾರರಾಗಿ ರಾಜ್ಯದ ಹಲವು ಜಿಲ್ಲೆಗಳಲ್ಲಿ ಸೇವೆ ಸಲ್ಲಿಸಿ ಜನಪರ ಕಾಳಜಿಯೊಂದಿಗೆ ಬರೆಯುತ್ತ ಬದುಕುತ್ತ



ಪತ್ರಿಕಾ ಧರ್ಮವನ್ನು ಎತ್ತಿ ಹಿಡಿದಿರುವ ಬೀದರಿನ ಶಶಿಕಾಂತ ಶೆಂಬೆಳ್ಳಿಯವರನ್ನು 'ಮಹಾತಪಸ್ವಿ ಶ್ರೀ ಕುಮಾರಸ್ವಾಮಿ ಪತ್ರಿಕಾ ಭೂಷಣ ಪ್ರಶಸ್ತಿ' ಗೆ ಆಯ್ಕೆ ಮಾಡಲಾಗಿದೆ. ಮಹಾತಪಸ್ವಿ ಶ್ರೀ ಕುಮಾರಸ್ವಾಮಿ ಪತ್ರಿಕಾ ಭೂಷಣಪ್ರಶಸ್ತಿಯುಐವತ್ತೊಂದು ಸಾವಿರ ರೂಪಾಯಿ ನಗದು ಬಹುಮಾನ, ಸ್ಮರಣಿಕೆ ಮತ್ತು ಪ್ರಶಸ್ತಿ ಪತ್ರ ಒಳಗೊಂಡಿದೆ. ಅಗಸ್ಟ್ 09 ನೇ ತಾರೀಖಿನಂದು ಮಹಾಶೈವ ಧರ್ಮಪೀಠದ ಮಹಾತಪಸ್ವಿಶ್ರೀಕುಮಾರಸ್ವಾಮಿ ಸಭಾಭವನದಲ್ಲಿ ನಡೆಯುವ' ಮಹಾಶೈವ ಗುರುಪೂರ್ಣಿಮೆ' ಕಾರ್ಯಕ್ರಮದಲ್ಲಿ ಪ್ರಶಸ್ತಿ ಪುರಸ್ಕೃತರನ್ನು ಪ್ರಶಸ್ತಿ ನೀಡಿ ಗೌರವಿಸಲಾಗುತ್ತದೆ . ಪೀಠಾಧ್ಯಕ್ಷರಾದ ಶ್ರೀ ಮುಕ್ಕಣ್ಣ ಕರಿಗಾರ ಅವರ ಅಧ್ಯಕ್ಷತೆಯಲ್ಲಿ ನಡೆದ ಪ್ರಶಸ್ತಿ ಪುರಸ್ಕೃತರ ಆಯ್ಕೆ ಸಭೆಯಲ್ಲಿ ಮಹಾಶೈವ ಧರ್ಮಪೀಠ ಆಡಳಿತಾಧಿಕಾರಿ ತ್ರಯಂಬಕೇಶ, ಮಹಾಶೈವ ಧರ್ಮಪೀಠದ ಸಾಂಸ್ಕೃತಿಕ ಸಮಿತಿಯ ಕಾರ್ಯದರ್ಶಿ ಬಸವರಾಜ ಸಿನ್ನೂರು, ವಾರ್ತಾಧಿಕಾರಿ ಬಸವರಾಜ ಕರೆಗಾರ, ಸದಸ್ಯರುಗಳಾದ ಶರಣಪ್ಪಬೂದಿನಾಳ,ಬಾಬುಗೌಡ ಯಾದವಸುಲ್ತಾನಪುರ,ಷಣ್ಮುಖ ಹೂಗಾರ,ಪ್ರಕಾಶ ಪಾಟೀಲ್ ಶಾವಂತಗೇರಾ,ಮೃತ್ಯುಂಜಯ ಯಾದವ ಪಾಲ್ಗೊಂಡಿದ್ದರು.

*ಕೆಯುಡಬ್ಲ್ಯುಜೆ ಸಂತಸ*:– ಶಶಿಕಾಂತ ಶೆಂಬೆಳ್ಳಿ ಅವರು ಎರಡು ದಶಕಗಳಿಗೂ ಅಧಿಕ ವರ್ಷಗಳಿಂದ ನಿರ್ಭಿಡೆ ಹಾಗೂ ನಿಷ್ಪಕ್ಷಪಾತದಿಂದ ಮಾಡುತ್ತಿರುವ ಅವರ ಮಾಧ್ಯಮ ಸೇವೆ ಸರ್ಕಾರ ಹಾಗೂ ವಿವಿಧಸಂಘ,ಸಂಸ್ಥೆಗಳು ಗುರುತಿಸಿಪ್ರಶಸ್ತಿನೀಡುತ್ತಿರುವುದು ಬಹಳ ಸಂತೋಷದ ವಿಷಯ. ಅವರಿಗೆ ಪ್ರಶಸ್ತಿ ಬಂದಿರುವುದು ಅವರಕುಡುಂಬಕಷ್ಟೆ ಅಲ್ಲಿ ಇಡೀ ಪತ್ರಿಕಾ ಸಮೂಹಕ್ಕೆ ಹೆಮ್ಮೆ ಪಡುವ ವಿಷಯ. ಇಡೀ ಬೀದರ್ ಜಿಲ್ಲೆಯ ಕೀರ್ತಿ ಸಹ ಹೆಚ್ಚಾಗಲು ಇದು ಪ್ರಮುಖ ಕಾರಣವಾಗಿದೆ. ಪ್ರಶಸ್ತಿಗೆ ಭಾಜನರಾದ ಶಶಿಕಾಂತ ಶೆಂಬೆಳ್ಳಿಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಅಭಿನಂದಿಸುತ್ತದೆ. ಜೊತೆಗೆ ಪ್ರಶಸ್ತಿಗೆ ಆಯ್ಕೆ ಮಾಡಿದ ಗಬ್ಬೂರಿನ ಮಹಾಶೈವ ಧರ್ಮಪೀಠದ ಪೀಠಾಧ್ಯಕ್ಷರಾದ ಶ್ರೀ ಮುಕ್ಕಣ್ಣ ಕರಿಗಾರ ಹಾಗೂ ಆಯ್ಕೆ ಸಮಿತಿಗೂ ಸಂಘ ಪ್ರಕಟಣೆ ಮೂಲಕ ಕೃತಜ್ಞತೆ ಸಲ್ಲಿಸುತ್ತದೆ.

# ಭಿಕ್ಷಾಟನೆ: 19 ಜನರನ್ನು ರಕ್ಷಿಸಿದ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು.14: ಜಿಲ್ಲೆಯ ವಿವಿಧ ಸಾರ್ವಜನಿಕ ಸ್ಥಳಗಳಲ್ಲಿ ಭಿಕ್ಷಾಟನೆ ನಡೆಯುವ ಸ್ಥಳಗಳಲ್ಲಿ ಸ್ಥಳ ಪರಿಶೀಲನೆ ನಡೆಸಿ 19 ಜನರನ್ನು ರಕ್ಷಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ತಿಳಿಸಿದ್ದಾರೆ.

19 ಜನರಲ್ಲಿ 14 ಮಕ್ಕಳು ಅವರಲ್ಲಿ ಎರಡು ಮಕ್ಕಳಿಗೆ ಜಿಲ್ಲಾ ಆರೋಗ್ಯ ಕೇಂದ್ರ ಬೀದರ (ಬ್ರೀಮ್ಸ್) ಕೇಂದ್ರದಲ್ಲಿ ಆರೋಗ್ಯ ತಪಾಸಣೆಗಾಗಿ ದಾಖಲು ಮಾಡಲಾಗಿದೆ. 12 ಮಕ್ಕಳನ್ನು ಹಾಗೂ 03 ಜನ ಮಹಿಳೆಯರಿಗೆ, ಜಿಲ್ಲಾ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿನದಲ್ಲಿ ಬರುವ ಮಹಿಳಾ ಸಾಂತ್ವನ ಕೇಂದ್ರದಲ್ಲಿ ಇಡಲಾಗಿದೆ. ಹಾಗೂ 02 ಪುರುಷರಿಗೆ ಬೀದರ ನಗರಸಭೆ ವ್ಯಾಪ್ತಿಯಲ್ಲಿ ಬರುವಂತಹ ಪುನರ್ವಸತಿ ಕೇಂದ್ರದಲ್ಲಿ ಇಡಲಾಗಿರುತ್ತದೆ. ಜುಲೈ.13 ರಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರುಪಡಿಸಿ, ಅಪ್ತ ಸಮಾಲೋಚನೆ ಮಾಡಿ, 03–ಜನ ಮಹಿಳೆರೊಂದಿಗೆ ಮಕ್ಕಳನ್ನು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ವ್ಯಾಪ್ತಿಯ ಸಾಂತ್ವನ ಕೇಂದ್ರದಲ್ಲಿ ಇಡಲು ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಕರ್ನಾಟಕದ ನಗರ ಪ್ರದೇಶಗಳಲ್ಲಿ ಭಿಕ್ಷಾಟನೆ ಸಮಸ್ಯೆ ಸಾಮನ್ಯವಾಗಿರುತ್ತದೆ ಕೇಲವರಿಗೆ ನಿಜವಾಗಿಯು ಸಹಾಯಕ ಬೇಕಾಗಿದ್ದವರು ಇದ್ದವರು, ಹಲವರು ಸಂಘಟಿತ ಭಿಕ್ಷಾಟನೆ ಜಾಲದ ಭಾಗವಾಗಿದ್ದಾರೆ. ಇದು ಸಾಮಾಜಿಕ ಸಮಸ್ಯೆ ಮಾತ್ರ ವಲ್ಲದೆ ಆರೋಗ್ಯ ಶಿಷ್ಟಾಚಾರ ಮತ್ತು ಕಾನೂನು ವ್ಯವಸ್ಥೆ ಕುರಿತು ಪ್ರಶ್ನೆ ಎತ್ತುತ್ತದೆ. ಮುಂದುವರೆದು ಇದರಲ್ಲಿ ಹಲವಾರು ಸವಾಲುಗಳು ಎದುರಾಗುತ್ತಿದು, ವಿಶೇಷವಾಗಿ ನಿಜ ಭೀಕ್ಷಕ ಮತ್ತು ನಕಲಿ ಭಿಕ್ಷುಕ ಮಧ್ಯ ವ್ಯತ್ಯಾಸ ಮಾಡುವುದು ಕಷ್ಟ ಸಾಧ್ಯ. ಪುನ್: ಭಿಕ್ಷೆಗೆ ತಿರುಗುವ ಪ್ರರ್ವತಿ, ಸಂಘಟಿತ ಭಿಕ್ಷಾಟನೆ ಜಾಲ ಬೇದಿಸುವುದು, ಪುನರ್ವಸತಿ ಕಲ್ಪಿಸುವುದು ನಮ್ಮ ಸವಾಲುಗಳಾಗಿರುತ್ತವೆ,

ಬೀದರ ಜಿಲ್ಲೆಯಲ್ಲಿ ಪ್ರಮುಖ ಸರ್ವಾಜನಿಕ ಸ್ಥಳ ಹಾಗೂ ದೇವಾಸ್ಥನಗಳಲ್ಲಿ ಭಿಕ್ಷಾಟನೆಗೆ ಸಂಬಂಧಿಸಿದಂತೆ ಚಿಕ್ಕಕಂದಮ್ಮ ಮಕ್ಕಳನ್ನು ದಿನದ ಬಾಡಿಗೆ ಪಡೆದು ಭಿಕ್ಷಾಟನೆಯಲ್ಲಿ ತೊಡಗಿಸುವುದು, ಮಹಿಳೆಯರು ಹಸುಗೂಸುಗಳನ್ನುಬಳಸಿಕೊಂಡು ಭಿಕ್ಷೆಬೇಡುತ್ತಿರುವುದು ಜಿಲ್ಲೆಯಲ್ಲಿ ದಿನೆದಿನೆ ಹೆಚ್ಚಾಗುತ್ತಿರುವುದು ಕಂಡು ಬರುತ್ತಿರುವುದುರಿಂದ ಅವುಗಳಿಗೆ ಪ್ರಾಧಮಿಕ ಹಂತದಲ್ಲಿಯೆ ಸಂಘಟಿತ ಭಿಕ್ಷಾಟನೆಯ ಜಾಲಗಳ ಕಡಿವಾಣ ಹಾಕಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜುಲೈ.11 ರಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಭೆ ನಡೆಸಿ ಕರ್ನಾಟಕ ಭಿಕ್ಷಾಟನಾ ನಿಷೇಧ ಅಧಿನಿಯಮ 1975ರನ್ವಯ ಕರ್ನಾಟಕ ಭಿಕ್ಷಾಟನಾ ನಿಷೇಧ ಭಿಕ್ಷುಕರ ನಿಯಂತ್ರಣಕ್ಕಾಗಿ ಟಾಸ್ಕ್ ಫೊರ್ಸ್ ಸಮತಿ ಸಭೆ ಕರೆದು ಸಂಬಂಧ ಪಟ್ಟ ಅಧಿಕಾರಿಗಳಿಗೆ ಸರಕರದಿಂದ ವಹಿಸಲಾದ ಜವಾಬ್ದಾರಿಗಳನ್ನು ನಿಯಮಾನುಸಾರ ಕಟ್ಟುನಿಟ್ಟಾಗಿ ನಿರ್ವಹಿಸಲು ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಭಿಕ್ಷುಕರು ನಿಯಂತ್ರಣಕ್ಕೆ ಕೇವಲ ಕಾನೂನು ಪ್ರಾಯೋಗಿಕ ಕ್ರಮ ವಷ್ಟೆಸಾಕಾಗದು ಮಾನವಿಯತೆ, ಪುನರ್ವಸತಿ ಮತ್ತು ಸಮಾನ ಹಕ್ಕುಗಳು ನೀಡಲು ಸಮಗ್ರಕ್ರಮ ಅಗತ್ಯವಿದೆ. ಸರ್ಕಾರ, ಸಮಾಜ, ಸಂಘ / ಸಂಸ್ಥೆಗಳು ಹಾಗೂ ನಾಗರೀಕರು ಕೈಜೊಡಿಸಿದಾಗ ಶಾಶ್ವತ ಪರಿಹಾರ ಸಾಧ್ಯ ಹಾಗೂ ಆದುದರಿಂದ ಭಿಕ್ಷಾಟನೆ ಒಂದು ಗಂಭಿರ ಸಮಾಜಿಕ ಸಮಸ್ಯೆ ಅಲ್ಲದೆ ನಗರಗಳ ಸೌಕರ್ಯ ಮತ್ತು ಶಿಸ್ತಿಗೆ ಅಡ್ಡಿಯಾಗಿತ್ತಿರುವ ಪ್ರಕರಣವಾಗಿದೆ. ಕರ್ನಾಟಕ ಸರ್ಕಾರವು ಭಿಕ್ಷಾಟನೆಯನ್ನು ನಿಯಂತ್ರಣಕ್ಕೆ ಕರ್ನಾಟಕ ಭಿಕ್ಷಾಟನೆ ನಿಷೇಧ ಅಧಿನಿಯಮ 1975 ಈ ಕಾಯ್ದೆಯಂತೆ ಭಿಕ್ಷಾಟನೆ ಮಾಡುವುದು ನಿಷೇದಿಸಲಾಗಿದೆ. ಸಂಪತ್ತು ಇರುವ ಭಿಕ್ಷಾಕರನ್ನು ಹಾಗೂ ಬಾಲ ನ್ಯಾಯ ಕಾಯ್ದೆ 2015ರ ಪ್ರಕಾರ ಮಕ್ಕಳನ್ನು ಬಿಕ್ಷಾಟನೆಗೆ ಬಳಸಿದ್ದಲ್ಲಿ 3 ವರ್ಷ ಜೈಲು ಹಾಗೂ 1 ಲಕ್ಷ ದಂಡ ಮತ್ತು ಹಂತವರ ವಿರುದ್ಧ ಕಠಿಣ ಶಿಕ್ಷೆ ಕೈಗೊಳ್ಳಲಾಗುವುದು ಹಾಗೂ ಸಾರ್ವಜನಿಕ ಸ್ಥಳದಲ್ಲಿ ಯಾರಾದರೂ ಭಿಕ್ಷಾಟನೆಯಲ್ಲಿ ತೊಡಗಿರುವುದು ಕಂಡುಬಂದರೆ ಕೂಡಲೇ 1098 ಗೆ ಕರೆ ಮಾಹಿತಿ ನೀಡಬೇಕೆಂದು ಸಮಾಜ ಕಲ್ಯಾಣ ಇಲಾಖೆ ಉಪನಿರದೇಶಕರು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಬೇಟರಮೆಂಟ ಫೌಡೇಶನ್ ವತಿಯಿಂದ ವಿವಿಧ ಸ್ಥಳಗಳಲ್ಲಿ ಭಿಕ್ಷೆಯಾಟನೆಯಲ್ಲಿ ತೊಡಗಿರುವರ ಸುಮಾರು 70 ಜರರಿಗೆ ರೇಷನ್ ಸರಬರಾಜು ಮಾಡುವ ಕಾರ್ಯದಲ್ಲಿ ನಿರತರಾಗಿದ್ದಾರೆ. ಅದರಂತೆ ಜಿಲ್ಲೆಯ ಇನ್ನಿತರ ಸಂಸ್ಥೆಗಳು ಈ ಕಾರ್ಯ–ಕ್ಕೆ ಮುಂದೆ ಬರಬೇಕೆಂದು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ತಿಳಿಸಿದ್ದಾರೆ.

# ಮಹಿಳೆಯ ದೈಹಿಕ, ಮಾನಸಿಕ ಆರೋಗ್ಯ ಸ್ಥಿರತೆಯು ತಾಯ್ತನಕ್ಕೆ ಸರಿಯಾದ ವಯಸ್ಸು:ಡಾ.ದಿಲೀಪ ಡೋಂಗೆ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಜು.14: ಮಹಿಳೆಯ ದೈಹಿಕ ಮತ್ತು ಮಾನಸಿಕ ಆರೋಗ್ಯಸ್ಥಿರತೆಯು ತಾಯ್ತನಕ್ಕೆ ಸರಿಯಾದ ವಯಸ್ಸು ಎಂದು ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ.ದಿಲೀಪ ಡೋಂಗ್ರೆ ತಿಳಿಸಿದರು.

ಅವರು ಸೋಮವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕಾರ್ಯಾಲಯದ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಜನಸಂಖ್ಯಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪ್ರಕೃತಿಯ ಸಂಪನ್ಮೂಲಗಳು ಸೀಮಿತವಾಗಿದ್ದುದರಿಂದ ಜನಸಂಖ್ಯೆಯು ಕೂಡ ಸೀಮಿತವಾಗಿರಬೇಕಾಗುತ್ತದೆ. ಜನಸಂಖ್ಯಾ ಸ್ಫೋಟವನ್ನು ತಡೆಗಟ್ಟಬೇಕಾದರೆ ಪ್ರಕೃತಿಯ ಸಂಪನ್ಮೂಲಗಳನ್ನು ಹೆಚ್ಚಿಸಲು ಸಾಧ್ಯಾವಿಲ್ಲ, ಜನಸಂಖ್ಯೆ ನಿಯಂತ್ರಿಸುವುದೊಂದೆ ಏಕ ಮಾತ್ರ ಮಾರ್ಗವಾಗಿರುತ್ತದೆ ಹಾಗೂ ಜನರು ಎಚ್ಚೆತ್ತು–ಕೊಂಡು ಕುಟುಂಬ ಕಲ್ಯಾಣ ವಿಧಾನಗಳನ್ನು ಉಪಯೋಗಿಸಿ ಕುಟುಂಬದ ಸ್ಥಿರತೆಯನ್ನು ಕಾಪಾಡಲು ಕರೆ ನೀಡಿದರು.

ಮಹಿಳೆಯರಿಗೆ ಕುಟುಂಬ ಕಲ್ಯಾಣ ಶಸ್ತ್ರಚಿಕಿತ್ಸಾ ಶಿಬಿರಗಳನ್ನು ಎಲ್ಲಾ ತಾಲೂಕಾ ಸಾರ್ವಜನಿಕ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ ಹಾಗೂ 100 ಹಾಸಿಗೆಗಳ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಬೀದರ ಇಲ್ಲಿ ಆಯೋಜಿಸಲಾಗಿದೆ ಹಾಗೂ ತಾತ್ಕಾಲಿಕ ವಿಧಾನಗಳಾದ ಐ.ಯು.ಸಿ.ಡಿ,ಪಿ.ಪಿ.ಐ.ಯು.ಸಿ.ಡಿ, ಅಂತರಾ ಚುಚ್ಚುಮದ್ದು ಜಿಲ್ಲೆಯ ಎಲ್ಲಾ ಆರೋಗ್ಯ ಸಂಸ್ಥೆಗಳಲ್ಲಿ ಉಚಿತವಾಗಿ ಲಭ್ಯವಿದ್ದು ಆಶಾ ಕಾರ್ಯಕರ್ತೆಯರು ಛಾಯಾ ಮಾತ್ರೆ, ಕಾಂಡೋಮ್ಸ್, ಮಾಲಾ–ಎನ್ ಮಾತ್ರೆಗಳನ್ನು ಅರ್ಹ ಫಲಾನುಭವಿಗಳ ಮನೆ ಬಾಗಿಲವರೆಗೆ ತಲುಪಿಸುವ ಕೆಲಸ ಮಾಡುತ್ತಿದ್ದಾರೆ. ಹಾಗೂ ನೂತನ ತಾತ್ಕಾಲಿಕ ಗರ್ಭ ನಿರೋಧಕ ಸಬ್ ಡರ್ಮಲ್ ಸಿಂಗಲ್ ರಾಡ್ ಇಂಪ್ಲಾಂಟ್ ಸೇವೆಗಳು ಬ್ರೀಮ್ಸ್ ಬೋಧಕ ಆಸ್ಪತ್ರೆ ಬೀದರ, 100 ಹಾಸಿಗೆಗಳ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಬೀದರ ಮತ್ತು ಬಸವಕಲ್ಯಾಣ ಹಾಗೂ ತಾಲೂಕಾ ಸಾರ್ವಜನಿಕ ಆಸ್ಪತ್ರೆ ಔರಾದನಲ್ಲಿ ಲಭ್ಯವಿದೆ. ಜನನ ಮತ್ತು ಮರಣ ಕಡ್ಡಾಯವಾಗಿ 21 ದಿನದ ಒಳಗೆ ನೊಂದಣಿ ಮಾಡಿಕೊಳ್ಳುವಂತೆ ತಿಳಿಸಿದರು.

ಕಾರ್ಯಕ್ರಮಕ್ಕೂ ಮುಂಚಿತವಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ. ಧ್ಯಾನೇಶ್ವರ ನಿರಗುಡೆ ಹಾಗೂ ಎಲ್ಲಾ ಕಾರ್ಯಕ್ರಮಾನುಷ್ಠಾನ ಅಧಿಕಾರಿಗಳು, ತಾಲೂಕಾ ಆರೋಗ್ಯ ಅಧಿಕಾರಿಗಳೊಂದಿಗೆ ವಿಶ್ವ ಜನಸಂಖ್ಯಾ ದಿನಾಚರಣೆ ನಿಮಿತ್ಯ ಹಮ್ಮಿಕೊಂಡಿದ್ದ ಜನಜಾಗೃತಿ ಜಾಥಾಗೆ ರಿಬ್ಬನ್ ಕತ್ತರಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಬ್ರೀಮ್ಸ್ ಬೋಧಕ ಆಸ್ಪತ್ರೆಯ ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಅಹೆಮದುದ್ದಿನ್, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಶಿವಶಂಕರ ಬಿ., ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಡಾ.ರಾಜಶೇಖರ ಪಾಟೀಲ, ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ಅನೀಲ ಚಿಂತಾಮನಿ, ಜಿಲ್ಲಾ ಕುಷ್ಠರೋಗ ನಿಯಂತ್ರಣಾಧಿಕಾರಿ ಡಾ.ಕಿರಣ ಪಾಟೀಲ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಶಂಕ್ರೆಪ್ಪಾ ಬೊಮ್ಮ, ನಗರ ಪ್ರಾಥಮಿಕ ಆರೋಗ್ಯ ಕೇಮದ್ರದ ಪೊಲೀಸ್ ಹೆಲ್ತ ಸೆಂಟರನ ಆಡಳಿತಾಧಿಕಾರಿ ಡಾ.ದೇವಕಿ ಖಂಡ್ರೆ, ಜಿಲ್ಲಾ ಸಾಂಕಿಕ ಅಧಿಕಾರಿ ಸುವರ್ಣಾ, ಎಫ್.ಪಿ.ಎ.ಶಾಖೆಯ ವ್ಯವಸ್ಥಾಪಕ ಶ್ರೀನಿವಾಸ ಬಿರಾದಾರ, ತಾಲೂಕಾ ಆರೋಗ್ಯ ಅಧಿಕಾರಿ ಡಾ.ಸಂಗಾರೆಡ್ಡಿ, ಡಾ.ಲಕ್ಷಿ ??ೀಕಾಂತ ವಲ್ಲೇಪೂರೆ, ಮಹೇಶ್‌ರೆಡ್ಡಿ, ರಾಬರ್ಟ, ರೂಸ್ವೆಲ್ಟ್, ವೆಂಟಕರಮಣ, ಬಿಲಾಲ್, ಸೋಹೇಲ್, ಅನುರಾಧಾ, ತುಳಸಾಬಾಯಿ, ಶಾಲೂಬಾಯಿ, ಶಿವಾನಂದ ಹಿರೆಮಠ ಸೇರಿದಂತೆ ಕಿರಿಯ ಆರೋಗ್ಯ ಸಹಾಯಕಿ (ಮ) ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕಚೇರಿಯ ಸಿಬ್ಬಂದಿವರ್ಗದವರು ಉಪಸ್ಥಿತರಿದ್ದರು.

# ಅಂಬೇಡ್ಕರ ವಿಚಾರಧಾರೆ ವಿಶ್ವಕ್ಕೆ ಮಾದರಿ:ಸಚಿವ ಈಶ್ವರ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.14: ಡಾ.ಬಿ.ಆರ್. ಅಂಬೇಡ್ಕರ ಅವರ ವಿಚಾರಧಾರೆ ಇಡೀ ವಿಶ್ವಕ್ಕೆ ಮಾದರಿಯಾಗಿವೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು. ತಾಲೂಕಿನ ಬಾಜೋಳಗಾ ಗ್ರಾಮದಲ್ಲಿ ಶನಿವಾರ ಆಯೋಜಿಸಿದ್ದ ಬಿ.ಆರ್.ಅಂಬೇಡ್ಕರ ಪುತ್ಥಳಿ ಅನಾವರಣಗೊಳಿಸಿ ಅವರು ಮಾತನಾಡಿದರು.

ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರು ಭಾರತದ ಸಂವಿಧಾನ ರಚಿಸಿ ಸಮಾಜದಲ್ಲಿ ಸಮಾನತೆ, ನ್ಯಾಯ ಮತ್ತು ಬಾಂಧವ್ಯಕ್ಕೆ ಆದರ್ಶ ಸ್ಥಾಪಿಸಿದ ಮಹಾನ್ ನಾಯಕರು. ಅವರ ಚಿಂತನೆಗಳು ನೂರಾರು ವರ್ಷಗಳವರೆಗೆ ಸಮಾಜದ ಬೆಳವಣಿಗೆಗೆ ದಾರಿ ದೀಪವಾಗುತ್ತವೆ. ಅವರ ಆದರ್ಶಗಳನ್ನು ಪ್ರತಿಯೊಬ್ಬರು ಪಾಲಿಸಿದರೇ ಬದುಕು ಸುಂದರವಾಗಿ ರೂಪಗೊಳ್ಳಲಿದೆ ಎಂದು ತಿಳಿಸಿದರು. ಸಂಸದ ಸಾಗರ ಖಂಡ್ರೆ ಮಾತನಾಡಿ, ಡಾ.ಬಿ.ಆರ್.ಅಂಬೇಡ್ಕರ್ ಅವರು ನಮ್ಮ ದೇಶಕ್ಕೆ ಕೊಟ್ಟ ಕೊಡುಗೆ ಅಮೂಲ್ಯವಾಗಿದೆ. ಸಂವಿಧಾನ ರಚನೆ ಮೂಲಕ ಪ್ರಜಾಪ್ರಭುತ್ವದ ಮೂಲಭೂತ ಅಸ್ತಿತ್ವಕ್ಕೆ ಭದ್ರಬುನಾದಿ ಹಾಕಿದ ಮಹಾತ್ಮ. ಅವರ ತತ್ವಗಳು ಇಂದು ಕೂಡ ಯುವ ಪೀಳಿಗೆಗೆ ಪ್ರೇರಣೆಯಾಗಬೇಕು ಎಂದು ತಿಳಿಸಿದರು.

ಭಂತೇಜಿ, ಬೆಲ್ದಾಳ ಶರಣ–ರು, ಹಿರೇಮಠ ಸಂಸ್ಥಾನದ ಮಹಾಲಿಂಗ ಸ್ವಾಮೀಜಿ ಸೇರಿದಂತೆ ಮುಂತಾದವರು ಇದ್ದರು.

# ಸತ್ಕಾರ್ಯಗಳಿಂದ ಜೀವನ ಸಾರ್ಥಕ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.14: ವಾರಂಟಿ, ಗ್ಯಾರಂಟಿ ಇಲ್ಲದ ಮಾನವನ ಜೀವನದಲ್ಲಿ ಸದಾ ಒಳ್ಳೆಯ ಕೆಲಸಕಾರ್ಯಗಳನ್ನು ಮಾಡುವ ಮೂಲಕ ಬದುಕು ಸಾರ್ಥಕ ಪಡಿಸಿಕೊಳ್ಳಬೇಕು ಎಂದು ಚಾಮರಾಜನಗರ ಮರಿಯಾಲ ಮೃಘರಾಜೇಂದ್ರ ಮಹಾ ಸಂಸ್ಥಾನ ಮಠದ ಇಮ್ಮಡಿ ಮೃಘರಾಜೇಂದ್ರ ಸ್ವಾಮೀಜಿ ಹೇಳಿದರು.

ತಾಲೂಕಿನ ಖಟಕ್ ಚಿಂಚೋಳಿ ಗ್ರಾಮದ ಸಿದ್ದಮ್ಮ ಕಲ್ಯಾಣರಾವ ಪಾಟೀಲ್ ಗುರುಕುಲ ಪ್ರಾಥಮಿಕ ಶಾಲೆಯಲ್ಲಿ ಭಾನುವಾರ ಆಯೋಜಿಸಿದ್ದ ಸಿದ್ದಮ್ಮ ಕಲ್ಯಾಣರಾವ ಪುಣ್ಯಸ್ಮರಣೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಮನುಷ್ಯನಾಗಿ ಹುಟ್ಟುವುದೇ ವಿಶೇಷವಾಗಿದ್ದು ಏನಾದರೂ ಸಾಧನೆ ಮಾಡುವುದು ಅನಿವಾರ್ಯ ಮತ್ತು ಅವಶ್ಯಕ. ಸತ್ಕಾರ್ಯ ಸದಾಚಾರಗಳನ್ನು ಹೊಂದುವ ಮೂಲಕ ಅನಶ್ಚಿತ ಬದುಕಿನಲ್ಲಿ ಸಾರ್ಥಕತೆ ಕಂಡು ಕೊಳ್ಳಬೇಕು ಎಂದು ತಿಳಿಸಿದರು.

ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿ, ಪ್ರತಿಯೊಬ್ಬರಲ್ಲಿ ಒಳ್ಳೆಯ ಕಾರ್ಯ ಮಾಡುವ ತುಡಿತ ಇರಬೇಕು ಎಂದರು.

ನೀಲಮ್ಮ ತಾಯಿ ಅಧ್ಯಕ್ಷತೆ ವಹಿಸಿದ್ದರು. ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ ಪಾಟೀಲ್ ಮುಗನೂರ ಸೇರಿದಂತೆ ಹಲವರು ಇದ್ದರು.

ಬಸಮ್ಮ, ಪ್ರತೀಕ್ಷಾ, ಸ್ಫೂರ್ತಿ ಪ್ರಾರ್ಥನೆಗೀತೆ ನಡೆಸಿಕೊಟ್ಟರು. ಶಿಲ್ಪಾ ಲಾಡವಂತೆ ಸ್ವಾಗತಿಸಿದರು. ಶಿವಶಂಕರ ಹಡಪದ ನಿರೂಪಿಸಿದರು. ಗುರುರಾಜ ಹೌಂಸಿ ವಂದಿಸಿದರು.

### ಬಳ್ಳಾರಿಯಲ್ಲಿ ಶಕ್ತಿ ಯೋಜನೆಯ ಸ್ತ್ರೀ ಸಬಲೀಕರಣದ ಸಂಭ್ರಮ

## ಶಕ್ತಿ ಯೋಜನೆಯಿಂದ ಮಹಿಳೆಯರ ಉತ್ತೇಜನಕ್ಕೆ ಹೆಚ್ಚು ಶಕ್ತಿ: ಮೇಯರ್ ಮುಲ್ಲಂಗಿ ನಂದೀಶ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.14–ದುಡಿಯುವ ಬಡವರ್ಗದ ಮಹಿಳೆಯರಿಗೆ ಆತ್ಮಸ್ಥೈರ್ಯ ತುಂಬಲು ನೂತನ ಸರಕಾರದ ಗ್ಯಾರಂಟಿ ಯೋಜನೆಗಳಲ್ಲೊಂದಾದ ಶಕ್ತಿ ಯೋಜನೆಯು ಮಹಿಳೆಯರಿಗೆ ಹೆಚ್ಚು ಶಕ್ತಿ ತುಂಬಿ ಯಶಸ್ವಿಯಾಗಿ ಮುಂದುವರೆಯುತ್ತಿದೆ ಎಂದು ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್ ಅವರು ಹೇಳಿದರು.

ಕೇಂದ್ರೀಯ ಬಸ್ ನಿಲ್ದಾಣದಲ್ಲಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಬಳ್ಳಾರಿ ವಿಭಾಗ ಮತ್ತು ಪಂಚ ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಸಮಿತಿ ವತಿಯಿಂದ ನಗರದ ಕೇಂದ್ರಿಯ ಬಸ್ ನಿಲ್ದಾಣದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಶಕ್ತಿ ಯೋಜನೆಯ "500 ಕೋಟಿ ಮಹಿಳೆಯರ ಪ್ರಯಾಣದ ಸಂಭ್ರಮಾಚರಣೆ"ಗೆ ಮಹಿಳೆಯರಿಗೆ ಸಿಹಿ ಹಂಚುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಸರಕಾರದ ಗ್ಯಾರೆಂಟಿ ಯೋಜನೆಗಳಲ್ಲೊಂದಾದ ಶಕ್ತಿ ಯೋಜನೆ ಅಡಿಯಲ್ಲಿ ಇಲ್ಲಿಯವರೆಗೆ 500 ಕೋಟಿ ಮಹಿಳೆಯರು ಪ್ರಯಾಣಿಸಿರುವುದು ಸಂಭ್ರಮದ ವಿಷಯವಾಗಿದ್ದು, ಮಹಿಳೆಯರಿಗೆ ಉತ್ತೇಜನ ನೀಡಿದೆ. ಸರ್ಕಾರದ ಪಂಚ ಗ್ಯಾರೆಂಟಿ ಯೋಜನೆಗಳು ಜಾರಿಯಾಗಿ ಯಶಸ್ವಿಯಾದ ಹಿನ್ನೆಲೆಯಲ್ಲಿ ಬೇರೆ–ಬೇರೆ ರಾಜ್ಯಗಳಿಗೂ ಕೂಡ ಮಾದರಿಯಾಗಿದೆ ಎಂದು ಹೇಳಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಕೆ.ಇ.ಚಿದಾನಂದಪ್ಪ ಅವರು ಮಾತನಾಡಿ, ಸರಕಾರದ ಗ್ಯಾರಂಟಿ ಯೋಜನೆಗಳ ಬಗ್ಗೆ ಹಲವರು ಟೀಕೆ–ಟಿಪ್ಪಣಿ ಮಾಡಿದ್ದರು. ಆದರೆ ರಾಜ್ಯ ಸರಕಾರವು ಕೊಟ್ಟ ಮಾತಿನಂತೆ ಐದು ಗ್ಯಾರಂಟಿ ಯೋಜನೆಗಳಲ್ಲಿ ಮೊದಲ ಹಂತವಾಗಿ ಶಕ್ತಿ ಯೋಜನೆಯನ್ನು ಜಾರಿಗೆ ತಂದಿದ್ದು, ಈ ಶಕ್ತಿ ಯೋಜನೆಯು 2023ರ ಜೂನ್ 11 ರಂದು ಆರಂಭವಾಗಿ ಇಲ್ಲಿಯವರೆಗೆ 500 ಕೋಟಿ–ಗಿಂತ ಹೆಚ್ಚಿನ ಮಹಿಳೆಯರು ಉಚಿತ ಪ್ರಯಾಣದ ಸೌಲಭ್ಯ ಪಡೆದಿದ್ದು, ಇಲ್ಲಿಯವರೆಗೆ ಒಟ್ಟು ಟಿಕೆಟ್ ಮೌಲ್ಯ 12 ಸಾವಿರ ಕೋಟಿ ದಾಟಿದೆ. ಪಂಚ ಗ್ಯಾರಂಟಿ ಯೋಜನೆಗಳಾದ ಶಕ್ತಿಯೋಜನೆ, ಅನ್ನಭಾಗ್ಯ, ಗೃಹಲಕ್ಷ್ಮೀ, ಗೃಹಜ್ಯೋತಿ ಮತ್ತು ಯುವನಿಧಿ ಯೋಜನೆಗಳನ್ನು ಎಲ್ಲ ಅರ್ಹರಿಗೆ ತಲುಪಿಸುವಲ್ಲಿ ಸರ್ಕಾರವು ಯಶಸ್ವಿಯಾಗಿದೆ ಎಂದರು.

ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ ಅವರು ಮಾತನಾಡಿ, ಸರ್ಕಾರವು ಶಕ್ತಿ ಯೋಜನೆಯನ್ನು ಯಶಸ್ವಿಯಾಗಿ ಜಾರಿಗೊಳಿಸಿ ಮಧ್ಯಮ ವರ್ಗದ ಮಹಿಳೆಯರು ತನ್ನ ಕುಟುಂಬದ ಪೋಷಣೆಗಾಗಿ ಸಣ್ಣ ವ್ಯಾಪಾರ–ವಹಿವಾಟುಗಳಿಗೆ ನಗರಕ್ಕೆ ಮುಖಮಾಡಿ ಬರುವಾಗ ಅವಳ ಪ್ರಯಾಣದ ಖರ್ಚಿಗೆ ಸಹಕಾರಿಯಾಗಿ, ತಮ್ಮ ವ್ಯಾಪಾರ ವಹಿವಾಟು ನಡೆಸಲು ಅದರ ಭಾರವನ್ನು ಹೊರೆಯಾಗದಂತೆ ನಿರ್ವಹಿಸಲು ಈ ಯೋಜನೆಯು ಅನುಕೂಲವಾಗಿದೆ. ಮಹಿಳಾ ಸಬಲೀಕರಣ ನಿಟ್ಟಿನಲ್ಲಿ ಶಕ್ತಿ ಯೋಜನೆ ದಿಟ್ಟ ಹೆಜ್ಜೆ ಎಂದೇ ಬಿಂಬಿಸಲಾಗುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮಕ್ಕೂ ಮುನ್ನ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ.ವಿ.ಜೆ. ಅವರು ಸೇರಿದಂತೆ ಗಣ್ಯರು ಮಹಿಳೆಯರಿಗೆ ಸಿಹಿ ಮತ್ತು ಸ್ಫೂರ್ತಿದಾಯಕ ಮಹಿಳೆಯರ ಪುಸ್ತಕಗಳನ್ನು ವಿತರಿಸಿದರು.

ಈ ಸಂದರ್ಭದಲ್ಲಿ ಬಳ್ಳಾರಿ ತಾಲ್ಲೂಕು ಗ್ಯಾರೆಂಟಿ ಅಧ್ಯಕ್ಷ ನಾಗಭೂಷಣ ಗೌಡ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಅಲ್ಲಂ ಪ್ರಶಾಂತ, ಕೆಕೆಆರ್‌ಟಿಸಿ ಬಳ್ಳಾರಿ ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿ ಇನಾಯತ್ ಭಾಗವಾನ್, ವಿಭಾಗೀಯ ಸಂಚಾರಾಧಿಕಾರಿ ಚಾಮರಾಜ, ವಿಭಾಗೀಯ ಉಸ್ತುವಾರಿಧಿಕಾರಿ ಅಯ್ಯಾಜ್, ಘಟಕದ ವ್ಯವಸ್ಥಾಪಕರಾದ ಗಂಗಾಧರ್, ಶಿವಪ್ರಕಾಶ್, ವಿಭಾಗೀಯ ಭದ್ರತಾ ಅಧಿಕಾರಿಯಾದ ಶಾರದ ಅಂಭುಜ, ವಿಭಾಗೀಯ ಜಾಗೃತಾ ಅಧಿಕಾರಿ ಬಾಷಾ, ನಿಲ್ದಾಣಾಧಿಕಾರಿಗಳಾದ ಶಿವಕುಮಾರ್, ಪಂಪಾರೆಡ್ಡಿ, ರಾಜಶೇಖರ ಸೇರಿದಂತೆ ನಿಗಮದ ಆಡಳಿತ ಸಿಬ್ಬಂದಿ ವರ್ಗದವರು ಹಾಗೂ ಸಾರ್ವಜನಿಕರು ಇತರರು ಉಪಸ್ಥಿತರಿದ್ದರು.

## ಮಕ್ಕಳ ಹಕ್ಕುಗಳ ಮತ್ತು ಮಕ್ಕಳ ಪರವಾದ ಕಾನೂನುಗಳು: ವಿದ್ಯಾರ್ಥಿಗಳಿಗೆ ಜಾಗೃತಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಯಲಬುರ್ಗಾದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಮಕ್ಕಳ ಹಕ್ಕುಗಳು ಹಾಗೂ ಮಕ್ಕಳ ಪರವಾಗಿ ಕಾನೂನುಗಳು ವಿಶೇಷವಾಗಿ ಬಾಲ್ಯ ವಿವಾಹ ನಿಷೇಧ ಕುರಿತು ಜಾಗೃತಿ ಮೂಡಿಸಲಾಯಿತು.

ಕಾರ್ಯಕ್ರಮದಲ್ಲಿ ಬಾಲ್ಯ ವಿವಾಹ ನಿಷೇಧ ಕಾಯ್ದೆ 2006, ತಿದ್ದುಪಡಿ–2016, ಹಾಗೂ ಲೈಂಗಿಕ ಅಪರಾಧಗಳಿಂದ ಮಕ್ಕಳ ಸಂರಕ್ಷಣಾ ಕಾಯ್ದೆ 2012ರ ಕುರಿತು, ಸುರಕ್ಷಿತ ಸ್ಪರ್ಶ–ಕುರಿತು ಹಾಗೂ ಮಕ್ಕಳ ರಕ್ಷಣಾ ನೀತಿ 2016ರ ಅಂಶಗಳ ಅನುಷ್ಠಾನದ ಕುರಿತು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಔಟ್‌ರೀಚ್ ವರ್ಕರ್ ಪ್ರತಿಭಾ ಕಾಶಿಮಠ ಅವರು ಸಂಪೂರ್ಣ ಮಾಹಿತಿ ನೀಡಿದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಾರ್ಯವೈಖರಿ, ಮಕ್ಕಳ ಸಹಾಯವಾಣಿ–1098 ಮತ್ತು ಮಕ್ಕಳ ರಕ್ಷಣಾ ಘಟಕದ ವಿವಿಧ ಯೋಜನೆಗಳ ಕುರಿತು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಆಪ್ತ ಸಮಾಲೋಚಕ ರವಿ ಬಡಿಗೇರ್ ಅವರು ಮಕ್ಕಳಿಗೆ ಮಾಹಿತಿ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿಕೊಂಡ ಕಾಲೇಜಿನ ಪ್ರಾಂಶುಪಾಲರಾದ ಸಿದ್ದರಾಮಯ್ಯ ಅವರು ಬಾಲ್ಯ ವಿವಾಹ ನಿಷೇಧ ಕಾಯ್ದೆ–2006, ತಿದ್ದುಪಡಿ–2016 ಹಾಗೂ ಲೈಂಗಿಕ ಅಪರಾಧಗಳಿಂದ ಮಕ್ಕಳ ಸಂರಕ್ಷಣಾ ಕಾಯ್ದೆ–2012ರ ಕುರಿತು ವಿದ್ಯಾರ್ಥಿಗಳು ತಿಳಿದುಕೊಳ್ಳಬೇಕು. ಎಲ್ಲಾ ವಿದ್ಯಾರ್ಥಿಗಳು ಇಂತಹ ಕಾರ್ಯಕ್ರಮಗಳ ಸದಪಯೋಗ ಪಡಿಸಿಕೊಳ್ಳುವಂತೆ ತಿಳಿಸಿದರು.

## ವೃತ್ತ ನಾಮಕರಣ: ಆಕ್ಷೇಪಣೆಗಳಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.14–ಳ್ಳಾರಿ ಮಹಾನಗರ ಪಾಲಿಕೆ ವ್ಯಾಪ್ತಿಯ ನಗರದ ಕಪ್ಪಗಲ್ ರಸ್ತೆಗೆ ಮಾಜಿ ಮಂತ್ರಿಗಳಾದ "ಶ್ರೀ ಮುಂಡ್ಲೂರು ರಾಮಪ್ಪ ರಸ್ತೆ" ಎಂದು ಮತ್ತು ಅನಂತಪುರ ರಸ್ತೆಯಲ್ಲಿರುವ ಸರ್ಕಾರಿ ಅತಿಥಿ ಗೃಹದ ಮುಂಭಾಗ ವೃತ್ತಕ್ಕೆ "ಶ್ರೀ ಕೃಷ್ಣ" ವೃತ್ತ ಎಂದು ಹೆಸರು ನಾಮಕರಣ ಮಾಡಲು ಪಾಲಿಕೆಯ ಸಾಮಾನ್ಯ ಸಭೆಯಲ್ಲಿ ಮಂಡಿಸಿದ್ದು, ಈ ಕುರಿತು ಸಾರ್ವಜನಿಕರಿಂದ ಸಲಹೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಪ್ರಕಟಣೆಗೊಂಡ 30 ದಿನಗಳೊಳಗಾಗಿ ಲಿಖಿತ ರೂಪದಲ್ಲಿ ಮಹಾನಗರ ಪಾಲಿಕೆ ಕಚೇರಿಗೆ ಸಲ್ಲಿಸಬಹುದು. ನಿಗಧಿತ ಅವಧಿಯೊಳಗೆ ಯಾವುದೇ ಆಕ್ಷೇಪಣೆಗಳು ಸಲ್ಲಿಕೆಯಾಗದಿದ್ದಲ್ಲಿ ಸರ್ಕಾರದ ಸುತ್ತೋಲೆಯ ಪ್ರಕಾರ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಗ್ರಾಮೀಣ ಭಾಗದಲ್ಲಿ ನಾಡಿನ ಸಾಹಿತ್ಯ ಸಂಸ್ಕೃತಿಯನ್ನು ಉಳಿಸಿ ಬೆಳೆಸಿ: ಬಿ. ವೀಣಾ ಕುಮಾರಿ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.14–ನಾಡಿನ ಸಾಹಿತ್ಯ ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಗ್ರಾಮೀಣ ಭಾಗದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಅವಶ್ಯಕತೆಯಿದೆ ಎಂದು ಹಿರಿಯ ರಂಗಭೂಮಿ ಕಲಾವಿದೆ ಬಿ. ವೀಣಾ ಕುಮಾರಿ ಅವರು ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ರಾಮಸಾಗರ ಇವರ ಸಂಯುಕ್ತಾಶ್ರಯದಲ್ಲಿ ಕಂಪ್ಲಿ ತಾಲ್ಲೂಕಿನ ರಾಮಸಾಗರ ಸ.ಹಿ.ಪ್ರಾ.ಶಾಲೆ ಆವರಣದಲ್ಲಿ ಭಾನುವಾರ ಏರ್ಪಡಿಸಿದ್ದ "ಸೌರಭ ಸಾಂಸ್ಕೃತಿಕ" ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಗ್ರಾಮೀಣ ಭಾಗದ ಮಕ್ಕಳು ತಮ್ಮಲ್ಲಿನ ಕಲಾ ಪ್ರತಿಭೆಗಳನ್ನು ಹೊರಹಾಕಬೇಕು. ಸಾಂಸ್ಕೃತಿಕವಾಗಿ ದೇಶಕ್ಕೆ ಕೊಡುಗೆ ನೀಡಬೇಕು ಎಂದು ಹೇಳಿದರು.

ರಾಮಸಾಗರ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಎಮ್.ಆಶಾ ಅವರು ಮಾತನಾಡಿ, ರಾಮಸಾಗರದಲ್ಲಿ ಅನೇಕ ಜಾನಪದ ಕಲಾವಿದರು ಮತ್ತು ವಿದ್ವಾಂಸರನ್ನು ಹೊಂದಿದ್ದು, ನಾಡಿಗೆ ಅನನ್ಯ ಕೂಡುಗೆಯನ್ನು ನೀಡಿದ್ದಾರೆ ಎಂದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಬಿ.ನಾಗರಾಜ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಕರ್ನಾಟಕವು ರಂಗ ಕಲೆಯ ಶ್ರೀಮಂತ ನೆಲೆಯಾಗಿದ್ದು, ಇದಕ್ಕೆ ಪ್ರಾಚೀನ ಇತಿಹಾಸವಿದೆ. ಗ್ರಾಮೀಣ ಭಾಗದ ಎಲ್ಲಾ ಕಲಾವಿದರು ಇಂತಹ ಕಾರ್ಯಕ್ರಮಗಳ ವೇದಿಕೆಯನ್ನು ಸದುಪಯೋಗ ಪಡೆಸಿಕೊಂಡು ತಮ್ಮಲ್ಲಿರುವ ಕಲೆಯನ್ನು ಹೊರಹಾಕಬೇಕು ಎಂದು ತಿಳಿಸಿದರು.

ಬಳಿಕ ಕಾರ್ಯಕ್ರಮದಲಿ ಬಳ್ಳಾರಿಯ ಮೋಹನ್ ಕಲಬುರಗಿ ಅವರಿಂದ ವಾಯಲಿನ್ ವಾದನ, ಕೆ.ದೊಡ್ಡಬಸಪ್ಪಗವಾಯಿ ತಂಡದಿಂದ ಸುಗಮ ಸಂಗೀತ, ವನಮಾಲ ಕುಲಕರ್ಣಿ ಸಂಗಡಿಗರಿಂದ ಸಮೂಹ ನೃತ್ಯ, ಯಲ್ಲನಗೌಡ ಶಂಕರಬಂಡೆ ತಂಡದಿಂದ ಜಾನಪದ ಗೀತೆ, ಏಳುಬೆಂಚಿಯ ಸಿ.ಎಂ. ಕರುಣಾಮೂರ್ತಿ ಅವರಿಂದ ಕಥಾ ಕೀರ್ತನೆ, ಬಳ್ಳಾರಿಯ ವರಲಕ್ಷ್ಮೀ ಸಂಗಡಿಗರಿಂದ ಐತಿಹಾಸಿಕ "ಹೇಮರೆಡ್ಡಿ ಮಲ್ಲಮ್ಮ" ನಾಟಕ ಸೇರಿದಂತೆ ಇತರೆ ವೈವಿಧಮಯ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

*ಸಾಂಸ್ಕೃತಿಕ ಮೆರವಣಿಗೆ:*

ಸಾಂಸ್ಕೃತಿಕ ಸೌರಭ ಅಂಗವಾಗಿ "ಜಾನಪದ ಕಲಾ ತಂಡ"ಗಳ ಮೆರವಣಿಗೆ ನಡೆಯಿತು. ಕಂಪ್ಲಿಯ ಶಿಕಾರಿ ರಾಮು ಮತ್ತು ಸಂಗಡಿಗ–ರಿಂದ ತಾಷರಂಡೋಲ್, ಹಳೇ ದರೋಜಿಯ ವೈ, ಮಲ್ಲಿಕಾರ್ಜುನಪ್ಪ ಮತ್ತು ಸಂಗಡಿಗರಿಂದ ಹಗಲುವೇಷಗಾರಿಕೆ, ತಾರನಗರದ ಎನ್.ಎಂ. ಚಂದ್ರಯ್ಯ ಸ್ವಾಮಿ ಮತ್ತು ಸಂಗಡಿಗರಿಂದ ವೀರಗಾಸೆ ಸೇರಿದಂತೆ ಇನ್ನಿಯರೆ ಕಲಾ ತಂಡಗಳು ಮೆರವಣಿಗೆಯಲ್ಲಿ ಭಾಗವಹಿಸಿ ಮೆರಗು ನೀಡಿದವು.

ಈ ಸಂದರ್ಭದಲ್ಲಿ ರಾಮಸಾಗರ ಗ್ರಾಮ ಪಂಚಾಯಿತಿ ಉಪಾಧ್ಯಕ್ಷರಾದ ಆರ್.ಎಂ ರಾಮಯ್ಯ, ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ಶಾಲಾ ಅಭಿವೃದ್ಧಿ ನಿರ್ವಹಣಾ ಸಮಿತಿ ಅಧ್ಯಕ್ಷರಾದ ಎಂ. ಪ್ರಶಾಂತ್, ರಂಗಭೂಮಿ ಕಲಾವಿದೆ ಎ.ವರಲಕ್ಷ್ಮೀ, ಹಿರಿಯ ನೃತ್ಯ ಕಲಾವಿದರಾದ ವನಮಾಲ ಕುಲಕರ್ಣಿ, ಸೀತಾ ಚಪ್ಪರ್ ಸೇರಿದಂತೆ ಶಾಲಾ ಶಿಕ್ಷಕರು, ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಕೊಪ್ಪಳ ಹೊರಗುತ್ತಿಗೆ ನೌಕರರ ಸಂಘದ ಜಿಲ್ಲಾಧ್ಯಕ್ಷರಾಗಿ ನಾಗರಾಜ ಕಂಟೆಪ್ಪಗೌಡ್ರ ನೇಮಕ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಯಲಬುರ್ಗಾ ತಾಲೂಕಿನ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಗಣಕಯಂತ್ರ ನಿರ್ವಾಹಕರಾದ ನಾಗರಾಜ ಕಂಟೆಪ್ಪಗೌಡ್ರ ರವರನ್ನು ಕೊಪ್ಪಳ ಜಿಲ್ಲಾ ಸರ್ಕಾರಿ ಹೊರಗುತ್ತಿಗೆ ನೌಕರರ ಸಂಘದ ಜಿಲ್ಲಾಧ್ಯಕ್ಷರನ್ನಾಗಿ ರಾಜ್ಯಾಧ್ಯಕ್ಷರಾದ ಶ್ರೀ ಸುಧಾಕರ ಯಾದವ ನೇಮಕ ಆದೇಶ ಹೊರಡಿಸಿದ್ದಾರೆ

ಬೆಂಗಳೂರಿನ ಪಲ್ಲಾಡಿಯಮ್ ಹೊಟಲನಲ್ಲಿ ನೆಡೆದ ಕರ್ನಾಟಕ ಎಲ್ಲ ಜಿಲ್ಲೆಗಳೂ ಸರಕಾರಿ ಹೊರಗುತ್ತಿಗೆ ನೌಕರರ ಸಂಘದವು ಎಲ್ಲಾ ಜಿಲ್ಲೆಯ ಹೊರಗುತ್ತಿಗೆ ನೌಕರರ ಒಂದು ದಿನದ ಜಿಲ್ಲಾಧ್ಯಕ್ಷರ ಜಾಗೃತಿ ಸಭೆಯನ್ನು ನೆಡೆಸಿ ಎಲ್ಲಾ ಹೊರಗುತ್ತಿಗೆ ನೌಕರರ ವಿವಿಧ ಬೇಡಿಕೆಗಳನ್ನು ಹಿಡೇರಿಸಿಕೊಳ್ಳಲು ಸಂಘವನ್ನು ಉದ್ದೇಶದಿಂದ ಸಂಘವನ್ನು ಅಸ್ಥಿತ್ವಕ್ಕೆ ತರಲಾಗಿದೆ ಎಂದು ಎಲ್ಲಾ ಜಿಲ್ಲಾಧ್ಯಕ್ಷರನ್ನಾಗಿ ನೇಮಕ ಮಾಡಿದ ಆದೇಶ ಹೊರಡಿಸಿ ನೂತನವಾಗಿ ಆಯ್ಕೆಯಾದ ಜಿಲ್ಲಾಧ್ಯಕ್ಷರುಗಳಿಗೆ ಸನ್ಮಾನಿಸಿ ನೆನಪಿನ ಕಾಣಿಕೆ ಕೊಡಲಾಯಿತು

ಇದೆ ಸಂದರ್ಭದಲ್ಲಿ ಮಾನವ ಸಂಪನ್ಮೂಲ ಸಂಘದ ರಾಜ್ಯ ಅಧ್ಯಕ್ಷರಾದ ಶ್ರೀ ಮಹಾಲಿಂಗೇಗೌಡ, ಹೈಕೊರ್ಟ ವಕೀಲ ಮುನಿರಾಜು, ರಾಘವೇಂದ್ರ ರಡ್ಡಿ ,ನಾಗಪ್ಪ ಅಳವಂಡಿ ಗಂಗಾಧರ ಅರುಣ, ಮತ್ತು ಎಲ್ಲಾ ಜಿಲ್ಲಾಧ್ಯಕ್ಷರು , ಇತರರು ಇದ್ದರು.

ಕೊಪ್ಪಳ ಜಿಲ್ಲೆಗೆ ಜಿಲ್ಲಾಧ್ಯಕ್ಷರನ್ನಾಗಿ ಶ್ರೀ ನಾಗರಾಜ ಕಂಟೆಪ್ಪಗೌಡ್ರ ಇವರನ್ನು ನೇಮಿಸಲಾಯಿತು.

# ಬಳ್ಳಾರಿ: ಯಶಸ್ವಿಯಾಗಿ ನಡೆದ ರಾಷ್ಟ್ರೀಯ ಲೋಕ್–ಅದಾಲತ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.14–ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯ 31 ನ್ಯಾಯಾಲಯಗಳಲ್ಲಿ ನಡೆದ ರಾಷ್ಟ್ರೀಯ ಲೋಕ್–ಅದಾಲತ್ ಯಶಸ್ವಿಯಾಗಿ ನಡೆದಿವೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್.ಎನ್ ಹೊಸಮನೆ ಅವರು ತಿಳಿಸಿದ್ದಾರೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಕೆ.ಜಿ.ಶಾಂತಿ ಅವರ ಮಾರ್ಗದರ್ಶನ ಹಾಗೂ ನೇತೃತ್ವದಲ್ಲಿ ಜಿಲ್ಲೆಯ ಎಲ್ಲಾ ನ್ಯಾಯಾಧೀಶರ, ವಕೀಲರ, ಕಕ್ಷಿದಾರರ, ಸಾರ್ವಜನಿಕರ ಮತ್ತು ಸರ್ಕಾರಿ ಅಧಿಕಾರಿಗಳ ಸಹಯೋಗದಲ್ಲಿ ರಾಷ್ಟ್ರೀಯ ಲೋಕ್–ಅದಾಲತ್ ಯಶಸ್ವಿಯಾಗಿ ನಡೆದಿವೆ. ಲೋಕ್–ಅದಾಲತ್‌ನಲ್ಲಿ ರಾಜಿ ಆಗಬಹುದಾದ ಕ್ರಿಮಿನಲ್ ಪ್ರಕರಣಗಳು, ಬ್ಯಾಂಕ್ ದಾವೆಗಳು, ಚೆಕ್ ಬೌನ್ಸ್ ಪ್ರಕರಣಗಳು, ಹಣ ವಸೂಲಾತಿ ದಾವೆಗಳು, ಮೋಟರ್ ಅಪಘಾತ ಪರಿಹಾರ ಪ್ರಕರಣಗಳು, ನೌಕರರ ಪರಿಹಾರ ಪ್ರಕರಣಗಳು, ವಿದ್ಯುತ್ ಶಕ್ತಿ ಕಾಯ್ದೆಯ ಪ್ರಕರಣಗಳು, ಪಾಲು ವಿಭಾಗ ದಾವೆಗಳು, ವೈವಾಹಿಕ ಅಥವಾ ಕೌಟುಂಬಿಕ ಪ್ರಕರಣಗಳು, ಮೋಟಾರ್ ವಾಹನ ಪ್ರಕರಣಗಳು, ಸಿವಿಲ್ ಪ್ರಕರಣಗಳು ಹಾಗೂ ಇತರೆ ರಾಜಿಯಾಗಬಹುದಾದ ಪ್ರಕರಣಗಳನ್ನು ಪರಸ್ಪರ ಒಪ್ಪಿಗೆಯ ಮೇರೆಗೆ ರಾಜಿ ಸಂಧಾನದ ಮೂಲಕ ತೀರ್ಮಾನಿಸಲಾಗಿದೆ.

ಇದರಿಂದ ಕಕ್ಷಿದಾರರಲ್ಲಿ ಪರಸ್ಪರ ಬಾಂಧವ್ಯ ಮುಂದುವರೆದು, ಹಣ ಮತ್ತು ಸಮಯ ಉಳಿತಾಯವಾಗುತ್ತವೆ ಹಾಗೂ ಸಮಾಜದಲ್ಲಿ ಶಾಂತಿಯ ವಾತಾವರಣ ನಿರ್ಮಾಣವಾಗುತ್ತದೆ. ಸಾಮರಸ್ಯ ಜೀವನ ಹಾಗೂ ಸಹಬಾಳ್ವೆ ನಡೆಸಲು ಸಹಾಯವಾಗುತ್ತದೆ.

**ರಾಷ್ಟ್ರೀಯ ಲೋಕ್–ಅದಾಲತ್‌ನ ಸಂಕ್ಷಿಪ್ತ ವರದಿ:** 2025 ನೇ ಸಾಲಿನ ಜು.12 ರಂದು ನಡೆದ ಲೋಕ್–ಅದಾಲತ್‌ನಲ್ಲಿ 16,424 ಬಾಕಿ ಪ್ರಕರಣಗಳು ಮುಕ್ತಾಯಗೊಳಿಸಲಾಗಿದ್ದು, ಒಟ್ಟು ರೂ.34,31,97,228 ಪರಿಹಾರವಾಗಿ ಮೊತ್ತವನ್ನು ಕೊಡಲಾಗಿರುತ್ತದೆ. ಹಾಗೂ 8,59,362 ವಾಜ್ಯಪೂರ್ವ ಪ್ರಕರಣಗಳು ಮುಕ್ತಾಯಗೊಂಡಿದ್ದು, ಅವುಗಳಿಂದ ರೂ.31,33,76,853 ಬ್ಯಾಂಕ್ ಮತ್ತು ಸರ್ಕಾರಿ ಇಲಾಖೆಯ ಖಾಜನೆಗೆ ಪರಿಹಾರದ ಮೊತ್ತ ಜಮೆ ಆಗಿರುತ್ತದೆ. ಕೌಟುಂಬಿಕ ಸಮಸ್ಯೆಯ ಪ್ರಕರಣಗಳಲ್ಲಿ 11 ಜೋಡಿಗಳು ರಾಜಿ ಸಂದಾನದ ಮೂಲಕ ಗಂಡ–ಹೆಂಡತಿ ಒಂದಾಗಿದ್ದಾರೆ. ಲೋಕ್–ಅದಾಲತ್ ಕುರಿತು ಸಾರ್ವಜನಿಕರು ಹೆಚ್ಚಿನ ಅರಿವು ಹೊಂದಿ, ತಮ್ಮ ವ್ಯಾಜ್ಯಗಳಿದ್ದಲ್ಲಿ ಸಕಾಲದಲ್ಲಿ ಬಗೆಹರಿಸಿಕೊಳ್ಳಲು ರಾಷ್ಟ್ರೀಯ ಲೋಕ್–ಅದಾಲತ್ ಸಹಕಾರಿಯಾಗಿದೆ ಹಾಗೂ ಪ್ರದಿನ ಎಲ್ಲಾ ನ್ಯಾಯಾಲಯಗಳಲ್ಲಿ ರಾಜಿ ಸಂಧಾನ ಮಾಡುವ ಸಲುವಾಗಿ ಬೈಠಕ್‌ಗಳು ನಡೆಯುತ್ತವೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜಾ ವೇಣುಗೋಪಾಲ್ ನಾಯಕರಿಗೆ ನಿಗಮ ಮಂಡಳಿ ಸ್ಥಾನ ನೀಡಿ: ರಂಗನಗೌಡ ಪಾಟೀಲ್ ಮನವಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಸುರಪುರ ವಿಧಾನಸಭಾ ಮತ ಕ್ಷೇತ್ರದ ಜನಪ್ರಿಯ ಶಾಸಕರಾಗಿದ್ದ ದಿ:ರಾಜಾ ವೆಂಕಟಪ್ಪನಾಯಕರ ಪುತ್ರರಾದ ಜನಪ್ರಿಯ ಶಾಸಕರಾದ ರಾಜಾ ವೇಣುಗೋಪಾಲ್ ನಾಯಕರಿಗೆ ನಿಗಮ ಮಂಡಳಿ ಅಧ್ಯಕ್ಷರನ್ನಾಗಿ ನೇಮಕ ಮಾಡುವಂತೆ ಕೆಪಿಸಿಸಿ ಹಿಂದುಳಿದ ವಿಭಾಗದ ರಾಜ್ಯ ಕಾರ್ಯದರ್ಶಿ ರಂಗನಗೌಡಪಾಟೀಲ್ ದೇವಕೇರಿ ಒತ್ತಾಯಿಸಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ಕಲ್ಯಾಣ ಕರ್ನಾಟಕ ಇತಿಹಾಸದಲ್ಲಿ ಪಕ್ಷ ನಿಷ್ಠೆಗೆ ಹೆಸರು ವಾಸಿಯಾದ ಕುಟುಂಬ ಅಂದರೆ ಅದು ರಾಜಾ ವೆಂಕಟಪ್ಪನಾಯಕರ ಕುಟುಂಬ ವೆಂಕಟಪ್ಪ ನಾಯಕರು 4 ಸಲ ಶಾಸಕರಾಗಿ ಸುರಪುರ ಮತಕ್ಷೇತ್ರದ ಅಭಿವೃದ್ಧಿ ಮಾಡಿದ ಕೀರ್ತಿ ಅವರಿಗೆ ಸಲ್ಲುತ್ತೆ ಕಳೆದ 2023ರ ಚುನಾವಣೆಯಲ್ಲಿ ಆಯ್ಕೆಯಾದ ಮೇಲೆ ಉಗ್ರಾಣ ನಿಗಮದ ಅಧ್ಯಕ್ಷರನ್ನಾಗಿ ಆಯ್ಕೆಯಾದರು ಆದರೆ ಅಧಿಕಾರ ವಹಿಸಿಕೊಂಡ ಸ್ವಲ್ಪ ದಿನದಲ್ಲೇ ನಿಧನವಾದರೂ 2024ರ ಉಪ ಚುನಾವಣೆಯಲ್ಲಿ ಅವರ ಪುತ್ರರಾದ ರಾಜಾ ವೇಣುಗೋಪಾಲ್ ನಾಯಕ ಸ್ಪರ್ಧೆ ಮಾಡಿ ಅತಿ ಹೆಚ್ಚು ಅಂತರದಿಂದ ಶಾಸಕರಾದರು ಆದ್ದರಿಂದ ಹಿಂದುಳಿದ ಭಾಗದ ಅಭಿರುದ್ದಿ ವಿಚಾರವಾಗಿ ಸುರಪುರ ಮತಕ್ಷೇತ್ರದ ಜನಪ್ರಿಯ ಶಾಸಕರಾದ ರಾಜಾ ವೇಣುಗೋಪಾಲ್ ನಾಯಕರಿಗೆ ನಿಗಮ ಮಂಡಳಿ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಬೇಕು ಎಂದು ಎ.ಐ.ಸಿ.ಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆಯವರಿಗೆ ಹಾಗೂ ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಹಾಗೂ ಕೆಪಿಸಿಸಿ ಅಧ್ಯಕ್ಷರು ಹಾಗೂ ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರಿಗೆ ಕೆಪಿಸಿಸಿ ಹಿಂದುಳಿದ ವರ್ಗದ ರಾಜ್ಯ ಕಾರ್ಯದರ್ಶಿಗಳಾದ ರಂಗನಗೌಡ ಪಾಟೀಲ್ ದೇವಿಕೇರಿ ಮನವಿ ಮಾಡಿಕೊಂಡಿದ್ದಾರೆ.

## ಕರ್ನಾಟಕ ರಾಜ್ಯದಲ್ಲಿ ದಲಿತರಿಗೆ ಮುಖ್ಯ ಮಂತ್ರಿ ಸ್ಥಾನ ಕೊಡಿ ಧರ್ಮರಾಜ ನಾಟೇಕರ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಶಹಪುರ್ ನಗರದ ಪ್ರವಾಸಿ ಮಂದಿರದಲ್ಲಿ ಪತ್ರಿಕಾಗೋಷ್ಠಿ ನಡೆಸಿದ. ಎಸ್ ಎಸ್ ತಾಲೂಕು ಅಧ್ಯಕ್ಷ ( ಡಾ. ಎನ್. ಮೂರ್ತಿ ಬಣ) ತಾಲೂಕ ಅಧ್ಯಕ್ಷರಾದ ಧರ್ಮರಾಜ ನಾಟೇಕರ್ ರವರು ನಮ್ಮ ಭಾರತ ದೇಶ ಪ್ರಜಾಪ್ರಭುತ್ವ ದೇಶ ಆಗಿದ್ದು ದೇಶದಲ್ಲಿ ಜಾತ್ಯತೀತ ರಾಷ್ಟವಾಗಿದ್ದು ರಾಜ್ಯದಲ್ಲಿ ದಲಿತರ ಮತಗಳು ಹಾಗೂ ಶಾಸಕರು ತಗೆದ್ದುಕೊಂಡಂದು ಸರ್ಕಾರ ರಚನೆ ಮಾಡುತ್ತಾರೆ ಆದರೆ ರಾಜ್ಯದಲ್ಲಿ ದಲಿತರಿಗೆ ಮುಖ್ಯ ಮಂತ್ರಿ ಸ್ಥಾನ ಮಾತ್ರ ಅವಕಾಶ ಕೊಡುತ್ತಿಲ್ಲ ರಾಜ್ಯದಲ್ಲಿ ಸುಮಾರು ಜಾತಿಯ ರಾಜಕಾರಣಿಗಳು ಮುಖ್ಯ ಮಂತ್ರಿಗಳು ಆಗಿ ಹೋದರು ದಲಿತ ಮುಖ್ಯ ಮಂತ್ರಿಗಳು ಆಗುವುದು ನಾವು ನೋಡಲಿಲ್ಲ ಬರಿ ಭಾಷಣದಲ್ಲಿ ರಾಜಕೀಯ ಮುಖಂಡರು ಜಾತಿ ಬೇದ ಮಾಡುವುದ್ದಿಲ್ಲ ಹೇಳುತ್ತಾರೆ ಆದರೆ ಅಧಿಕಾರ ಅಂತ ಬಂದರೆ ಜಾತಿ ಜಾತಿ ಅಂತ ಕಿತ್ತಾಡಿ ಮುಖ್ಯ ಮಂತ್ರಿ ಅಧಿಕಾರ ಮಾಡುತ್ತಾರೆ ರಾಜ್ಯದಲ್ಲಿ ದಲಿತರ ಮೇಲೆ ರಾಜಕಾರಣಿಗಳು ತುಂಬಾ ಮೋಸ ಮಾಡುತ್ತಿದ್ದಾರೆ ದಲಿತ ಮುಖ್ಯಮಂತ್ರಿ ಆಗುವುದರಲ್ಲಿ ನೋವಿನ ವಿಷಯವಾಗಿದೆ ಎಂದು ಡಿ ಎಸ್ ಎಸ್ ತಾಲೂಕು ಅಧ್ಯಕ್ಷ ( ಡಾ. ಎನ್. ಮೂರ್ತಿ ಬಣ) ಧರ್ಮಣ್ಣ ನಾಟೇಕರ ಪತ್ರಿಕಾ ಗೋಷ್ಠಿ ದುಃಖ ವ್ಯಕ್ತಪಡಿಸಿದರು ಈ ಒಂದು ಪತ್ರಿಕಾ ಗೋಷ್ಠಿಯಲ್ಲಿ ಸಗರ ನಾಡಿನ ಹಿರಿಯ ಹೋರಾಟಗಾರ ಸುಭಾಸ್ ಹೋತಪೇಟ.ಭೀಮರಾಯ ಬಡಿಗೇರ.ಇಸ್ಮಾಯಿಲ್ ತಿಮ್ಮಾಪುರ. ಮಲ್ಲಿಕಾರ್ಜುನ ಆರೋಬೋಳ. ಮಲ್ಲಿಕಾರ್ಜುನ ಹೊಸಮನಿ. ಅಂಬಲಪ್ಪ ಮಡ್ನಳ್. ಪ್ರದೀಪ ಅಣಬಿ. ನಾಗರಾಜ್ ಗುತ್ತಿಪೇಟ. ಮೌನೇಶ್ ತಶೀಲ್ದಾರ್.ಬಸವರಾಜ್ ಕ್ಯಾತಾನಾಳ. ಸಂಗಮೇಶ ಕುಂಬಾರ.ವಿನೋದ ಬೇವಿನಹಳ್ಳಿ ಉಪಸ್ಥಿತರಿದ್ದರು.

## ವ್ಯಕ್ತಿ ಕಾಣೆ: ಪತ್ತೆಗೆ ಮನವಿ

ಬಳ್ಳಾರಿ,ಜು.14–ತೆಕ್ಕಲಕೋಟೆ ಪೊಲೀಸ್ ಠಾಣೆ ವ್ಯಾಪ್ತಿಯ ಉಪ್ಪಾರ ಹೊಸಳ್ಳಿ ನಿವಾಸಿ ಶೇಖಣ್ಣ ಎನ್ನುವ 50 ವರ್ಷದ ವ್ಯಕ್ತಿಯು ಜು.10 ರಂದು ಕಾಣೆಯಾಗಿರುವ ಕುರಿತು ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಸಬ್ ಇನ್ಸ್‌ಪೆಕ್ಟರ್ ಅವರು ಮನವಿ ಮಾಡಿದ್ದಾರೆ.ವ್ಯಕ್ತಿಯ ಚಹರೆ ಗುರುತು:ಎತ್ತರ 5.9 ಅಡಿ, ಕೋಲು ಮುಖ, ಕಪ್ಪು ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ವ್ಯಕ್ತಿಯ ಮೈಮೇಲೆ ಬಿಳಿ ಬಣ್ಣದ ತುಂಬು ತೋಳಿನ ಅಂಗಿ ಮತ್ತು ಲುಂಗಿ ಧರಿಸಿರುತ್ತಾನೆ.

ಮೇಲ್ಕಂಡ ಚಹರೆ ಗುರುತುಗಳುಳ್ಳ ವ್ಯಕ್ತಿಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ತೆಕ್ಕಲಕೋಟೆ ಪೊಲೀಸ್ ಠಾಣೆ ಪಿ.ಎಸ್.ಐ ದೂ.08396–248013, ಮೊ.9480803055, ಸಿ.ಪಿ.ಐ ಮೊ.08396–248044, ಬಳ್ಳಾರಿ ಗ್ರಾಮೀಣ ಉಪ ವಿಭಾಗ ಡಿ.ಎಸ್.ಪಿ ದೂ.08392–276000, ಎಸ್.ಪಿ ದೂ.08392–258400 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜು.16 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.14–ಬಳ್ಳಾರಿ ಗ್ರಾಮೀಣ ಉಪ–ವಿಭಾಗ ಜೆಸ್ಕಾಂ ವ್ಯಾಪ್ತಿಯ 110ಕೆ.ವಿ ಅಲ್ಲಿಪುರ–ಬಳ್ಳಾರಿ ಉತ್ತರ ಮಾರ್ಗದ ಎಲ್ಐಎಲ್ಓ ನಿರ್ಮಾಣ ಕಾರ್ಯವನ್ನು ತುರ್ತಾಗಿಕೈಗೊಂಡಿರುವುದರಿಂದ, 110/11ಕೆ.ವಿಯಸೋಮಸಮುದ್ರ ವಿದ್ಯುತ್ ಉಪ–ಕೇಂದ್ರಮತ್ತು 33/11ಕೆ.ವಿಗುಡದೂರುವಿದ್ಯುತ್ ಉಪಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ಎಲ್ಲಾ 11ಕೆ.ವಿ ಮಾರ್ಗಗಳಲ್ಲಿ ಜು.16 ರಂದು ಬೆಳಗ್ಗೆ 07 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

*ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:*

110/11ಕೆ.ವಿ ಶ್ರೀಧರಗಡ್ಡೆ ಉಪ–ಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ಎಲ್ಲಾ 11ಕೆ.ವಿ ಫೀಡರ್‌ಗಳು ಮತ್ತು 33/11ಕೆ.ವಿ ಗುಡದೂರು ಉಪ–ಕೇಂದ್ರದಿಂದ ವಿದ್ಯುತ್ ಸರಬರಾಜು ಎಲ್ಲಾ 11ಕೆ.ವಿ. ಫೀಡರ್‌ಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕೆಂದು ಜೆಸ್ಕಾಂನ ಸಹಾಯಕಕಾರ್ಯನಿರ್ವಾಹಕ ಅಭಿಯಂತರರಾದಮೋಹನಬಾಬು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವ್ಯಕ್ತಿ ಕಾಣೆ: ಪತ್ತೆಗೆ ಸಹಕರಿಸಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಯಲಬುರ್ಗಾ ತಾಲ್ಲೂಕಿನ ಜೂಲಕಟ್ಟಿಗ್ರಾಮದ ನಿವಾಸಿ ಮಲ್ಲಯ್ಯ ತಂದೆ ಈಶಯ್ಯ ಪುರಾಣಿಕಮಠ ಎಂಬ 38 ವರ್ಷದ ವ್ಯಕ್ತಿಯು 2025 ರ ಜುಲೈ 10 ರಿಂದ ಕಾಣೆಯಾಗಿದ್ದು, ಈವರೆಗೂ ಪತ್ತೆಯಾಗಿರುವುದಿಲ್ಲ. ಈ ಬಗ್ಗೆ ಯಲಬುರ್ಗಾ ಪೊಲೀಸ್ ಠಾಣಾ ಗುನ್ನೆ ನಂ: 123/2025 ಕಲಂ: ಮನುಷ್ಯಕಾಣೆನೇದ್ದರಅಡಿಯಲ್ಲಿ ಪ್ರಕರಣದ ದಾಖಲಾಗಿದೆ.

ಕಾಣೆಯಾದ ವ್ಯಕ್ತಿಯ ಚಹರೆ: ವ್ಯಕ್ತಿಯು 5 ಅಡಿ ಎತ್ತರವಿದ್ದು, ಸದೃಢ ಮೈಕಟ್ಟು, ಸಾದಗೆಂಪು ಮೈಬಣ್ಣಹಾಗೂ ದುಂಡು ಮುಖ ಹೊಂದಿದ್ದಾರೆ. ಕನ್ನಡ ಭಾಷೆ ಮಾತನಾಡುತ್ತಾರೆ. ಕಾಣೆಯಾದಾಗ ಬಿಳಿ ಬಣ್ಣದ ಅಂಗಿ ಮತ್ತು ನೀಲಿ ಬಣ್ಣದ ಪ್ಯಾಂಟ್ ಧರಿಸಿದ್ದರು.

ಮೇಲ್ಕಂಡ ಚಹರೆಯ ವ್ಯಕ್ತಿಯ ಕುರಿತು ಯಾರಿಗಾದರೂ ಮಾಹಿತಿ ಇದ್ದಲ್ಲಿ ಅಥವಾ ದೊರೆತಲ್ಲಿ ಯಲಬುರ್ಗಾ ಪೊಲೀಸ್ ಠಾಣೆ ದೂರವಾಣಿ ಸಂ–ಖ್ಯೆ: 9480803749 ಮತ್ತು 08534–220133 ಅಥವಾ ಕೊಪ್ಪಳ ಕಂಟ್ರೋಲ್ ರೂಮ್ ನಂ.08539–220222 ಗೆ ಸಂಪರ್ಕಿಸಿ ಮಾಹಿತಿ ನೀಡುವಂತೆ ಯಲಬುರ್ಗಾ ಪೊಲೀಸ್ ಠಾಣೆ ಪ್ರಕಟಣೆ ಕೋರಿದೆ.

## ಮಿನಿ ವಿಧಾನಸೌಧ ಸ್ಥಳಾಂತರಕ್ಕೆ ನಮ್ಮ ಕರ್ನಾಟಕ ಸೇನೆ ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು:ತಾಲ್ಲೂಕಿನ ಮಿನಿ ವಿಧಾನಸೌಧ ಪಟ್ಟಣದ ಹೊರವಲಯದಲ್ಲಿದ್ದು,ಗ್ರಾಮೀಣ ಭಾಗದ ಬಡ ಜನತೆ ಜಾತಿ, ಆದಾಯ ಹಾಗೂ ಇತರೆ ದಾಖಲೆಗಳಿಗಾಗಿ ತಹಶೀಲ್ದಾರ ಕಚೇರಿಗೆ ಹೋಗುವಾಗ ಬಹುಮಾನವೊಂದು ಕಷ್ಟವನ್ನು ಎದುರಿಸುತ್ತಿದ್ದಾರೆ.ಒಂದುದಾಖಲೆಯ ಕೇವಲ ಪ್ರತಿ ಪಡೆಯಲು ಸಹ ನಾಗರಿಕರು ಪಟ್ಟಣಕ್ಕೆ ಬಂದು ಮತ್ತೆ ವಾಪಸು ಹೋಗಬೇಕಾಗಿ ಬರುವುದರಿಂದ ಸುಮಾರು ರೂ.100 ರಿಂದ ರೂ 200 ವರೆಗೆ ಖರ್ಚಾಗುತ್ತಿದೆ. ಅಲ್ಲದೇ ಕುಡಿಯುವ ನೀರು, ಶೌಚಾಲಯ ಮುಂತಾದ ಮೂಲಭೂತ ಸೌಲಭ್ಯಗಳ ಕೊರತೆಯೂ ಉಂಟಾಗಿದೆ.ಮಹಿಳೆಯರಿಗೆ ಈ ಸ್ಥಳದ ಅಗ್ರಸ್ಥಾನ ಹಾಗೂ ಎರಡು ವಿಭಿನ್ನ ಪ್ರದೇಶಗಳಲ್ಲಿ ವಿಭಾಗವಾಗಿ ಇರುವ ವ್ಯವಸ್ಥೆ ಭದ್ರತೆಯ ಅಭಾವದ ಭಯವನ್ನು ಉಂಟುಮಾಡಿದೆ. ಇದಲ್ಲದೆ,ಹಲವು ಸರ್ಕಾರಿ ಕಚೇರಿಗಳು ಖಾಸಗಿ ಕಟ್ಟಡಗಳಲ್ಲಿ ಬಾಡಿಗೆಯಾದರೂ ಕಾರ್ಯನಿರ್ವಹಿಸುತ್ತಿದ್ದು, ಸರ್ಕಾರದ ಹಣ ವ್ಯರ್ಥವಾಗುತ್ತಿದೆ ಸಹಾಯಕ ಆಯುಕ್ತರ ಕಚೇರಿ ಪಕ್ಕದಲ್ಲಿ ಹಾಗೂ ತಾಲೂಕ ಪಂಚಾಯತಿ ಕಟ್ಟಡದಲ್ಲಿ ಸಾಕಷ್ಟು ಕೊಠಡಿಗಳು ಖಾಲಿ ಇದ್ದು, ಈ ಕಟ್ಟಡಗಳಲ್ಲಿ ಮಿನಿ ವಿಧಾನಸೌಧವನ್ನು ಸ್ಥಳಾಂತರ ಮಾಡುವಮೂಲಕ ಸಾರ್ವಜನಿಕರಿಗೆ ಅನುಕೂಲವನ್ನು ಕಲ್ಪಿಸಬೇಕು ಎಂದು ಅವರು ಒತ್ತಾಯಿಸಿ

ನಮ್ಮಕರ್ನಾಟಕ ಸೇನೆಯ ವತಿಯಿಂದ ತಾಲ್ಲೂಕು ಸಹಾಯಕ ಆಯುಕ್ತರಿಗೆ ಮಿನಿ ವಿಧಾನಸೌಧ ಸ್ಥಳಾಂತರ ಮಾಡುಬೇಕೆಂದು ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ನಮ್ಮ ಕರ್ನಾಟಕ ಸೇನೆಯ ತಾಲೂಕು ಅಧ್ಯಕ್ಷರಾದ ಶಿವರಾಜ ನಾಯಕ ನೇತೃತ್ವದಲ್ಲಿ ನಮ್ಮ ಕರ್ನಾಟಕ ಸೇನೆಯ ಕಾರ್ಯ ಕರ್ತರಾದ ರಾಜು ಪತ್ತಾರ ಯಲ್ಲಪ್ಪ ಬೋವಿ ಬಸವಲಿಂಗ ಯಲಗಲದಿನ್ನಿ ಗುರುನಾಥ ದ್ಯಾಪೂರ ಶಿವಲಿಂಗ ಕೃಷ್ಣಬೋವಿ ಕಂಠೆಪ್ಪ ಮೌನೇಶನಾಯಕ ದವಲಗೌಡ ನಾಗರಾಜ ಕರಡಕಲ್ ಮಾರುತಿ ಮಹೇಂದ್ರಕುಮಾರ ವೀರೇಶ ಐದನಾಳ ಶರಣಬಸವನಗೌಡ ಶಂಭುಗೌಡ ವೀವೇಕಾನಂದ ನಾಯಕ ವೆಂಕಟೇಶ ಗುತ್ತೇದಾರ ಸೇರಿದಂತೆ ಉಪಸ್ಥಿತರಿದ್ದರು

# ಎರಡು ಅವಘಡ 7 ಸಾವು

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಜು.13:ರಾಜ್ಯದಲ್ಲಿ ಸಂಭವಿಸಿದ ಎರಡು ಪ್ರತ್ಯೇಕ ಅಪಘಾತಗಳಲ್ಲಿ 7 ಮಂದಿ ದುರ್ಮರಣಕ್ಕೀಡಾಗಿದ್ದಾರೆ. ರಾಮನಗರದ ಬಳಿ ಕಾ–ರೊಂದು ತಡೆಗೋಡೆಗೆ ಡಿಕ್ಕಿ ಹೊಡೆದ ಪರಿಣಾಮ ನಾಲ್ವರು ಮೃತಪಟ್ಟಿದ್ದಾರೆ.

ಮತ್ತೊಂದೆಡೆ ಮಂತ್ರಾಲಯಕ್ಕೆ ಭೇಟಿ ನೀಡಿದ್ದ ಮೂವರು ಯುವಕರು ತುಂಗಭದ್ರಾ ನದಿಯಲ್ಲಿ ಈಜಲು ತೆರಳಿದಾಗ ನೀರು ಪಾಲಾಗಿರುವ ಘಟನೆ ಸಂಭವಿಸಿದೆ.

ಮಂಡ್ಯಜಿಲ್ಲೆಯ ಕೆ.ಆರ್.ಪೇಟೆಯ ಮುತ್ತುರಾಜು (55), ತಮ್ಮನಗೌಡ (27), ಸಂಜು (28) ಹಾಗೂ ಕಾರು ಚಾಲಕ ಸಚಿನ್ (27) ಮೃತಪಟ್ಟವರು.

ಬೆಂಗಳೂರು–ಮೈಸೂರು ಹೆದ್ದಾರಿಯ ಜಯಪುರ ಬ್ರಿಡ್ಜ್ ಬಳಿ ಅಪಘಾತ ಸಂಭವಿಸಿದೆ.

ಎಂಎಲ್‌ಸಿ ಮಾಡುವಂತೆ ನಾನು ಕೇಳುವದಿಲ್ಲ, ಅನ್ಯಮಾರ್ಗದ ದಾರಿ ಹಿಡಿಯುವದಿಲ್ಲ.

# ಚುನಾವಣೆ ಮುಖಾಂತರ ಆಯ್ಕೆಯಾಗಿ ಉಪ ಮುಖ್ಯಮಂತ್ರಿಯಾಗುತ್ತೇನೆ, ಚಿಂಚನಸೂರ್



ಗುರುಮಠಕಲ್:ಜುಲೈ13.ನಿನ್ನೆ ಮಾಜಿ ಸಚಿವ ಹಾಗೂ ನಿಜ ಶರಣ ಅಂಬಿಗರ ಚೌಡಯ್ಯ ನಿಗಮದ ಅಧ್ಯಕ್ಷ ಬಾಬುರಾವ್ ಚಿಂಚನಸೂರ್ ಅವರು ನಿಜ ಶರಣ ಅಂಬಿಗರ ಚೌಡಯ್ಯ ಅವರ ನಾಮಫಲಕಕ್ಕೆ ನಮನ ಸಲ್ಲಿಸಿ ಮಾತನಾಡಿದ ಅವರು

## ಕಾರ್ಯಕರ್ತರ ಜೊತೆ ನಿರಂತರ ಸಂಪರ್ಕದಲ್ಲಿರುವೆ ಪಕ್ಷ ಬಲಪಡಿಸುತ್ತೇನೆ: ಚಿಂಚನ್‌ಸೂರ್

ಗುರುಮಠಕಲ ಮತಕ್ಷೇತ್ರದ ಕಾಂಗ್ರೆಸ್ ಕಾರ್ಯಕರ್ತರು ಹಲವಾರು ದಶಕಗಳಿಂದ ಪಕ್ಷಕ್ಕೆ ತಮ್ಮ ಅಭೂತಪೂರ್ವ ಪರಿಶ್ರಮದಿಂದ ಪಕ್ಷ ಸದೃಢವಾಗಿ ಬೆಳೆಯಲು ಸಹಕರಿಸಿದ್ದಾರೆ,ಅವರ ಜೊತೆ ನಿರಂತರ ಸಂಪರ್ಕದಲ್ಲಿದ್ದು ಮನೋ ಧೈರ್ಯ ಬೆಳೆಸಿ ಪಕ್ಷದ ಸಂಘಟನೆಗೊಳಿಸಿ ಮುಂಬರುವ ಚುನಾವಣೆಯಲ್ಲಿ ಜಯಗಳಿಸುವದಾಗಿ ಅವರು ಹೇಳಿದರು.

ಒಐಅ ಮಾಡುವಂತೆ ನಾನು ಕೇಳುವದಿಲ್ಲ, ಅನ್ಯಮಾರ್ಗದ ದಾರಿ ಹಿಡಿಯುವದಿಲ್ಲ ಚುನಾವಣೆ ಮುಖಾಂತರ ಆಯ್ಕೆಯಾಗಿ ಉನ್ನತ ಸ್ಥಾನಮಾನ ಗಳಿಸುವೆ ಎಂದು ಅವರು ಹೇಳಿದರು.

ಚುನಾವಣೆಯಲ್ಲಿ ಸೋತಿರಬಹುದು ಆದರೆ ಜನಸೇವೆ ಮಾಡುವ ಇಚ್ಚಾಶಕ್ತಿ ಕಡಿಮೆಯಾಗಿಲ್ಲ, ಕ್ಷೇತ್ರದ ಜನತೆಯ ಜೊತೆ ಸದಾ ಸಕ್ರಿಯವಾಗಿ ಪಾಲ್ಗೊಂಡು ನಿಮ್ಮ ಸೇವೆ ಮಾಡುತ್ತೇನೆ ಎಂದು ಆಶಾ ನುಡಿ ನುಡಿದರು.

ಇದೇ ವೇಳೆ ಮಾಜಿ ಕಾಡಾ ನಿರ್ದೇಶಕ ವಿಜಯ ಕುಮಾರ್ ನೀರೆಟಿ, ಬಸವರಾಜ ದಳಪತಿ, ಸಂಜೀವ ಕುಮಾರ ಚಂದಾಪುರ, ನರೇಶ್, ಶ್ಯಾಮಪ್ಪ ಚಂಡರಿಕಿ, ಶರಣಪ್ಪ, ನಾರಾಯಣ ಕಲಾಲ್, ರಾಮು ತಹಸೀಲ್, ಈರಪ್ಪ ತಹಸೀಲ್, ಗೋಪಾಲ ಇಂಟೆನಿಕಿ, ಮೋಹನ್ ಇಂಟೆನಿಕಿ, ಪಕ್ಷದ ಕಾರ್ಯಕರ್ತರು ಹಾಗೂ ಗ್ರಾಮದ ಸಾರ್ವಜನಿಕರು ಹಾಜರಿದ್ದರು.

ಖಾಸಗಿ ಕನ್ನಡ ಶಾಲೆಗಳಿಗೆ ಅನುದಾನ ನೀಡುವಂತೆ ಒಕ್ಕೂರಲ ಆಗ್ರಹ

# ಕರ್ನಾಟಕದಲ್ಲಿ ಕನ್ನಡ ಶಾಲೆಗಳನ್ನು ಮರೆತ ಸರಕಾರ : ಪಾಟೀಲ ಆಕ್ರೋಶ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ಮಾತೃಭಾಷೆ ಶಿಕ್ಷಣ ಕಡ್ಡಾಯವಾಗಿದ್ದು, ಆಳುವ ಸರ್ಕಾರ ಈ ದಿಸೆಯಲ್ಲಿ ಕಿಂಚಿತ್ತು ಕಾಳಜಿವಹಿಸದೆ, ಸರಿ ಸುಮಾರು 30 ವರ್ಷಗಳಿಂದ ಖಾಸಗಿಯಾಗಿ ಉತ್ತಮ ಶಿಕ್ಷಣವನ್ನು ನೀಡುತ್ತಿರುವ, ಕನ್ನಡ ಮಾಧ್ಯಮ ಶಾಲೆ ಕಾಲೇಜುಗಳಿಗೆ ಅನುದಾನ ನೀಡದೆ, ಕರ್ನಾಟಕದಲ್ಲಿ ಕನ್ನಡ ಶಾಲೆಗಳನ್ನು ಸರ್ಕಾರ ಮರೆತುಬಿಟ್ಟಿದೆ ಎಂದು ತಾಲೂಕ ಕನ್ನಡ ಮಾಧ್ಯಮ ಶಾಲೆಗಳ ಹೋರಾಟ ಸಮಿತಿಯ ಸಂಚಾಲಕ ಮಲ್ಲಿಕಾರ್ಜುನ ಪಾಟೀಲ ಕನ್ಯಕೋಳೂರ ಸರ್ಕಾರದ ನಿಲುವಿನ ಬಗ್ಗೆ 1995ರ ನಂತರ ಪ್ರಾರಂಭವಾದ ಕನ್ನಡ ಮಾಧ್ಯಮ ಶಾಲಾ–ಕಾಲೇಜುಗಳಿಗೆ ಎಲ್ಲಾ ಭಾಗ್ಯಗಳ ಜೊತೆಗೆ, ವೇತನಾನುದಾನ ಭಾಗ್ಯವನ್ನು ನೀಡುವಂತೆ ಆಗ್ರಹಿಸಿ ಶಹಾಪುರ ತಾಲೂಕ ಕನ್ನಡ ಮಾಧ್ಯಮ ಶಾಲೆಗಳ ಹೋರಾಟ ಸಮಿತಿ, ತಾಲೂಕ ಖಾಸಗಿ ಶಾಲೆಗಳ ಒಕ್ಕೂಟ ಮತ್ತು ಕೃಪಾಸಂಘಟನೆ ಸಂಯುಕ್ತಾಕ್ಷಯದಲ್ಲಿ ತಹಶೀಲ ಕಚೇರಿ ಮುಂದೆ ಖಾಸಗಿ ಕನ್ನಡ ಮಾಧ್ಯಮ ಶಾಲೆಗಳ ಪ್ರಮುಖರು ಸೇರಿ ಪ್ರತಿಭಟನೆ ನಡೆಸಿದ ಸಂದರ್ಭದಲ್ಲಿ ಸರ್ವರನ್ನು ಉದ್ದೇಶಿಸಿ ಮಾತನಾಡಿದ ಪಾಟೀಲರು, ಸರ್ಕಾರ ಸದನದಲ್ಲಿ ಈ ಕುರಿತು ಚರ್ಚಿಸುತ್ತದೆ ಹೊರತು, ಅನುಶಾಸನಕ್ಕೆ ತರುವಲ್ಲಿ ಹಿಂದೇಟು ಹಾಕುತ್ತಿದೆ, ಕನ್ನಡ ನೆಲದಲ್ಲಿ ಕನ್ನಡ ಶಾಲೆಗಳಿಗೆ ಸರ್ಕಾರ ಭದ್ರತೆ ನೀಡದಿದ್ದಲ್ಲಿ ಮುಂದಿನ ಆಗು ಹೋಗುಗಳಿಗೆ ಸರ್ಕಾರವೇ ಹೊಣೆ ಎಂದರು.

ಪ್ರಮುಖರಾದ ಮೂರ್ತಿ ಮುದಗಲ್, ರಾಮಚಂದ್ರ ಸಗರ, ಅಶೋಕ ಘನಾತೆ, ಶರಣು ಪಾಟೀಲ ಮಾತನಾಡಿ, ಸರ್ಕಾರವು ಕನ್ನಡ ಶಾಲೆಗಳ ಬಗ್ಗೆ ತಳೆದಿರುವ ತಾತ್ಸರ ಭಾವನೆ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ತಹಶೀಲ್ದಾರ ಉಮಾಕಾಂತ ಹಳ್ಳೆಯವರಿಗೆ ಮನವಿ ಪತ್ರ ನೀಡಿದರು. ಈ ಸಂದರ್ಭದಲ್ಲಿ ಕೃಪಾಸಂಘಟನೆಯ ಹೊನ್ನಪ್ಪ ಗಂಗನಾಳ, ಖಾಸಗಿ ಶಾಲೆಗಳ ವಿ.ಸತ್ಯಂ ರೆಡ್ಡಿ, ಗುರು ಗೋಗಿ, ಮೃತ್ಯುಂಜಯ ಚಿಕ್ಕಮಠ, ಗುರುಲಿಂಗಯ್ಯ ಸ್ವಾಮಿ, ಪ್ರವೀಣ ಫಿರಂಗಿ, ಚಂದ್ರಶೇಖರ ಹೊಸ್ಮನಿ, ಮೃತ್ಯುಂಜಯ ಗೋಗಿ, ಶಿವಶರಣಪ್ಪ ಪತ್ರಿ, ಚೆನ್ನಯ್ಯಸ್ವಾಮಿ, ಶಶಿಮಾನು, ಮನೋಹರ, ವಿಜಯ ಕುಮಾರ, ನಾರಾಯಣಾಚಾರ್ಯ ಸಗರ, ಸೇರಿದಂತೆ ಪ್ರಮುಖರು ಇದ್ದರು.

# 90 ದಿನಗಳು ದೇಶಕ್ಕಾಗಿ ಘೋಷವ್ಯಾಕದಡಿ ವಿಶೇಷ ಅಭಿಯಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 14–ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ದೇಶದ ಎಲ್ಲಾ ನ್ಯಾಯಾಲಯಗಳಲ್ಲಿ ಬಾಕಿ ಇರುವ ಮಧ್ಯಸ್ಥಿಕೆ ಮೂಲಕ ರಾಜಿ ಆಗಬಹುದಾದ ಪ್ರಕರಣಗಳ ಕುರಿತು 90 ದಿನಗಳು ದೇಶಕ್ಕಾಗಿ ಎಂಬ ಘೋಷವ್ಯಾಕದೊಂದಿಗೆ ವಿಶೇಷ ಮಧ್ಯಸ್ಥಿಕೆಯ ಅಭಿಯಾನ ಆಯೋಜಿಸಲಾಗಿದೆ.

ಈ ಮಧ್ಯಸ್ಥಿಕೆಯ ಅಭಿಯಾನವು ರಾಯಚೂರ ಜಿಲ್ಲೆಯ ಎಲ್ಲ ನ್ಯಾಯಾಲಯಗಳಲ್ಲಿ ಸಹ ನಡೆಯಲಿದೆ. ರಾಜಿ ಆಗಬಹುದಾದ ಪ್ರಕರಣಗಳನ್ನು ಮಧ್ಯಸ್ಥಿಕೆ ಕೇಂದ್ರಗಳಿಗೆ ಕಳುಹಿಸಿ ಅಲ್ಲಿ ವಿಶೇಷ ತರಬೇತಿ ಹೊಂದಿದ ಮಧ್ಯಸ್ಥಿಕೆಗಾರರಿಂದ ರಾಜಿಸಂಧಾನ ಮಾಡಿಸುವ ವ್ಯವಸ್ಥೆ ಇದಾಗಿದೆ. ಕಕ್ಷಿದಾರರು ಈ ಅಭಿಯಾನದ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಮಾಹಿತಿಗೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಥವಾ ತಾಲ್ಲೂಕು ಕಾನೂನು ಸೇವಾ ಸಮಿತಿಗಳಾದ ಸಿಂಧನೂರು, ಲಿಂಗಸೂಗೂರು, ಮಾನವಿ, ದೇವದುರ್ಗ ಕಚೇರಿಗಳನ್ನು ಸಂಪರ್ಕಿಸಬಹುದು ಎಂದು ಗೌರವಾನ್ವಿತ ಹಿರಿಯ ಶ್ರೇಣಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಎಚ್.ಎ. ಸಾತ್ವಿಕ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಾಣಿಜ್ಯ ಮಳಿಗೆಗಳನ್ನು ಬೇರೆ ಉದ್ದೇಶಕ್ಕೆ ಬಳಸುತ್ತಿರುವ ಬಗ್ಗೆ ಕಟು ಟೀಕೆ – ಕ್ರಮಕ್ಕೆ ಒತ್ತಾಯ



ಯಾದಗಿರಿ:ಕೃಷಿ ಉತ್ಪನ್ನ ಮಾರುಕಟ್ಟೆಸಮಿತಿಯ ಯಾದಗಿರಿ ವಿಭಾಗದ ಉಪ ಮಾರುಕಟ್ಟೆ ಪ್ರಾಂಗಣವು ಗುರುಮಠಕಲ್ ಪಟ್ಟಣದಲ್ಲಿ ಸ್ಥಾಪಿತವಾಗಿದೆ. ಈ ಪ್ರಾಂಗಣದಲ್ಲಿ ನಿರ್ಮಿಸಲಾದ ವಾಣಿಜ್ಯಮಳಿಗೆಗಳು ತಾತ್ಕಾಲಿಕವಾಗಿ ಕೃಷಿಸಂಬಂಧಿತ ಚಟುವಟಿಕೆಗಳಿಗಾಗಿ ಬಳಸಬೇಕೆಂಬ ಉದ್ದೇಶದಿಂದ ನಿರ್ಮಾಣವಾಗಿದ್ದರೂ, ಇತ್ತೀಚೆಗೆ ಅವುಗಳನ್ನು ಬೇರೆ ಉದ್ದೇಶಗಳಿಗೆ ಬಳಸಲಾಗುತ್ತಿದೆ ಎಂಬ ಆರೋಪಗಳು ಎದ್ದಿವೆ.

ಸಮಾಜಿಕ ಕಾರ್ಯಕರ್ತರು ಹಾಗೂ ಸ್ಥಳೀಯ ರೈತ ಸಂಘದ ಪ್ರತಿನಿಧಿಗಳು ಈ ಬೆಳವಣಿಗೆಯನ್ನು ಕಟುವಾಗಿ ಟೀಕಿಸಿದ್ದು, ಮಾರುಕಟ್ಟೆ ಸಮಿತಿ ಉದ್ದೇಶಿತಧೋರಣೆಗೆವಿರುದ್ಧವಾಗಿ ನಡೆಯುತ್ತಿರುವ ಈ ನಡೆ ರೈತರ ಹಿತಾಸಕ್ತಿಗೆ ಹಾನಿ ಮಾಡುತ್ತದೆ ಎಂಬುದಾಗಿ ಹೇಳಿದ್ದಾರೆ.ಅವರು, ಮಳಿಗೆಗಳನ್ನು ವಾಣಿಜ್ಯ–ವ್ಯಕ್ತಿಗತ ಉಪಯೋಗಗಳಿಗೆ ಬದಲಿಸಿ ಸಾರ್ವಜನಿಕ ಮೂಲಸೌಕರ್ಯಗಳ ದುರ್ಬಳಕೆ ಮಾಡುತ್ತಿರುವುದನ್ನು ಗಂಭೀರವಾಗಿ ಪರಿಗಣಿಸಿ, ಸಂಬಂಧಿತ ಅಧಿಕಾರಿಗಳು ತ್ವರಿತವಾಗಿ ಪರಿಶೀಲನೆ ನಡೆಸಿ ಕಾನೂನುಬದ್ಧ ಕ್ರಮ ಕೈಗೊಳ್ಳಬೇಕು ಎಂಬುದಾಗಿ ಒತ್ತಾಯಿಸಿದ್ದಾರೆ.

# ಆಲ್ ಇಂಡಿಯಾ ಕಿಸಾನ್ ಸಭೆಯ ತುರ್ತು ಸಭೆ




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: ಇಂದು ಅಲ್ ಇಂಡಿಯಾ ಕಿಸಾನ್ ಸಭಾ ವತಿಯಿಂದ ತುರ್ತು ಸಭೆ ನಡೆಸಲಾಯಿತ್ತು. ರೈತರು ನಿರಂತರವಾಗಿ ಹಲವಾರು ಸಮಸ್ಯಗಳಿಂದತತ್ತರಿಸಿಹೋಗಿದ್ದು, ಪ್ರಸಕ್ತ ಸಾಲಿನಲ್ಲಿ ಸರಿಯಾದ ಪ್ರಮಾಣದಲ್ಲಿ ಮಳೆಯಾಗದೇ ಎರಡೇರಡು ಸಲ ಬಿತ್ತನೆ ಮಾಡಿ ಕೈ ಸುಟ್ಟುಕೊಂಡ ರೈತರು, ಕಂಗಾಲಾಗಿದ್ದಾರೆ. ಕೈಯಲ್ಲಿದ್ದ ಒಂದಿಷ್ಟು ಹಣ ಭೂಮಿಗೆ ಚೆಲ್ಲಿ ಮಳೆರಾಯನಿಗಾಗಿ ಕೈ ಕಟ್ಟಿ ಕುಳಿತ್ತಿರುವ ಸಮಯದಲ್ಲಿ, ಬೆಳೆ ಸಾಲ ಕೊಟ್ಟ ಬ್ಯಾಂಕ ಅಧಿಕಾರಿಗಳು ಪದೆ ಪದೆ ರೈತರ ಮನೆಗೆ ಹೋಗಿ ಕಿರಕುಳ ನೀಡಿ ಅವರ ಮಾನ ಹರಾಜು ಮಾಡುತ್ತಿದ್ದಾರೆ. ತುರ್ತಾಗಿ ಸಾಲ ಮರುಪಾವತಿ ಮಾಡದೆ ಹೋದರೆ ನ್ಯಾಯಾಲಕ್ಕೆ ಎಳೆಯುವುದಾಗಿ ಹೆದರಿಸಿ ರೈತರನ್ನು ಪರೋಕ್ಷವಾಗಿ ಆತ್ಮಹತ್ಯಗೆ ಪ್ರಚೋದಿಸುವಂತಹ ಸನ್ನಿವೇಶ ಸೃಷ್ಟಿಸುತ್ತಿದ್ದಾರೆ. ದಿನಾಂಕ 12–07–2025 ರಂದು ಲೋಕ ಅದಾಲತ್ ಹೆಸರಿನಲ್ಲಿ ರೈತರನ್ನು ನ್ಯಾಯಾಲಯಕ್ಕೆ ಕರೆಸಿ ಅವರನ್ನು ನ್ಯಾಯಾ ಧೀಶರ ಸಮುಖದಲ್ಲಿ ಹಾಜರುಪಡಿಸಿ ಅವರ ಅಹವಾಲನ್ನು ಕೇಳದೆ ಬ್ಯಾಂಕ ಅಧಿಕಾರಿಗಳೆ ನ್ಯಾಯಾಧೀಶರಂತೆ ವರ್ತಿಸಿ, ತಾವೇ ನಿರ್ಧರಿಸಿಕೊಂಡಷ್ಟು ಹಣ ತುಂಬುವಂತೆ ಪೀಡಿಸುತಿರುವುದರ ವಿರುದ್ಧ ಸಿಡಿದೆದ್ದ ರೈತರು, "ಆಲ್ ಇಂಡಿಯಾ ಕಿಸಾನ ಸಭಾ" ತಾಲುಕು ಅಧ್ಯಕ್ಷರಾದ ಶ್ರೀ ಸೂರ್ಯಕಾಂತರಾವ್ ಮದಕಟ್ಟಿ ಇವರ ಅಧ್ಯಕ್ಷತೆಯಲ್ಲಿ ತುರ್ತು ಸಭೆ ಸೇರಿದರು. ಆಂಧ್ರ ಸರ್ಕಾರವು ಜಾರಿಗೊಳಿಸಿದ ರೀತಿಯಲ್ಲಿ ಕರ್ನಾಟಕ ಸರ್ಕಾರವು ಪ್ರತಿ ವರ್ಷ ಎಕರೆಗೆ ಐದು ಸಾವಿರ ರೂಪಾಯಿ ಸಹಾಯ ಧನ ನೀಡಬೇಕು. 2015 ರಿಂದ 2020ರ ವರೆಗೆ ಬೆಳೆ ಸಾಲ ಪಡೆದ ರೈತರ ಸಾಲ ಮನ್ನಾ ಮಾಡಬೇಕು. ಪ್ರಸಕ್ತ ವರ್ಷ ತಕ್ಷಣ ಬೆಳೆ ಸಮಿಕ್ಷೇ ನಡೆಸಿ ಬರಗಾಲ ಬೀದರ ಜಿಲ್ಲೆ ಬರಗಾಲ ಘೋಷಣೆ ಮಾಡಿ ಪರಿಹಾರ ಒದಗಿಸಬೇಕು. ಬೀದರ ಸಹಕಾರ ಸಕ್ಕರೆ ಕಾರ್ಖಾನೆ ( ಬಿ ,ಎಸ್. ಎಸ್. ಕೆ) ಪುನರಾರಂಭಿಸಿ ಕಬ್ಬ ಬೆಳೆಗಾರರ ಸಮಸ್ಯ ಪರಿಹರಿಸಬೇಕು. ಬೆಂಬಲ ಬೆಲೆ ನಿರ್ಧರಿಸಲು ಕಾನೂನು ರೂಪಿಸಲು ಶಿಫಾರಸ್ಸುಮಾಡಬೇಕು. ಬೆಲೆ ನಿರ್ಧಾರ ಕಮಿಟಿಯಲ್ಲಿ ಅರ್ಧದಷ್ಟು ರೈತ ಪ್ರತಿನಿಧಿಗಳು ಭಾಗವಹಿಸುವಂತ್ತಿರಬೇಕು ಎಂಬಿತ್ಯಾದಿ ಬೇಡಿಕೆಗಳು ಮುಂದಿಟ್ಟುಕೊಂಡು ಮಾನ್ಯ ತಹಸಿಲ್ದಾರ ಅವರ ಮುಖಾಂತರ ರಾಜ್ಯದ ಮುಖ್ಯ ಮಂತ್ರಿ ಗಳಿಗೆ ಮನವಿ ಪತ್ರ ಸಲ್ಲಿಸಿರುತ್ತಾರೆ. ಈ ಸಂದರ್ಭದಲ್ಲಿ ಆಲ್ ಇಂಡಿಯಾ ಕಿಸಾನ ಸಭೆಯ ರಾಜ್ಯ ಉಪಾಧ್ಯಕ್ಷ ಬಾಬುರಾವ್ ಹೊನ್ನಾ. ಆ.ಇಂ.ಕೀ ಸ. ಜಿಲ್ಲಾ ಅಧ್ಯಕ್ಷ ನಜೀರ ಅಹಮದ್. ಬಸವಕಲ್ಯಾಣ ತಾಲುಕಾ ಅಧ್ಯಕ್ಷ ಸೂರ್ಯಕಾಂತ ಮದಕಟ್ಟಿ, ಸಹ ಕಾರ್ಯದರ್ಶಿ ರಾಮಯ್ಯಸ್ವಾಮಿ. ಇಬ್ರಾಹಿಮ್ ಸಾಬ ವಕೀಲರು. ರವಿಂದ್ರ ನಲ್ಲಕಂಟೆ ವಕೀಲರು, ಮಹಿಳಾ ಹಕ್ಕು ಒಕ್ಕೂಟದ ಸಿಂಧುತಾಯಿ ಮಾನೆ. ಮಲ್ಲಮ್ಮಾ ಮುಡಬಿ. ಸಂತೋಷಿ ಮುಡಬಿ. ಸುಧಾಮ, ಮೋತಿರಾಂ ಮಿರಖಲ್ ಮತ್ತು ಸಾವನಕುಮಾರ ಎಸ್ ಕೆ. ಇದ್ದರು.

## ವೀರಶೈವ ಜಂಗಮರಿಗೆ, ಬೇಡ ಜಂಗಮ ಎಂದು ನಕಲಿ ಪರಿಶಿಷ್ಟ ಜಾತಿ ಪ್ರಮಾಣ ಪತ್ರದ ವಿರುದ್ಧ ಕ್ರಮಕ್ಕೆ ಆಗ್ರಹ




ಮಲ್ಲಮ್ಮ ನುಡಿ ವಾರ್ತೆ

ವಡಗೇರಾ :– ಅಂಬೇಡ್ಕರ್ ಸ್ವಾಭಿಮಾನಿ ಸೇನೆ ವಡಗೇರಾ ತಾಲೂಕು ಸಮಿತಿ ವತಿಯಿಂದ ವಡಗೇರಾ ತಹಸಿಲ್ದಾರ್ ಅವರಿಗೆ ಮನವಿ ಸಲ್ಲಿಸಿ ಮಾತನಾಡಿದ ಅಂಬೇಡ್ಕರ್ ಸಾಭೀಮಾನಿ ಸೇನೆ ವಡಗೇರಾ ತಾಲೂಕು ಅಧ್ಯಕ್ಷರಾದ ಶ್ರೀ ಮಲ್ಲಿಕಾರ್ಜುನ ಕುಮನೂರು ಕರ್ನಾಟಕ ರಾಜ್ಯಾದ್ಯಂತ ಈ ವಿರಶೈವ ಜಂಗಮರು ಬೇಡ ಜಂಗಮರು ಎಂದು ಸುಳ್ಳು ನಕಲಿ ಜಾತಿ ಪ್ರಮಾಣ ಪತ್ರವನ್ನು ಪಡೆಯುತ್ತಿದ್ದಾರೆ ಆದರೆ ಬೇಡ ಜಂಗಮರು ರಾಜ್ಯದಲ್ಲಿ ಬೆರಳೇಣಿಕೆಯಷ್ಟಿದ್ದು ಈ ಮೂಲಕ ಮೂಲ ಪರಿಶಿಷ್ಟ ಜಾತಿಗಳಿಗೆ ಶೈಕ್ಷಣಿಕ,ಸಾಮಾಜಿಕ,ಆರ್ಥಿಕ ಹೊಡೆತ ಬಿಳುತ್ತಿದ್ದು ಇದರಿಂದ ಬಲಿತ ವೀರಶೈವ ಜಂಗಮರು ದಲಿತರ ಮೀಸಲಾತಿಯನ್ನು ಕಬಳಿಸುವ ಮುನ್ನಾರ ಕರ್ನಾಟಕದಾದ್ಯಂತ ನಡೆಯುತ್ತಿದೆ ಹಾಗಾಗಿ ವಡಗೇರಾ ತಾಲೂಕಿನಾದ್ಯಂತ ನಕಲಿ ಸುಳ್ಳು ಪರಿಶಿಷ್ಟ ಜಾತಿ ಪ್ರಮಾಣ ಪತ್ರ ನೀಡುವ ವಿರುದ್ಧ ಕ್ರಮ ಕೈಗೊಳ್ಳಬೇಕು ಜೋತೆ ತಾಲೂಕು ಆಡಳಿತ ಹಾಗೂ ಗ್ರಾಮಲೆಕ್ಕಿಗ ಅಧಿಕಾರಿಗಳು ಇದರ ನೇರಹೂಣೆ ಬರಬೇಕಾಗುತ್ತದೆ ಮನವಿ ಮೂಲಕ ಎಚ್ಚೆತ್ತುಕೊಳ್ಳದಿದ್ದರೆ ಮುಂದೆ ನಮ್ಮ ಅಂಬೇಡ್ಕರ್ ಸ್ವಾಭಿಮಾನಿ ಸೇನೆ ಸಂಘಟನೆ ವತಿಯಿಂದ ಉಗ್ರವಾದ ಹೋರಾಟವನ್ನು ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು

ಈ ಸಂದರ್ಭದಲ್ಲಿ ಅಂಬೇಡ್ಕರ್ ಸ್ವಾಭಿಮಾನಿ ಸೇನೆ ತಾಲೂಕು ಅಧ್ಯಕ್ಷರಾದ ಶ್ರೀ ಮಲ್ಲಿಕಾರ್ಜುನ ಕುಮನೂರು, ಉಪಾಧ್ಯಕ್ಷ ಬಾಲು ಚಲುವಾದಿ, ಕಾಯ9ದಶಿ9 ಮರೆಪ್ಪ ಕುಮನೂರು, ಗೌರವಾಧ್ಯಕ್ಷರಾದ ಮಲ್ಲಪ್ಪ ವಗ್ಗನೋರು, ಸದಸ್ಯರು ಚಾಂದ ಕುಮನೂರು ಹೋಬಳಿ ಅಧ್ಯಕ್ಷ ಬಾಲಪ್ಪ ಮಾಚನೂರು ಮುಂತಾದವರು ಭಾಗವಹಿಸಿದ್ದರು

ಜಾಹಿರಾತಿಗಾಗಿ ಇಂದೇ ಸಂಪರ್ಕಿಸಿ:9449732000

# ಸರಕಾರಿ ಕಾಲೇಜಿಗೆ 50 ಕಂಪ್ಯೂಟರ ಕೊಡುಗೆ-ಸಂಸದ ಭಾಂಡಗೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.14– ರಾಜ್ಯದಲ್ಲಿಯೇ ಮಾದರಿಯಾಗಿರುವ ಬಾಗಲಕೋಟೆಯ ಸರಕಾರಿ ಪ್ರಥಮ ದರ್ಜೆ ಕಾಲೇಜು ಗುಣಮಟ್ಟದ ಶಿಕ್ಷಣ ಹಾಗೂ ಉತ್ತಮ ನಾಯಕತ್ವದಿಂದ ಬೆಳವಣಿಗೆ ಹೊಂದಿದೆ ಎಂದು ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಹೇಳಿದರು.

ಸೋಮವಾರ ನವನಗರದ ಕಾಲೇಜಿಗೆ ಭೇಟಿ ನೀಡಿ, ವೀಕ್ಷಣೆ ಮಾಡಿದ ಅವರು, ಪ್ರಾಚಾರ್ಯ ಡಾ.ಅರುಣಕುಮಾರ ಗಾಳಿ ಅವರಿಂದ ಮಾಹಿತಿ ಪಡೆದು, ಕಾಲೇಜಿನಲ್ಲಿ 2800 ವಿದ್ಯಾರ್ಥಿಗಳು ವಿವಿಧ ಕೋರ್ಸ್‌ಗಳಲ್ಲಿ ಓದುತ್ತಿರುವುದು ಸಂತಸ ತಂದಿದೆ. ಇಲ್ಲಿ ಪದವಿ ಓದುತ್ತಿರುವ ಎಲ್ಲಾ ವಿದ್ಯಾರ್ಥಿಗಳ ಶೈಕ್ಷಣಿಕ ಸೌಲಭ್ಯಕ್ಕೆ ಪೂರಕವಾಗಿ ನನ್ನ ಅನುದಾನದಲ್ಲಿ 50 ಕಂಪ್ಯೂಟರ್‌ಗಳನ್ನು ನೀಡುವೆ ಎಂದು ಭರವಸೆ ನೀಡಿದರು.

ಕಾಲೇಜಿನ ಉತ್ತಮ ಆಡಳಿತ, ಗುಣಮಟ್ಟದ ಬೋಧನೆ, ಓದಲು ಪ್ರಶಾಂತವಾಗಿರುವ ಗ್ರಂಥಾಲಯ, ಕ್ರೀಡಾ ವಿಭಾಗದ ಚಟುವಟಿಕೆಗಳು, ಎನ್.ಸಿ.ಸಿ,ಎನ್.ಎಸ್.ಎಸ್,ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಘಟಕ ಮತ್ತು ಬೋಧಕೇತರ ಸಿಬ್ಬಂದಿಯವರ ಪರಿಶ್ರಮ ಮೆಚ್ಚುವಂತದ್ದಾಗಿದೆ.

ಇಂದು ವಿದ್ಯಾರ್ಥಿಗಳು ಸರ್ಕಾರಿ ಕಾಲೇಜುಗಳಲ್ಲಿ ಓದುವ ಮನೋಭಾವ ಹೊಂದಿರುವುದಕ್ಕೆ ಕಾರಣ ಈ ಕಾಲೇಜಿನ ಪರಿಸರ, ಶಿಸ್ತು ವಿದ್ಯಾರ್ಥಿಗಳ ಮೇಲೆ ಪ್ರೇರಣೆ ಮತ್ತು ಪ್ರಭಾವ ಬೀರಿದೆ. ಇಲ್ಲಿ ಕಲಿಯುವ ಮಕ್ಕಳಿಗೆ ಉದ್ಯೋಗಾವಕಾಶ ಕಲ್ಪಿಸುವ ಕೆಲಸ ಶ್ಲಾಘನಿಯವಾಗಿದೆ. ಉತ್ತಮ ನಾಯಕತ್ವ ಹಾಗೂ ಇಚ್ಛಾಶಕ್ತಿ ಇದ್ದರೆ ಸರ್ಕಾರಿ ಕಾಲೇಜುಗಳು ಎಷ್ಟು ಎತ್ತರಕ್ಕೆ ಬೆಳೆಬಹುದೆಂದು ಪಾಚಾರ್ಯ ಡಾ.ಅರುಣಕುಮಾರ ಗಾಳಿ ಅವರು ತೋರಿಸಿಕೊಟ್ಟಿದ್ದಾರೆ ಎಂದರು.

ಪ್ರಾಚಾರ್ಯ ಡಾ.ಅರುಣಕುಮಾರ ಗಾಳಿ ಮಾತನಾಡಿ, ರಾಜ್ಯಸಭಾ ಸದಸ್ಯರು ನಮ್ಮ ಕಾಲೇಜಿಗೆ ಭೇಟಿ ನೀಡಿದ್ದು ಸಂತಸವಾಗಿದೆ. ಕಾಲೇಜು ಬೆಳವಣಿಗೆಗೆ ಶಾಸಕ ಹೆಚ್.ವೈ. ಮೇಟಿ ಅವರು ಹಾಗೂ ಸದಸ್ಯರ ಸಹಾಯ, ಸಹಕಾರ ಮತ್ತು ನಮ್ಮ ಕಾಲೇಜಿನ ಎಲ್ಲಾ ಬೋಧಕರು, ಬೋಧಕೇತರ ಸಿಬ್ಬಂದಿಯವರ ನಿರಂತರ ಶ್ರಮದಿಂದ ನಮ್ಮ ಕಾಲೇಜು ಬೆಳವಣಿಗೆ ಹೊಂದಲು ಸಾಧ್ಯವಾಗಿದೆ ಎಂದರು.

# ಉತ್ತರಾದಿಮಠದಲ್ಲಿ ಶ್ರೀಕೇಶವ ದೇವರ ಪ್ರತಿಷ್ಠಾಪನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.14–ಉತ್ತರಾದಿ ಮಠಾಧೀಶರಾದ ಶ್ರೀಸತ್ಯಾತ್ಮತೀರ್ಥ ಶ್ರೀಪಾದಂಗಳವರು ರವಿವಾರ ನವನಗರದ ಶ್ರೀಮಠದಲ್ಲಿ ಕಿಲ್ಲಾ ಓಣಿಯಲ್ಲಿದ್ದ ಐತಿಹಾಸಿಕ ಶ್ರೀಕೇಶವ ದೇವರ ಮೂರ್ತಿಯನ್ನು ಪುನರ್ ಪ್ರತಿಷ್ಠಾಪಿಸಿದರು.

ಬೆಳಿಗ್ಗೆ ಶ್ರೀಗಳಿಂದ ಜರುಗಿದ ಶ್ರೀಮೂಲರಾಮದೇವರ ಪೂಜೆಯನ್ನು ಕಣ್ತುಂಬಿಕೊಳ್ಳಲು ಭಕ್ತರು ಸಹಸ್ರಾರು ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು. ಶ್ರೀಕೇಶವ ದೇವರು, ಶ್ರೀಮಠದ ಆವರಣದಲ್ಲಿ ಶ್ರೀರುದ್ರದೇವರನ್ನು ಪ್ರತಿಷ್ಠಾಪಿಸಿದ ನಂತರ ಸಭಾ ಕಾರ್ಯಕ್ರಮದಲ್ಲಿ ಸ್ವಾಮೀಜಿ ಪಾಲ್ಗೊಂಡರು.

ಸಭೆಯಲ್ಲಿ ಶ್ರೀಮಠಕ್ಕೆ ಶ್ರೀಕೇಶವದೇವರ ವಿಗ್ರಹವನ್ನು ಅರ್ಪಿಸಿದ ಶ್ರೀನಿವಾಸಾಚಾರ್ಯ ಮಳಗಿ ಕುಟುಂಬದವರನ್ನು ಸನ್ಮಾನಿಸಿ ಆಶೀರ್ವದಿಸಿದರು.

ನಂತರ ಪ್ರವಚನ ನೀಡಿದ ಶ್ರೀಗಳು, ಶ್ರೀಕೇಶವದೇವರ ನಿತ್ಯ ಸ್ಮರಣೆಯನ್ನು ಮಾಡಬೇಕು. ಭಗವಂತನ ಸ್ಮರಣೆಯಿಂದ ಸಕಾರಾತ್ಮಕತೆ ಉಂಟಾಗುತ್ತದೆ. ಪಾಪಗಳು ಪರಿಹಾರವಾಗುತ್ತದೆ ಎಂದು ಹೇಳಿದರಲ್ಲದೇ, ವಿಪ್ರರು ನಿತ್ಯ ಸಂಧ್ಯಾವಂದನೆ ಮಾಡಬೇಕು. ಭಗವಂತನ ನಾಮಸ್ಮರಣೆಯಲ್ಲಿ ಸಕಲ ಶಕ್ತಿಯೂ ಅಡಗಿದೆ. ಅದರ ಮಹತ್ವ ತಿಳಿದುಕೊಳ್ಳುವ ನಿಟ್ಟಿನಲ್ಲಿ ಆಸಕ್ತರಾಗಬೇಕೆಂದು ಕರೆ ನೀಡಿದರು.

ನಂತರ ಶ್ರೀಗಳು ಶ್ರೀಮಠದ ಮುಂಭಾಗ ಸಹಸ್ರಾರು ಸಂಖ್ಯೆಯಲ್ಲಿ ನೆರೆದಿದ್ದ ಭಕ್ತರಿಗೆ ಮುದ್ರಧಾರಣೆ ನೆರವೇರಿಸಿದರು. ಚಿಕ್ಕಮಕ್ಕಳಿಂದ ಹಿರಿಯರವರೆಗೆ ಮುದ್ರಧಾರಣೆ ಪಡೆದ ಭಕ್ತರು ಹರಿಸರ್ವೋತ್ತಮ, ವಾಯು ಜೀವೋತ್ತಮ ಘೋಷಣೆಗಳನ್ನು ಮೊಳಗಿಸಿದರು.

ಮಧ್ಯಾಹ್ನ ತೀರ್ಥಪ್ರಸಾದ ಸ್ವೀಕರಿಸಿದ ನಂತರ ಶ್ರೀಗಳು ಫಲಮಂತ್ರಾಕ್ಷತೆಯನ್ನು ನೀಡಿ ಭಕ್ತರನ್ನು ಆಶೀರ್ವದಿಸಿದರು. ಸಂಜೆ ಕಾರ್ಯಕ್ರಮಗಳು ಸಂಪನ್ನಗೊಂಡವು. ಶ್ರೀಮಠದ ದಿವಾನರಾದ ಶಶಿ ಆಚಾರ್ಯ, ಪಾಂಡುರಂಗಾಚಾರ್ಯ ರೊಟ್ಟಿ(ತಿರುಪತಿ), ಕೆ.ಹುಚ್ಚಾಚಾರ್ಯ, ರಘೋತ್ತಮಾಚಾರ್ಯ ನಾಗಸಂಪಿಗೆ, ಬಿಂದುವಾಧವಾಚಾರ್ಯ ನಾಗಸಂಪಿಗೆ, ವಿಜಯೇಂದ್ರಾಚಾರ್ಯ ಯತ್ನಟ್ಟಿ, ಆದಿಶೇಷಾಚಾರ್ಯ ಯಲಗೂರ ಹಾಗೂ ಇತರರು ಧಾರ್ಮಿಕ ಕಾರ್ಯಕ್ರಮಗಳ ನೇತೃತ್ವ ವಹಿಸಿದ್ದರು.

# ವಕ್ಫ್ ತಿದ್ದುಪಡಿ ವಿರೋಧಿಸಿ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.14– ವಕ್ಫ್ ತಿದ್ದುಪಡಿ ಕಾಯ್ದೆ ವಿರೋಧಿಸಿ ಮುಸ್ಲಿಂ ಪರ್ಸನಲ್ ಲಾ ಬೋರ್ಡ್ ಜಿಲ್ಲಾ ಘಟಕ ನಗರದಲ್ಲಿ ಸೋಮವಾರ ಬೃಹತ್ ಪ್ರತಿಭಟನೆ ನಡೆಸಿತು. ಪ್ರತಿಭಟನೆಗೆ ಚಾಲನೆ ನೀಡಿ ಮಾತನಾಡಿದ ಮಾಜಿ ಸಚಿವ ಎಸ್. ಆರ್. ಪಾಟೀಲ, ಕಾಂಗ್ರೆಸ್ ಸರ್ಕಾರ ಜನರ ಹಿತ ಕಾಯಲು ಬದ್ಧವಾಗಿದೆ ಎಂದು ಹೇಳಿ, ಈ ಪ್ರತಿಭಟನೆಯ ಕೂಗು ಮೋದಿ ಕಿವಿಗೆ ಮುಟ್ಟಬೇಕು ಎಂದು ಹೇಳಿದರು.

ನಗರದ ಅಂಜುಮನ್ ಸಂಸ್ಥೆಯಿಂದ ಪ್ರತಿಭಟನೆ ಆರಂಭಗೊಂಡು, ಜಿಲ್ಲಾ ಆಸ್ಪತ್ರೆ, ಕೋರ್ಟ್ ಸರ್ಕಲ್ ಮಾರ್ಗವಾಗಿ ಜಿಲ್ಲಾಧಿಕಾರಿಗಳ ಕಚೇರಿ ಎದುರು ಸಭೆಯಾಗಿ ಮಾರ್ಪಟ್ಟಿತು. ಜಿಲ್ಲೆಯ ವಿವಿಧೆಡೆಗಳಿಂದ ಆಗಮಿಸಿದ್ದ ಸಾವಿರಾರು ಸಂ–ಖ್ಯೆಯ ಮುಸ್ಲಿಂ ಬಾಂಧವರು ಪ್ರತಿಭಟನೆಯಲ್ಲಿ ಪಾಲ್ಗೊಂಡು ಘೋಷಣೆಗಳ ಮೂಲಕ ತಮ್ಮ ಆಕ್ರೋಶ ವ್ಯಕ್ತಪಡಿಸಿದರು. ವಕ್ಫ್ ತಿದ್ದುಪಡಿ ಧಾರ್ಮಿಕ ಮತ್ತು ಆರ್ಥಿಕ ಹಕ್ಕುಗಳಿಗೆ ಧಕ್ಕೆ ತರುತ್ತದೆ ಎಂದು ಆಕ್ಷೇಪಿಸಿದ ಪ್ರತಿಭಟನಾಕಾರರು, ತಕ್ಷಣ ತಿದ್ದುಪಡಿ ಕಾಯ್ದೆಯನ್ನು ಹಿಂದಕ್ಕೆ ಪಡೆಯುವಂತೆ ಒತ್ತಾಯಿಸಿದರು. ವಕ್ಫ್ ಆಸ್ತಿಗಳ ಮೇಲೆ ಸರ್ಕಾರದ ಹಿಡಿತವನ್ನು ತೆಗೆದುಹಾಕಬೇಕೆಂಬ ಒತ್ತಾಯವೂ ಕೇಳಿಬಂತು. ಸಭೆಯಲ್ಲಿ ಪ್ರಮುಖರು ಮಾತನಾಡಿ, ಕೇಂದ್ರ ಸರ್ಕಾರದ ಕ್ರಮವನ್ನು ಸಂವಿಧಾನಬಾಹಿರವೆಂದು ಖಂಡಿಸಿದರು. ನಂತರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು. ಪ್ರತಿಭಟನೆಯ ಸಂದರ್ಭದಲ್ಲಿ ಬಿಗಿಯಾದ ಪೊಲೀಸ್ ಬಂದೋಬಸ್ತ್ ಒದಗಿಸಲಾಗಿತ್ತು.

# ಶಕ್ತಿ ಯೋಜನೆ ಸಂಭ್ರಮಾಚರಣೆ ಕಾರ್ಯಕ್ರಮ




ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರವು ಜಾರಿಗೆ ತಂದ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಶಕ್ತಿ ಯೋಜನೆಯಿಂದ ಇಲ್ಲಿಯವರೆಗೆ ಸುಮಾರು 500 ಕೋಟಿ ಫಲಾನುಭವಿಗಳು ಸದುಪಯೋಗ ಪಡಿಸಿಕೊಂಡ ಹಿನ್ನೆಲೆಯಲ್ಲಿ ಸೋಮವಾರ ಸ್ಥಳೀಯ ಗ್ಯಾರಂಟಿ ಯೋಜನೆ ಸಮಿತಿ ವತಿಯಿಂದ ಸಂಭ್ರಮಾಚರಣೆ ಹಾಗೂ ಪೂಜಾ ಕಾರ್ಯಕ್ರಮವನ್ನು ಬಸ್ ನಿಲ್ದಾಣದಲ್ಲಿ ಹಮ್ಮಿಕೊಳ್ಳಲಾಯಿತು. ಈ ಸಂದರ್ಭದಲ್ಲಿ ಪುರಸಭೆ ಮಾಜಿ ಸದಸ್ಯ ಕಾಂಗ್ರೆಸ್ ಮುಖಂಡ ಪ್ರಭುಗೌಡ ಮದರಕಲ್ಲ ಮಾತನಾಡಿ ಕಾಂಗ್ರೆಸ್ ಸರ್ಕಾರವು ತಂದಿರುವ ಐದು ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ "ಶಕ್ತಿ" ಯೋಜನೆಯಿಂದ ಕಳೆದ ಎರಡು ವರ್ಷಗಳಲ್ಲಿ 500 ಕೋಟಿ ಮಹಿಳೆಯರು ಉಚಿತ ಪ್ರಯಾಣ ನಡೆಸಿದ್ದು ಈ ಯೋಜನೆಗೆ ಇಲ್ಲಿಯವರೆಗೆ ರೂ.12.669 ಕೋಟಿ ಹಣ ವಿನಿಯೋಗಿಸಲಾಗಿದೆ, ಇಡೀ ದೇಶದಲ್ಲಿಯೇ ಇದೊಂದು ಮಾದರಿ ಯೋಜನೆಯಾಗಿದೆ. ರಾಜ್ಯದ ಮಹಿಳೆಯರನ್ನು ಸ್ವಾವಲಂಬಿಯನ್ನಾಗಿ ಮಾಡಿಸುವಲ್ಲಿ ಪೂರಕವಾದ ಈ ಯೋಜನೆಯನ್ನು ಜಾರಿಗೆ ತಂದ ಮಾನ್ಯ ಮುಖ್ಯಮಂತ್ರಿಗಳಿಗೆ, ಅವರ ಮಂತ್ರಿ ಮಂಡಲದ ಸಚಿವರಿಗೆ ಹಾಗೂ ಕ್ಷೇತ್ರದ ಶಾಸಕರಿಗೆ ಅಭಿನಂದಿಸುತ್ತೇನೆ ಎಂದು ತಿಳಿಸಿದರು. ಗ್ಯಾರೆಂಟಿ ಯೋಜನಾ ಸಮಿತಿ ಅಧ್ಯಕ್ಷ ಸಂಗಮೇಶ ದೇಸಾಯಿ ಮಾತನಾಡಿ ಈ ಯೋಜನೆಯಿಂದಾಗಿ ಬಡಸಾಮಾನ್ಯ ಕುಟುಂಬದ ಮಹಿಳೆಯರಿಗೆ ತಮ್ಮ ಜೀವನ ಸಂಸಾರ ಭದ್ರಗೊಳಿಸಲು ತುಂಬಾ ಸಹಕಾರಿಯಾಗಿದೆ ಎಂದರು. ಪುರಸಭೆ ಮಾಜಿ ಅಧ್ಯಕ್ಷೆ ನೀಲಮ್ಮಗೌಡತಿ ಪಾಟೀಲ ಮಾತನಾಡಿ ಕಾಂಗ್ರೆಸ್ ಸರ್ಕಾರದ ಈ 5 ಯೋಜನೆಗಳಲ್ಲಿ ಶಕ್ತಿ ಯೋಜನೆ ಮಹಿಳೆಯರಿಗೆ ಅತಿ ಹೆಚ್ಚು ಉಪಯುಕ್ತವಾದ ಯೋಜನೆಯಾಗಿದೆ ಮಹಿಳಾ ಸಬಲೀಕರಣದ ದೃಷ್ಟಿಯಿಂದ ಇದು ಬಹುದೊಡ್ಡ ಯೋಜನೆಯಾಗಿದೆ ಇದರಿಂದ ಕೋಟ್ಯಂತರ ಕುಟುಂಬಗಳಿಗೆ ಅನುಕೂಲವಾಗಿದೆ ಇದಕ್ಕಾಗಿ ನಾನು ಮಾನ್ಯ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗೂ ಕ್ಷೇತ್ರದ ಶಾಸಕರಿಗೆ ಅಭಿನಂದಿಸುತ್ತೇವೆ ಎಂದರು. ಕಾರ್ಯಕ್ರಮದಲ್ಲಿ ಪುರಸಭೆ ಅಧ್ಯಕ್ಷೆ ಜುಬೇದ ಬೇಗಂ ಜಮಾದಾರ, ಉಪಾಧ್ಯಕ್ಷೆ ಗೌರಮ್ಮ ಕುಂಬಾರ, ಮಹಿಳಾ ಘಟಕದ ಜಿಲ್ಲಾ ಉಪಾಧ್ಯಕ್ಷೆ ಅಂಬಿಕಾ ಪಾಟೀಲ, ಪುರಸಭೆ ಸದಸ್ಯೆ ಅಕ್ಕಮಹಾದೇವಿ ಕಟ್ಟಿಮನಿ, ಅಶ್ವಿನಿ ಪಾಟೀಲ, ನಿಂಗಮ್ಮ ಪಾಟೀಲ, ಜ್ಯೋತಿ ಮೈಲೇಶ್ವರ, ಸಂಗನಗೌಡ ಅಸ್ಕಿ, ಗ್ಯಾರಂಟಿ ಯೋಜನಾ ಸಮಿತಿಯ ಸದಸ್ಯರಾದ ಇಬ್ರಾಹಿಂ ಮನ್ಸೂರ, ಮಹೇಶ ಚಲವಾದಿ, ಮಹಿಬೂಬಅಲಿ ಮಕಾಂದಾರ, ಮೋದಿನ ನಗಾರ್ಚಿ, ಮಲ್ಲು ಕುಂಬಾರ, ಆಸೀಫ ಕೆಂಬಾವಿ, ಘಟಕ ವ್ಯವಸ್ಥಾಪಕ ಎ.ಬಿ.ಭೋವಿ, ಸಂಚಾರ ನಿರೀಕ್ಷಕ ಎನ್. ಐ.ಬಿರಾದಾರ, ಸ.ಕಾ.ಅ. ರಮೇಶ್ ತಾಳಿಕೋಟಿ ಲೆಕ್ಕಪತ್ರ ಮೇಲ್ವಿಚಾರಕ ಡಿ ಎಂ ನದಾಫ್ ಸಿಬ್ಬಂದಿ ಮೇಲ್ವಿಚಾರಕ ಬಿ. ಬಿ.ಚೋಕಾವಿ, ಚಾಲಕ ಕೆ.ಹೆಚ್.ಓಲೇಕಾರ, ಸಾ.ನಿ. ಎಸ್.ಬಿ.ಕನ್ನೊಳ್ಳಿ, ಸಂಚಾರ ನಿರೀಕ್ಷಕ ಎಸ್.ಬಿ.ಆಲ್ದಾಳ, ಸಾ.ನಿ.ಕೆ.ಸಿ. ಲಕ್ಕುಂಡಿಮಠ, ಎಂ.ಎಂ.ಚಲವಾದಿ, ಹಾಗೂ ಘಟಕದ ಸಿಬ್ಬಂದಿಗಳು ಸಿಬ್ಬಂದಿಗಳು ಇದ್ದರು.

## ರೈತರ ಧರಣಿ ನಿರತ ಸ್ಥಳಕ್ಕೆ ಶಾಸಕ ರಾಜುಗೌಡ ಪಾಟೀಲ ಭೇಟಿ

# ಬೇಡಿಕೆ ಈಡೇರಿಕೆಗೆ ಪ್ರಾಮಾಣಿಕ ಪ್ರಯತ್ನದ ಭರವಸೆ




ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ:ಬೂದಿಹಾಳ–ಪೀರಾಪೂರ ಏತ ನೀರಾವರಿ ಯೋಜನೆಯ ಅಂತಿಮ ಹಂತದ ಎಫ್‌ಐಸಿ ಕಾಮಗಾರಿ ಪೂರ್ತಿಗೊಳಿಸುವಂತೆ ಒತ್ತಾಯಿಸಿ ನೀವು ನಡೆಸುತ್ತಿರುವ ಈ ಹೋರಾಟಕ್ಕೆ ನನ್ನ ಸಂಪೂರ್ಣ ಬೆಂಬಲವಿದೆ ಏಕೆಂದರೆ ನಾನು ಕೂಡ ಒಬ್ಬ ರೈತ ಕುಟುಂಬದಿಂದ ಬಂದವನಾಗಿದ್ದು ನನಗೆ ರೈತರ ಸಮಸ್ಯೆಗಳ ಅರಿವು ಇದೆ. ನೀವು ಧರಣಿ ಕುಳಿತುಕೊಳ್ಳುವುದಕ್ಕಿಂತ ಮೊದಲೇ ನಾನು ಮಾನ್ಯ ಮುಖ್ಯಮಂತ್ರಿಗಳು ಹಾಗೂ ನೀರಾವರಿ ಸಚಿವರೊಂದಿಗೆ ಮಾತನಾಡಿದ್ದೇನೆ ಇದಕ್ಕೆ ಅಗತ್ಯವಾದ ಡಿಪಿಆರ್ ಮಾಡಿಸಿ ಬೋರ್ಡ್‌ಗೆ ಕಳಿಸಲು ತಿಳಿಸಿದ್ದಾರೆ.

> ಬೂದಿಹಾಳ ಪೀರಾಪೂರ ಏತ ನೀರಾವರಿ ಯೋಜನೆಯ ಕೊನೆಯ ಹಂತದ ಕಾಮಗಾರಿ ಪೂರ್ಣಗೊಳಿಸಲು ನಾನು ಈಗಾಗಲೇ ಶಕ್ತಿಮೀರಿ ಪ್ರಯತ್ನಿಸಿದ್ದೇನೆ ಈಗ ಮತ್ತೆ ನಿಮ್ಮ ಜೊತೆಗೂಡಿಯೂ ಕೆಲಸ ಮಾಡಲು ಸಿದ್ಧ ನನಗೆ ಅಧಿಕಾರ ಮುಖ್ಯವಲ್ಲ ನಿಮ್ಮೆಲ್ಲರ ಪ್ರೀತಿ ವಿಶ್ವಾಸ ಆಶೀರ್ವಾದ ಮುಖ್ಯ.
>
> **–ರಾಜುಗೌಡ ಪಾಟೀಲ ಶಾಸಕ ದೇವರ ಹಿಪ್ಪರಗಿ.**

ಈ ಕುರಿತು ಇಲಾಖೆ ಅಧಿಕಾರಿಗಳನ್ನು ಮಾತನಾಡಿದ್ದೇನೆ ನಾನು ಆತ್ಮಸಾಕ್ಷಿಗೆ ಅನುಗುಣವಾಗಿ ಕೆಲಸ ಮಾಡುತ್ತೇನೆ ನನಗೆ ಯಾವ ಪ್ರಚಾರವೂ ಬೇಡ ನಾನು ಶಾಸಕನಲ್ಲ ನಿಮ್ಮ ಸೇವಕ ಮಾತ್ರ ಎಂದು ದೇವರ ಹಿಪ್ಪರಗಿ ಶಾಸಕ ರಾಜುಗೌಡ ಪಾಟೀಲ( ಕು.ಸಾಲವಾಡಗಿ) ಹೇಳಿದರು. ತಾಲೂಕಿನ ಕೊಡಗಾನೂರ ಗ್ರಾಮದ ಹತ್ತಿರ ಬೂದಿಹಾಳ ಪೀರಾಪುರ ಏತ ನೀರಾವರಿ ಎಫ್ ಐ ಸಿ ಕಾಮಗಾರಿ ಪೂರ್ಣಗೊಳಿಸಲು ಆಗ್ರಹಿಸಿ ರೈತರು ನಡೆಸುತ್ತಿರುವ ನಾಲ್ಕನೇ ದಿನದ ಅರ ಬೆತ್ತಲೆ ಧರಣಿ ಸ್ಥಳಕ್ಕೆ ಭೇಟಿ ನೀಡಿ ಅವರು ಮಾತನಾಡಿದರು. ಹಿಂದಿನ ಅವಧಿಯಲ್ಲಿ ಏನಾಗಿದೆ ಎಂಬುದು ಕುರಿತು ಮಾತನಾಡುವುದು ಬೇಡ ಈಗ ನಾವು ಹೇಗೆ ಈ ಯೋಜನೆ ಪೂರ್ಣಗೊಳಿಸಬಹುದು ಎಂಬುದರ ಕುರಿತು ಚಿಂತಿಸಬೇಕಾಗಿದೆ ನೀವೆಲ್ಲರೂ ಸಿದ್ಧರಿದ್ದರೆ ನಾನು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ನೀರಾವರಿ ಸಚಿವರೊಂದಿಗೆ ನಿಮ್ಮ ಜೊತೆಯಲ್ಲಿದ್ದು ಮಾತನಾಡುತ್ತೇನೆ, ಸರ್ಕಾರದ ಮಟ್ಟದಲ್ಲಿ ಕೆಲಸವಾಗಬೇಕಾದರೆ ಕೆಲವು ಮಾರ್ಗಸೂಚಿಗಳ ನಾವು ಅನುಸರಿಸಬೇಕಾಗುತ್ತದೆ ಇದು ಕೂಡ ನಮ್ಮ ಗಮನದಲ್ಲಿರಬೇಕು ನಿಮ್ಮ ಈ ಹೋರಾಟ ತಾರ್ಕಿಕ ಅಂತ್ಯ ಕಾಣುವವರೆಗೂ ನಾನು ನಿಮ್ಮ ಜೊತೆಯಲ್ಲಿ ಇರುತ್ತೇನೆ, ಔಟ್ಲೆಟ್ ಗಳಬಳಿ ಕೃಷಿ ಹೊಂಡ ಸ್ಥಾಪಿಸಿದರೆ ನೀರನ್ನು ಎಲ್ಲ ಹೊಲಗಳಿಗೂ ಹರಿಸಲು ಸಾಧ್ಯವಿದೆ ಎಂಬ ಸಲಹೆ ಬಂದಿದೆ ಎಲ್ಲ ರೈತರು ಸಿದ್ಧರಿದ್ದರೆ ನಾನು ಈ ಕುರಿತು ಅಧಿಕಾರಿಗಳೊಂದಿಗೆ ಮಾತನಾಡುತ್ತೇನೆ ಎಂದರು. ಪ್ರಗತಿಪರ ರೈತ ಮುಖಂಡರಾದ ಎಸ್.ಎಸ್.ಪಾಟೀಲ ಅಸ್ಕಿ, ಜಿಪಂ ಮಾಜಿ ಸದಸ್ಯ ಬಸನಗೌಡ ವಣಿಕ್ಯಾಳ, ಜೆಡಿಎಸ್ ಜಿಲ್ಲಾ ಅಧ್ಯಕ್ಷ ಬಸನಗೌಡ ಮಾಡಗಿ, ಯಾದಗಿರಿ ಜಿಲ್ಲಾ ರೈತ ಸಂಘದ ಅಧ್ಯಕ್ಷ ಮಲ್ಲನಗೌಡ ಪಾಟೀಲ ರೈತರ ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಿ ಮಾತನಾಡಿ ರೈತರ ನ್ಯಾಯಯುತ ಬೇಡಿಕೆ ಈಡೇರಿ–ಕೆಗಾಗಿ ಶಾಸಕ ರಾಜುಗೌಡರು ಸರ್ಕಾರದ ಮಟ್ಟದಲ್ಲಿ ಶಕ್ತಿ ಮೀರಿ ಪ್ರಯತ್ನಿಸಬೇಕು ಎಂದು ತಿಳಿಸಿದರು. ಹೋರಾಟದ ನೇತೃತ್ವ ವಹಿಸಿದ ಅಖಂಡ ಕರ್ನಾಟಕ ರೈತ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ ಅವರು ಮಾತನಾಡಿ ಕಳೆದ 3 ದಿನಗಳಿಂದ ಈ ನಮ್ಮ ಹೋರಾಟ ನಡೆಯುತ್ತಿದ್ದರು ಇಲ್ಲಿಯವರೆಗೆ ಜಿಲ್ಲಾ ಉಸ್ತುವಾರಿ ಸಚಿವರು ಬಂದಿಲ್ಲ ಅವರ ಈ ನಿರ್ಲಕ್ಷ್ಯ ಧೋರಣೆಯನ್ನು ನಾವು ವಿರೋಧಿಸುತ್ತೇವೆ ನಮ್ಮ ಬೇಡಿಕೆ ಈಡೇರಿಸದೆ ಇದ್ದಲ್ಲಿ ಮುಂದಿನ ಹಂತದಲ್ಲಿ ಇದಕ್ಕಿಂತಲೂ ಉಗ್ರವಾದ ಹೋರಾಟವನ್ನು ನಡೆಸುತ್ತೇವೆ ಕೊನೆಗೆ ಆಮರಣಾಂತ ಉಪವಾಸವನ್ನು ನಡೆಸಲು ಹಿಂಜರಿಯುವುದಿಲ್ಲ ಮುಂದೆ ಆಗುವ ಅನಾಹುತಗಳಿಗೆ ಸರ್ಕಾರವೇ ಜವಾಬ್ದಾರಿ ಆಗಬೇಕಾಗುತ್ತದೆ ಎಂದು ಎಚ್ಚರಿಸಿದರು. ಧರಣಿಯಲ್ಲಿ ರೈತ ಮುಖಂಡರಾದ ಪ್ರಭುಗೌಡ ಬಿರಾದಾರ, ಗುರನಗೌಡ ಪಾಟೀಲ, ಮಡು ಸಾಹುಕಾರ ಬಿರಾದಾರ, ಮಲ್ಲನಗೌಡ ಪೊಲೀಸಪಾಟೀಲ, ಶಂಕರಗೌಡ ದೇಸಾಯಿ, ಶರಣಭೂಪಾಲ ದೇಶಮುಖ, ಸುರೇಶಕುಮಾರ ಇಂಗಳಗೇರಿ, ಮಲ್ಲನಗೌಡ ಪಾಟೀಲ, ರಾಜುಗೌಡ ಕೋಳೂರು, ರಾಜುಗೌಡ ಇಬ್ರಾಹಿಂಪುರ, ರಾಜುಗೌಡ ಗುಂಡಕನಾಳ, ಆನಂದಗೌಡ ಪಾಟೀಲ, ಡಾ.ಬಲವಂತರಾಯಗೌಡ ನಡಹಳ್ಳಿ, ಅಶೋಕ ಅಸ್ಕಿ, ಗುರುರಾಜ ಪಡಶೆಟ್ಟಿ, 38 ಗ್ರಾಮಗಳ ರೈತ ಪ್ರತಿನಿಧಿಗಳು ಹಾಗೂ ವಿವಿಧ ರೈತ ಸಂಘಟನೆಗಳ ಮುಖ್ಯಸ್ಥರು ಇದ್ದರು.

# 11ನೇ ಕೃಷಿ ಗಣತಿ: ಜಿಲ್ಲಾಮಟ್ಟದ ಸಮನ್ವಯ ಸಮಿತಿ ಸಭೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ14–2021–22ನೇ ಸಾಲಿನ 11ನೇ ಕೃಷಿ ಗಣ–ತಿಯ 2ನೇ ಹಂತದ ಕ್ಷೇತ್ರಕಾರ್ಯ ಪೂರ್ಣಗೊಳಿಸುವ ಸಂಬಂಧ ಜಿಲ್ಲಾಮಟ್ಟದ ಸಮನ್ವಯ ಸಮಿತಿ ಸಭೆಯು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರ ಅಧ್ಯಕ್ಷತೆಯಲ್ಲಿ ನಡೆಯಿತು.

ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಹೊಸ ಕೃಷಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ರೂಪಿಸಲು ಮತ್ತು ಅವುಗಳ ಪ್ರಗತಿಯನ್ನು ಮೌಲ್ಯಮಾಪನ ಮಾಡಲು ಅಗತ್ಯವಿರುವ ತಾಲೂಕು ಗ್ರಾಮಮಟ್ಟದ ದತ್ತಾಂಶವನ್ನು ಒದಗಿಸುವುದು ಮತ್ತು ಭವಿಷ್ಯದ ಕೃಷಿ ಸಮೀಕ್ಷೆಗಳನ್ನು ಕೈಗೊಳ್ಳಲು ಸಾಗುವಳಿ ಹಿಡುವಳಿಗಳ ಅಂಕಿ ಅಂಶಗಳ ಚೌಕಟ್ಟನ್ನು ಒದಗಿಸುವುದು ಕೃಷಿ ಗಣತಿಯ ಉದ್ದೇಶವಾಗಿದೆ ಎಂದು ತಿಳಿಸಿದರು.

2024ರ ಆಗಸ್ಟ್ ಮಾಹೆಯಲ್ಲಿ 1ನೇ ಹಂತದ ಕೃಷಿಗಣತಿಯ ಕುರಿತು ಜಿಲ್ಲಾಮಟ್ಟದ ಸಮನ್ವಯ ಸಮಿತಿ ಸಭೆ ನಡೆಸಿ ವರದಿಯನ್ನು ಅಂತಿಮಗೊಳಿಸಲಾಗಿದೆ. ಪ್ರಸ್ತುತ ರಾಜ್ಯಾದ್ಯಂತ 2021–22ನೇ ಸಾಲಿನ ಮಾಹಿತಿ ಆಧರಿಸಿ 11ನೇ ಕೃಷಿ ಗಣತಿಯ 2ನೇ ಹಂತದ ಗಣತಿ ಕಾರ್ಯವನ್ನು ಪೂರ್ಣಗೊಳಿಸಿದ್ದು, ಅದರಲ್ಲಿ ಸಕಾಲಿಕ ವರದಿ ಯೋಜನೆಗೆ ಆಯ್ಕೆಯಾದ ಗ್ರಾಮಗಳಲ್ಲಿ ಭೂಬಳಕೆ ವಿವರಗಳು, ನೀರಾವರಿಯ ಮೂಲಗಳು, ನೀರಾವರಿಯಾದ ಕ್ಷೇತ್ರ ಮತ್ತು ವಿವಿಧ ಬೆಳೆಗಳ ವಿಸ್ತೀರ್ಣದ ಮಾಹಿತಿಯನ್ನು ಇದೆ ಮೊದಲ ಬಾರಿಗೆ ಮೊಬೈಲ್ ಆಪ್ ಮೂಲಕ ಕ್ಷೇತ್ರ ಕಾರ್ಯಕೈಗೊಳ್ಳಲಾಗಿದೆ. ಈ ಮಾಹಿತಿಯನ್ನು ಸಂಗ್ರಹಿಸಿ ಇಡೀ ತಾಲೂಕಿಗೆ ಹಾಗೂ ಜಿಲ್ಲೆಗೆ ಅನ್ವಯವಾಗುವಂತೆ ಎಸ್ಟಿಮೇಟ್ ವರದಿಯನ್ನು ತಯಾರಿಸಲಾಗುತ್ತದೆ ಎಂದು ತಿಳಿಸಿದರು.

2021–22ನೇ ಸಾಲಿನ 11ನೇ ಕೃಷಿ ಗಣತಿಯ 2ನೇ ಹಂತದ ಕ್ಷೇತ್ರಕಾರ್ಯಕ್ಕೆ ಸಂಬಂಧಿಸಿದಂತೆ ಅಧಿಕಾರಿಗಳು ನಿಗದಿತ ಅವಧಿಯಲ್ಲಿ ದತ್ತಾಂಶ ಪರಿಶೀಲಿಸಿ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳಿಗೆ ದೃಢೀಕರಣ ಸಲ್ಲಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಜಿಲ್ಲಾಮಟ್ಟದ ಸಮನ್ವಯ ಸಮಿತಿಯ ಸದಸ್ಯ ಕಾರ್ಯದರ್ಶಿಗಳಾಗಿರುವ ಜಿಲ್ಲಾ ಸಂಖ್ಯಾಸಂಗ್ರಹಣಾಧಿಕಾರಿಗಳಾದ ಡಾ.ತಿಪ್ಪಣ್ಣ ಅವರು, ಕೃಷಿ ಗಣ–ತಿಯ ಹಿನ್ನೆಲೆ, ಕೃಷಿ ಗಣತಿಯ ವಿಧಾನ, 11ನೇ ಕೃಷಿ ಗಣತಿಯ 1ನೇ ಹಂತದ ಕಾರ್ಯಕ್ಷೇತ್ರದ ಬಗ್ಗೆ ತಿಳಿಸಿದರು.

ಸಭೆಯಲ್ಲಿ ಕೃಷಿ ಇಲಾಖೆಯ ಜಂಟಿ ನಿರ್ದೇಶಕರು, ತೆ–ೋಟಗಾರಿಕಾ ಇಲಾಖೆಯ ಉಪ ನಿರ್ದೇಶಕರು, ಭೂ ದಾಖಲೆಗಳ ಉಪ ನಿರ್ದೇಶಕರು, ಜಿಲ್ಲಾ ಎನ್‌ಐಸಿ ಅಧಿಕಾರಿ, ಸಹಾಯಕ ಜಿಲ್ಲಾ ಸಂಖ್ಯಾಸಂಗ್ರಹಣಾಧಿಕಾರಿ ಶರಣಪ್ಪ, ವಿವಿಧ ವಿಷಯಗಳ ವಿಷಯ ನಿರ್ವಾಹಕರು ಇದ್ದರು.

# ಲಿಂಗರಾಜ ಕಣ್ಣಿ ಉಚ್ಚಾಟನೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.14: ಕಲಬುರಗಿ ದಕ್ಷಿಣ ಗ್ರಾಮೀಣ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಲಿಂಗರಾಜ ಕಣ್ಣಿ ಮಾದಕ ದ್ರವ್ಯ ಸಾಗಾಣಿಕೆಯಲ್ಲಿ ಭಾಗಿಯಾಗಿದ್ದಾರೆಂದು ಮಾಧ್ಯಮದ ಮುಖೇನ ಆರೋಪ ಬಂದಿರುವ ಪ್ರಯುಕ್ತ ಇವರನ್ನು ತಕ್ಷಣವೇ ಜಾರಿಗೆ ಬರುವಂತೆ ಕಾಂಗ್ರೆಸ್ ಪಕ್ಷದ ಪ್ರಾಥಮಿಕ ಸದಸ್ಯತ್ವದಿಂದ ಉಚ್ಚಾಟನೆ ಮಾಡಲಾಗಿದೆ ಎಂದು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ ಜಗದೇವ ಗುತ್ತೇದಾರ ತಿಳಿಸಿದ್ದಾರೆ.

# ಶಕ್ತಿ ಯೋಜನೆ-500 ಕೋಟಿ ಮಹಿಳಾ ಪ್ರಯಾಣಿಕರು ಬಾಗಲಕೋಟೆಯಲ್ಲಿ ಸಿಹಿ ಹಂಚಿ ಸಂಭ್ರಮಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.14–ಸರಕಾರದ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಶಕ್ತಿ ಯೋಜನೆಯಲ್ಲಿ 500 ಕೋಟಿ ಮಹಿಳಾ ಪ್ರಯಾಣಿಕರ ಪ್ರಯಾಣ ಸಂಭ್ರಮದ ಅಂಗವಾಗಿ ನವನಗರದ ಬಸ್ ನಿಲ್ದಾಣದಲ್ಲಿ ಸಿಹಿ ಹಂಚಿ ಸಂಭ್ರಮಾಚರಣೆ ಮಾಡಲಾಯಿತು.

ಸೋಮವಾರ ನವನಗರದ ಬಸ್ ನಿಲ್ದಾಣದಲ್ಲಿ ವಾಯವ್ಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ವತಿಯಿಂದ ಹಮ್ಮಿಕೊಂಡ ಮಹಿಳಾ ಪ್ರಯಾಣಿಕರ ಸಂಭ್ರಮಾಚರಣೆ ಅಂಗವಾಗಿ ಶಾಸಕ ಹಾಗೂ ಬಾಗಲಕೋಟೆ ಪಟ್ಟಣ ಅಭಿವೃದ್ದಿ ಪ್ರಾಧಿಕಾರದ ಅಧ್ಯಕ್ಷ ಎಚ್.ವಾಯ್. ಮೇಟಿ ಶೃಂಗಾರಗೊಂಡ ಬಸ್‌ಗೆ ಪೂಜೆ ಸಲ್ಲಿಸಿ ನೆರೆದ ಮಹಿಳಾ ಪ್ರಯಾಣಿಕರಿಗೆ ಹೂಗುಚ್ಛ ನೀಡಿ, ನಂತರ ಸಿಹಿ ಹಂಚಿ, ಮಹಿಳಾ ಪ್ರಯಾಣಿಕರಿಗೆ ಬಸ್ ಟಿಕೇಟ್ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಎಚ್.ವಾಯ್. ಮೇಟಿ, ಸರಕಾರದ ಮಹತ್ವಾಕಾಂಕ್ಷಿ ಯೋಜನೆಗಳಲ್ಲಿ ಶಕ್ತಿ ಯೋಜನೆ



ಮಹತ್ವದ ಯೋಜನೆಯಾಗಿದೆ. ಶಕ್ತಿ ಯೋಜನೆಯಿಂದ 500 ಕೋಟಿ ಜನ ಮಹಿಳೆಯರು ಬಸ್‌ನಲ್ಲಿ ಪ್ರಯಾಣ ಮಾಡಿದ್ದಾರೆ. ಸರಕಾರ ಜಾರಿಗೆ ತಂದಿರುವ ಯೋಜನೆಗಳು ಮುಂದುವರೆಯಲಿವೆ. ಈ ಯೋಜನೆಗೆ ಜೂನ್ 11, 2023 ರಂದು ಮುಖ್ಯಮಂತ್ರಿಗಳು ಚಾಲನೆ ನೀಡಿದ್ದು, ಮಹಿಳೆಯರು ಇದರ ಪ್ರಯೋಜನ ಪಡೆಯುತ್ತಿದ್ದಾ–ರೆ ಎಂದು ತಿಳಿಸಿದರು. ಶಕ್ತಿ ಯೋಜನೆಯ ಅನುಷ್ಠಾನದ ನಂತರ ಜಿಲ್ಲೆಯ ಬಸ್‌ಗಳಲ್ಲಿ ಪ್ರತಿ ದಿನ ಪ್ರಯಾಣಿಸುವ ಪ್ರಯಾಣಿಕರ ಸಂಖ್ಯೆ ಶಕ್ತಿ ಯೋಜನೆಯ ಮುಂಚಿತವಾಗಿ ಇದ್ದ 2.71 ಲಕ್ಷದಿಂದ 3.04 ಲಕ್ಷಕ್ಕೆ ಏರಿಕೆಯಾಗಿದೆ. ಜೂನ್ 11, 2023 ರಿಂದ ಇಲ್ಲಿಯವರೆಗೆ 764 ದಿನಗಳನ್ನು ಪೂರೈಸಿದೆ. ಬಾಗಲಕೋಟೆ ವಿಭಾಗದಲ್ಲಿ 14 ಕೋಟಿ 26 ಲಕ್ಷ 44 ಸಾವಿರ ಮಹಿಳಾ ಪ್ರಯಾಣಿಕರು ಉಚಿತ ಪ್ರಯಾಣದ ಸೌಲಭ್ಯ ಪಡೆದಿದ್ದಾರೆ. ಇದರಿಂದ 462 ಕೋಟಿ 47 ಲಕ್ಷ 77 ಸಾವಿರ ರೂ.ಗಳ ಆದಾಯ ಸಂಗ್ರಹವಾಗಿದೆ ಎಂದರು. ಬಾಗಲಕೋಟೆ ವಿಭಾಗದಲ್ಲಿ ಪ್ರತಿದಿನ ಪ್ರಯಾಣಿಸಿದ ಒಟ್ಟು ಪ್ರಯಾಣಿಕರ ಸರಾಸರಿ ಸಂ–ಖ್ಯೆ 3 ಲಕ್ಷ 3 ಸಾವಿರ ಇದ್ದು, ಒಟ್ಟು ಪ್ರಯಾಣಿಕರಲ್ಲಿ ಮಹಿಳಾ ಪ್ರಯಾಣಿಕರ ಸಂಖ್ಯೆ ಪ್ರತಿದಿನ 1 ಲಕ್ಷ 87 ಸಾವಿರ ಇದೆ. ಒಟ್ಟು ಪ್ರಯಾಣಿಕರಲ್ಲಿ ಶೇ.61 ರಷ್ಟು ಮಹಿಳಾ ಪ್ರಯಾಣಿಕರು ಇದ್ದಾರೆ. ಬಾಗಲಕೋಟೆ ವಿಭಾಗವು ಪ್ರತಿದಿನ ಸರಾಸರಿ 1.10 ಕೋಟಿ ರೂ.ಗಳ ಆದಾಯ ಗಳಿಸುತ್ತಿದೆ. ಒಟ್ಟು ಆದಾಯದಲ್ಲಿ ಶಕ್ತಿ ಯೋಜನೆಯ ಪಾಲು ಶೇ.55 ರಷ್ಟು ಇರುತ್ತದೆ. ಶಕ್ತಿ ಯೋಜನೆ ಪ್ರಾರಂಭವಾದ ನಂತರ ಸಾರಿಗೆ ಆದಾಯದಲ್ಲಿ ಪ್ರತಿದಿನ ಸರಾಸರಿ 30 ಲಕ್ಷದಷ್ಟು ಹೆಚ್ಚಳವಾಗಿರುತ್ತದೆ ಎಂದು ಅವರು ತಿಳಿಸಿದರು. ಕಾರ್ಯಕ್ರಮದಲ್ಲಿ ಗ್ಯಾರಂಟಿ ಯೋಜನೆಯ ಜಿಲ್ಲಾ ಮಟ್ಟದ ಪ್ರಾಧಿಕಾರದ ಅಧ್ಯಕ್ಷ ಎಸ್.ಎಚ್.ತೆಕ್ಕೆನ್ನವರ, ತಾಲೂಕಾ ಮಟ್ಟದ ಪ್ರಾಧಿಕಾರದ ಅಧ್ಯಕ್ಷ ಎಸ್.ಎನ್. ರಾಂಪೂರ, ಜಿಲ್ಲಾಧಿಕಾರಿ ಸಂಗಪ್ಪ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಉಪ ವಿಭಾಗಾಧಿಕಾರಿ ಸಂತೋಷ ಜಗಲಾಸರ, ವಾ.ಕ.ರ.ಸಾ.ಸಂಸ್ಥೆಯ ಜಿಲ್ಲಾ ಸಂಚಾರಿ ಅಧಿಕಾರಿ ಕೆ.ಕೆ.ಲಮಾಣಿ, ಸಹಾಯಕ ಸಂಚಾರ ಅಧೀಕ್ಷಕ ಕಲ್ಲೊಳ್ಳೆಪ್ಪ ಕಳ್ಳೆನ್ನವರ, ಬಾಗಲಕೋಟೆ ಡಿಪೋ ಮ್ಯಾನೇಜರ ಕೃಷ್ಣಪ್ಪ ಚವ್ಹಾಣ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ರಾಷ್ಟ್ರೀಯ ಲೋಕ್ ಅದಾಲತ್‌ದಲ್ಲಿ ಒಟ್ಟು 1,76,324 ಪ್ರಕರಣಗಳು ಇತ್ಯರ್ಥ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.14:ಗೌರವಾನ್ವಿತ ಉಚ್ಛ ನ್ಯಾಯಾಲಯ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಅಡಿಯಲ್ಲಿ (ದಿನಾಂಕ:12–07–2025ರಂದು) ಶನಿವಾರ ಕಲಬುರಗಿ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಜರುಗಿದ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಒಟ್ಟು 1,76,324 ಪ್ರಕರಣಗಳು ಇತ್ಯರ್ಥವಾಗಿದ್ದು, ಅವುಗಳಲ್ಲಿ 15,877 ಪೆಂಡಿಂಗ್ ಪ್ರಕರಣಗಳು ಹಾಗೂ 1,60,447 ವ್ಯಾಜ್ಯಪೂರ್ವ ಪ್ರಕರಣಗಳು ಇತ್ಯರ್ಥಗೊಂಡಿರುತ್ತವೆ ಎಂದು ಕಲಬುರಗಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯಕಾರ್ಯದರ್ಶಿಗಳಾದ ಶ್ರೀನಿವಾಸ್ ನವಲೆ ಅವರು ತಿಳಿಸಿದ್ದಾರೆ.

ಅದೇ ರೀತಿ ಜಿಲ್ಲೆಯಲ್ಲಿ 09 ಪ್ರಕರಣಗಳಲ್ಲಿ ಬೇರ್ಪಡೆಯಾಗಿದ್ದ ಪತಿ ಮತ್ತು ಪತ್ನಿಯರನ್ನು ಒಂದುಗೂಡಿಸಲಾಯಿತು. 10 ವರ್ಷಗಳಿಗಿಂತ ಹೆಚ್ಚಿನ ಅವಧಿಯ 01 ಪ್ರಕರಣ, 05 ವರ್ಷಗಳಿಗಿಂತ ಹೆಚ್ಚಿನ ಅವಧಿಯ 05 ಪ್ರಕರಣಗಳನ್ನು ರಾಜಿ ಮಾಡಿಸಿದ್ದು, ಈ ಮೂಲಕ ಕಲಬುರಗಿ ಜಿಲ್ಲೆಯಲ್ಲಿ ಮೆಗಾ ಲೋಕ್ ಅದಾಲತ್ ಅದ್ಭುತ ಯಶಸ್ಸನ್ನು ಕಂಡಿರುತ್ತದೆ.

ಕಲಬುರಗಿ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಜಿ.ಎಲ್. ಲಕ್ಷ್ಮೀನಾರಾಯಣ ಸೇರಿದಂತೆ ಜಿಲ್ಲೆಯ ಎಲ್ಲಾ ನ್ಯಾಯಾಧೀಶರು, ನ್ಯಾಯವಾದಿಗಳು, ಸಾರ್ವಜನಿಕರು ಹಾಗೂ ಕಕ್ಷಿದಾರರ ಸಹಕಾರದಿಂದ ರಾಷ್ಟ್ರೀಯ ಲೋಕ್ ಅದಾಲತ್ ಮೂಲಕ ಸಿವಿಲ್ ದಾವೆಗಳು, ಮೋಟಾರು ವಾಹನ ಅಪಘಾತ ಪರಿಹಾರ ಪ್ರಕರಣಗಳು, ರಾಜಿಯಾಗಬಹುದಾದ ಕ್ರಿಮಿನಲ್ ಪ್ರಕರಣಗಳು, ಚೆಕ್ ಪ್ರಕರಣಗಳು, ಭೂಸ್ವಾಧೀನ ಪರಿಹಾರ ವಸೂಲಾತಿ ಪ್ರಕರಣಗಳು ಹಾಗೂ ಬ್ಯಾಂಕ್‌ಗಳಿಗೆ ಸಂಬಂಧಿಸಿದ ವ್ಯಾಜ್ಯಪೂರ್ವ ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿದೆ. ಶನಿವಾರ ರಾಜ್ಯದ ಎಲ್ಲಾ ನ್ಯಾಯಾಲಯಗಳಲ್ಲಿ ಈ ರಾಷ್ಟ್ರೀಯ ಲೋಕ್ ಅದಾಲತ್ ಹಮ್ಮಿಕೊಳ್ಳಲಾಗಿತ್ತು.

ಈ ಲೋಕ ಅದಾಲತ್‌ನಲ್ಲಿ ಕಕ್ಷಿದಾರರು, ನ್ಯಾಯಾಧೀಶರು, ಸಂಧಾನಕಾರರು ಹಾಗೂ ಸಂಬಂಧಪಟ್ಟ ನ್ಯಾಯವಾದಿಗಳು ರಾಜೀ ಸಂಧಾನ ಪ್ರಕ್ರಿಯೆಯಲ್ಲಿ ಪಾಲ್ಗೊಂಡಿದ್ದರು.

# ಶಕ್ತಿ ಯೋಜನೆಯಡಿ 500 ಕೋಟಿ ಉಚಿತ ಪ್ರಯಾಣ ಸಾಧನೆ: ರಾಯಚೂರಿನಲ್ಲಿ ಸಿಹಿ ಹಂಚಿ ಸಂಭ್ರಮ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜು.14 : ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಶಕ್ತಿ ಯೋಜನೆಯಡಿ 500 ಕೋಟಿ ಉಚಿತ ಪ್ರಯಾಣ ಸಾಧನೆ ಹಿನ್ನೆಲೆಯಲ್ಲಿ ಜುಲೈ 14ರಂದು ರಾಯಚೂರು ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ಬಸ್‌ಗಳಿಗೆ ಪೂಜಾ ಹಾಗೂ ಪ್ರಯಾಣಿಕರಿಗೆ ಸಿಹಿ ವಿತರಣೆ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮದ ಹಿನ್ನೆಲೆಯಲ್ಲಿ ಸಾರಿಗೆ ಬಸ್ಸುಗಳಿಗೆ ಬಣ್ಣಬಣ್ಣದ ರಿಬ್ಬನ್, ತೆಂಗಿನ ಗರಿಗಳನ್ನು ಕಟ್ಟಿ, ಹೂವಿನ ಹಾರಗಳು ಮತ್ತು ಬಲೂನಗಳನ್ನು ಹಾಕಿ ಸಿಂಗರಿಸಲಾಗಿತ್ತು. ಜುಲೈ 14ರಂದು ರಾಜ್ಯಾದ್ಯಂತ ಎಲ್ಲಾ ಬಸ್ ನಿಲ್ದಾಣಗಳಲ್ಲಿ ಏಕಕಾಲಕ್ಕೆ ನಡೆದಂತೆ ರಾಯಚೂರ ಕೇಂದ್ರ ಬಸ್ ನಿಲ್ದಾಣದಲ್ಲಿ ಸಹ ಸಾರ್ವಜನಿಕರಿಗೆ ಮತ್ತು ಸಾರಿಗೆ ಇಲಾಖೆಯ ಅಧಿಕಾರಿಗಳಿಗೆ ಸಿಹಿ ವಿತರಿಸಿ ಸಂಭ್ರಮಿಸಲಾಯಿತು. ಈ ಕಾರ್ಯಕ್ರಮಕ್ಕೆ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ಸಮಿತಿಯ ಉಪಾಧ್ಯಕ್ಷರಾದ ಹನುಮಂತಪ್ಪ ಜಾಲಿಬೆಂಚಿ, ನಾಗೇಂದ್ರ ಮತಮಾರಿ, ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ಸಾಜೀದ್ ಸಮೀರ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಜಿಲ್ಲಾ ಪಂಚಾಯತ್ ಮುಖ್ಯಲೆಕ್ಕಾಧಿಕಾರಿ ವಿಜಯಶಂಕರ್, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿ ಎಂ.ಎಸ್. ಚಂದ್ರಶೇಖರ, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಜಿ.ಯು.ಹುಡೇದ್, ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನಕುಮಾರ್ ಸಂಗೇಪಾಗ್ ಸೇರಿದಂತೆ ಅನೇಕರು ಕಾರ್ಯಕ್ರಮದಲ್ಲಿ ಭಾಗಿಯಾಗಿ ಸಂತಸ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಗ್ಯಾರಂಟಿ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ ಅವರು ಮಾತನಾಡಿ, ರಾಜ್ಯ ಸರ್ಕಾರವು ಹಿಂದುಳಿದ, ಅಲ್ಪಸಂಖ್ಯಾತರ, ಪರಿಶಿಷ್ಟ ಜಾತಿ ಮತ್ತು ಪಂಗಡ ಸಮುದಾಯ ಸೇರಿದಂತೆ ಅನೇಕ ಹಿಂದುಳಿದ ಸಮುದಾಯಗಳನ್ನು ಗಮನದಲ್ಲಿಟ್ಟುಕೊಂಡು ಅನೇಕ ಯೋಜನೆಗಳನ್ನು ಜಾರಿ ಮಾಡಿ ಅನುಷ್ಠಾನ ಮಾಡುತ್ತಿದೆ. ವಿಶೇಷವಾಗಿ ಕೌಟುಂಬಿಕ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರ ವಹಿಸುವ ಮಹಿಳೆಯರನ್ನು ಗಮನದಲ್ಲಿಟ್ಟುಕೊಂಡು ಗೃಹಲಕ್ಷಿ ?? ಯೋಜನೆ ಸೇರಿದಂತೆ ರಾಜ್ಯ ಸರ್ಕಾರವು ಶಕ್ತಿ ಯೋಜನೆಗಳನ್ನು ಜಾರಿ ಮಾಡಿದೆ. ಈ ಯೋಜನೆಗಳಿಂದ ಮಹಿಳೆಯರು ಆರ್ಥಿಕವಾಗಿ ಸಬಲರಾಗುತ್ತಿದ್ದಾರೆ. ಸಾರಿಗೆ ಬಸ್ಸುಗಳಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣಕ್ಕಾಗಿ ರಾಯಚೂರ ಜಿಲ್ಲೆ ಸೇರಿದಂತೆ ರಾಜ್ಯಾದ್ಯಂತ ಇದುವರೆಗೆ 12,669 ಕೋಟಿ ರೂ. ವಿನಿಯೋಗಿಸಿರುವುದು ದಾಖಲಾರ್ಹ ಸಾಧನೆಯಾಗಿದೆ ಎಂದು ಅವರು ತಿಳಿಸಿದರು. ರಾಯಚೂರ ಜಿಲ್ಲೆಯಲ್ಲಿ ಇದುವರೆಗೆ ದಾಖಲೆಯ ಪ್ರಮಾಣದಲ್ಲಿ ಮಹಿಳಾ ಪ್ರಯಾಣಿಕರು ಪ್ರಯಾಣಿಸಿದ್ದಾರೆ. ಸರಾಸರಿ ಪ್ರತಿ ನಿತ್ಯ 1.16 ಲಕ್ಷ ಮಹಿಳಾ ಪ್ರಯಾಣಿಕರು ಪ್ರಯಾಣಿಸಿದ್ದಾರೆ. ಮಹಿಳಾ ಪ್ರಯಾಣಿಕರು ಪ್ರಯಾಣಿಸಿದ ಸಾರಿಗೆ ಆದಾಯ 353.23 ಕೋಟಿ ರೂ. ಆಗಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಸಾರಿಗೆ ಇಲಾಖೆಯ ಇನ್ನಿತರ ಅಧಿಕಾರಿಗಳು ಮತ್ತು ಸಿಬ್ಬಂದಿ, ವಾಹನ ಚಾಲಕರು, ನಿರ್ವಾಹಕರು, ಸಾರ್ವಜನಿಕರು ಇದ್ದರು.

# ಶಕ್ತಿ ಯೋಜನೆಯಡಿ ರಾಜ್ಯದಲ್ಲಿ 500 ಕೋಟಿ ಉಚಿತ್ ಟಿಕೆಟ್ ವಿತರಣೆ: ಬಸ್‌ಗೆ ವಿಶೇಷ ಪೂಜೆ



ಮಲ್ಲಮ್ಮ ನುಡಿ ವಾರ್ತೆ

ಕುಕನೂರ:ಜು.14:ರಾಜ್ಯಸರ್ಕಾರದ ಶಕ್ತಿ ಯೋಜನೆಯಡಿ ರಾಜ್ಯದಲ್ಲಿ 500 ಕೋಟಿ ಉಚಿತ್ ಬಸ್ ಟಿಕೆಟ್ ವಿತರಿಸಲ್ಪಟ್ಟಿದ್ದು, ಇಷ್ಟೊಂದು ಸಂಖ್ಯೆಯಲ್ಲಿ ಮಹಿಳೆಯರು ಉಚಿತ ಬಸ್ ಪ್ರಯಾಣದ ಸೌಲಭ್ಯವನ್ನು ರಾಜ್ಯದಲ್ಲಿ ಪಡೆದಿರುವುದು ಐತಿಹಾಸಿಕ ಸಾಧನೆಗೆ ಸಾಕ್ಷಿಯಾಗಿದೆ ಎಂದು ಗ್ಯಾರೆಂಟಿ ಅನುಷ್ಠಾನದ ಕುಕನೂರು ತಾಲೂಕ ಅಧ್ಯಕ್ಷ ಸಂಗಮೇಶ ಗುತ್ತಿ ಹೇಳಿದರು.

ಅವರು ಸೋಮವಾರ ಕುಕನೂರ ಬಸ್ ನಿಲ್ದಾಣದಲ್ಲಿ ಶಕ್ತಿ ಯೋಜನೆಯಡಿ ರಾಜ್ಯದಲ್ಲಿ 500 ಕೋಟಿ ಉಚಿತ್ ಟಿಕೆಟ್ ವಿತರಿಸಲ್ಪಟ್ಟಿರುವ ಹಿನ್ನೆಲೆಯಲ್ಲಿ ಕುಕನೂರ ತಾಲೂಕ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಕೊಪ್ಪಳ ವಿಭಾಗ ಕುಕನೂರನಲ್ಲಿ ಹಮ್ಮಿಕೊಂಡಿದ್ದ ಬಸ್‌ಗೆ ಪೂಜೆ ಸಲ್ಲಿಸಿ, ಪ್ರಯಾಣಿಕರಿಗೆ ಸಿಹಿ ಹಂಚುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಶಕ್ತಿ ಯೋಜನೆಯ ಈ ಕಾರ್ಯಕ್ರಮ ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರ ಮತ್ತು ತಾಲ್ಲೂಕು ಕೇಂದ್ರಗಳ ಬಸ್ ನಿಲ್ದಾಣದಲ್ಲಿ ಬಸ್‌ಗೆ ಶಕ್ತಿ ಯೋಜನೆಯಡಿ ರಾಜ್ಯದಲ್ಲಿ 500 ಕೋಟಿ ಮಹಿಳಾ ಪ್ರಯಾಣಿಕರು ಉಚಿತ ಟಿಕೆಟ್‌ಗಳನ್ನು ಪಡೆದು ಪ್ರಯಾಣಿಸಿರುವ ಹಿನ್ನೆಲೆಯಲ್ಲಿ ಕುಕನೂರ ಬಸ್ ನಿಲ್ದಾಣದಲ್ಲಿ ಬಸ್‌ಗೆ ವಿಶೇಷ ಪೂಜೆ ಸಲ್ಲಿಸಿದ ನಂತರ ಬಸ್ ನಿಲ್ದಾಣದಲ್ಲಿದ್ದ ಶಕ್ತಿ ಯೋಜನೆಯ ಲಾಭ ಪಡೆಯುತ್ತಿರುವ ಮಹಿಳಾ ಪ್ರಯಾಣಿಕರಿಗೆ ಸಿಹಿ ಹಂಚಿ ಗಣ್ಯರಿಂದ ಶುಭಾಷಗಳನ್ನು ಕೋರಲಾಯಿತು.

ಈ ಸಂದರ್ಭದಲ್ಲಿ ಗ್ರೇಡ್ ಟು 2 ತಾಶಿಲ್ದಾರರಾದ ಮುರುಳಿದ ರಾವ್ ಕುಲಕರ್ಣಿ, ಆರ್ ಐ ರಂಗನಾಥ ಬಂಡಿ, ಕಲ್ಯಾಣ ಕರ್ನಾಟಕ ನಿಯಂತ್ರಣಾಧಿಕಾರಿ ಸೋಮಶೇಖರ ಜಿ, ಲೆಕ್ಕ ಪತ್ರಅಧಿಕಾರಿ ಶ್ರೀಮತಿ ಜಯಶ್ರೀ, ಕುಕನೂರ ತಾಲ್ಲೂಕು ಗ್ಯಾರಂಟಿ

ಯೋಜನೆಗಳ ಜಿಲ್ಲಾ ಉಪಾಧ್ಯಕ್ಷರಾದ ಕಾಸಿಂಸಾಬ್ ತಳಕಲ್, ರೈಮಾನ್ ಸಾಬ್ ಮಕ್ಕಪ್ಪನವರ್, ವೀರಯ್ಯ ತೋಂಟದಾರ್ಯಮಠ, ಸಿದ್ದಯ್ಯ ಕಳ್ಳಿಮಠ, ರಾಮಣ್ಣ ಬಂಕದಮನಿ, ಪ್ರಶಾಂತ್ ಆರ್ ಬೆರಳಿನ್, ಮಂಜುನಾಥಯಡೆಯಾಪುರ, ಶ್ರೀಧರ ದೇಸಾಯಿ, ಹೊನ್ನಪ್ಪ ಮರಡಿ ,ಮುತ್ತಣ್ಣ ರಾಜೂರ, ಹಾಗೂ ಇತರರು ಉಪಸ್ಥಿತರಿದ್ದರು.

# ಪಂಚ ಗ್ಯಾರಂಟಿಗಳಲ್ಲಿಯೇ ಅತಿ ಹೆಚ್ಚು ಜನಪ್ರಿಯಗೊಂಡ ಶಕ್ತಿ ಯೋಜನೆ: ಜಿಪಂ ಸಿಇಓ ಲವೀಶ್ ಒರಡಿಯಾ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜು:14:ರಾಜ್ಯಸರ್ಕಾರದ ಮಹತ್ವದ ಐದು ಗ್ಯಾರಂಟಿಗಳ ಪೈಕಿ ಅತಿ ಹೆಚ್ಚು ಜನಪ್ರಿಯ ಮತ್ತು ಜನಾನುರಾಗಿಯಾದ ಯೋಜನೆ ಎಂದರೆ ಶಕ್ತಿ ಯೋಜನೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಲವೀಶ ಓರಡಿಯಾ ಹೇಳಿದರು.

ರಾಜ್ಯಸರ್ಕಾರದ ಮಹತ್ವಾಕಾಂಕ್ಷಿ ಶಕ್ತಿ ಯೋಜನೆಯಡಿ 500 ಕೋಟಿ ಮಹಿಳಾ ಪ್ರಯಾಣಿಕರು ಪ್ರಯಾಣ ಮಾಡಿದ ಸಂಭ್ರಮದ ಹಿನ್ನೆಯಲ್ಲಿ ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ಸೋಮವಾರ ಬಸ್ ಗೆ ಪೂಜೆ ಮಾಡಿ ಟಿಕೇಟ್ ವಿತರಣೆ ಮಾಡಿ ಮಾತನಾಡಿದರು. ಈ ಯೋಜನೆಯಿಂದ ಲಕ್ಷಾಂತರ ಮಹಿಳೆಯರು ಸ್ವತಂತ್ರವಾಗಿ ರಾಜ್ಯದ ಎಲ್ಲಡೆ ಉಚಿತ ಪ್ರಯಾಣಿಸಲು ಅನುಕೂಲವಾಗಿದೆ.

ದೇಶ ಸುತ್ತು , ಕೋಶ ಓದು ಎಂಬ ಹಿನ್ನಲೆಯಲ್ಲಿ ಮಹಿಳೆಯರು ರಾಜ್ಯ ಸುತ್ತಿ ನಮ್ಮ ಐತಿಹಾಸಿಕ ಪರಂಪರೆ, ಇತಿಹಾಸ, ಸಂಸ್ಕೃತಿ ನೋಡಿ ತಿಳಿದುಕೊಂಡಿದ್ದಾರೆಂದು ಓರಡಿಯಾ ಸಂತಸ ವ್ಯಕ್ತಪಡಿಸಿದರು.

ದೇವಸ್ಥಾನ, ಮದುವೆ, ವ್ಯಾಪಾರ ಹೀಗೆ ಅನೇಕ ಕಡೆಗಳಲ್ಲಿ ಮಹಿಳೆಯರೇ ಅಧಿಕ ಸಂಖ್ಯೆಯಲ್ಲಿ ಸಂಚರಿಸುವ ಮೂಲಕ ಹೊಸತನವನ್ನು ಅರಿತು–ಕೊಂಡಿದ್ದಾರೆಂದು ಲವೀಶ್




ವಿವರಿಸಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷ ಶರಣಿಕ ಕುಮಾರ ದೋಖಾ ಮಾತನಾಡಿ, ಎರಡು ವರ್ಷದಲ್ಲಿ ನಮ್ಮ ಪಂಚ ಗ್ಯಾರಂಟಿ ಯೋಜನೆಗಳು ಸಮರ್ಪಕವಾಗಿ ಜಾರಿ ಮಾಡಲಾಗಿದೆ ಎಂದರು.

ಇಲ್ಲಿಯವರೆಗೂ ರಾಜ್ಯದ ಎಲ್ಲಡೆ ಐದು ನೂರು ಕೋಟಿ ಮಹಿಳೆಯರು ಉಚಿತ ಪ್ರಯಾಣ ಮಾಡುವ ಮೂಲಕ ಇದೊಂದು ಯಶಸ್ವಿಯಾಗಿಯೋಜನೆಯಾಗಿಸಿದ್ದಾರೆ ಎಂದರು.

ಪಂಚ ಗ್ಯಾರಂಟಿಗಳ ಎಲ್ಲ ಯೋಜನೆಗಳು ಶೇ.90 ರಷ್ಟು ಸಾಧನೆ ಮಾಡಿರುವುದಕ್ಕೆ ಹರ್ಷ ವ್ಯಕ್ತಪಡಿಸಿದರು.

ಜಿಲ್ಲೆಯಲ್ಲಿ ಈ ಎಲ್ಲ ಯೋಜನೆಗಳು ಅಧಿಕ ಪ್ರಮಾಣದಲ್ಲಿ ಜಾರಿ ಮಾಡಲಾಗಿದೆ ಎಂದು ದೋಖಾ ಹೇಳಿದರು.

ಮಾಜಿ ಕೇಂದ್ರ ಸಚಿವ ಮಲ್ಲಿಕಾರ್ಜುನ ಖರ್ಗೆ, ಸಿಎಂ ಸಿದ್ದರಾಮಯ್ಯ, ಡಿಸಿಎಂ ಶಿವಕುಮಾರ ಅವರ ಕಾರ್ಯವೈಖರಿಯಿಂದ ಮತ್ತು ಸಹಕಾರದಿಂದ ಯಶ್ವಸಿಯಾಗಿದೆ ಎಂದರು.

ಕೆಕೆಆರ್ ಟಿಸಿ ವಿಭಾಗಿಯ ನಿಯಂತ್ರಣಾಧಿಕಾರಿ ಸುನೀಲಕುಮಾರ ಚಂದರಗಿ ಮಾತನಾಡಿ, ಯಾದಗಿರಿ ವಿಭಾಗದಿಂದ ನಮ್ಮ ಬಸ್ಸುಗಳಲ್ಲಿ ಈ ಯೋಜನೆ ಆರಂಭಗೊಂಡಾಗಿನಿಂದ ಇಲ್ಲಿಯವರೆಗೂ ಸುಮಾರು 5 ಕೋಟಿ 43 ಲಕ್ಷ ಮಹಿಳಾ ಪ್ರಯಾಣಿಕರು ಸಂಚಾರ ಮಾಡಿದ್ದಾರೆ ಎಂದರು.

ಈ ಯೋಜನೆಯಿಂದ ಸುಮಾರು 191 ಕೋಟಿ ರೂ.ಮೌಲ್ಯದ ಟಿಕೆಟ್ ಖರ್ಚಾಗಿವೆ ಎಂದು ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಬಸರೆಡ್ಡಿ ಅನಪೂರ್, ಮುಖಂಡರಾದ ಪಂಪನಗೌಡ, ಬಸ್ಸಗೌಡ ಬಿಳ್ಹಾರ್, ಚಿದಾನಂದಪ್ಪ ಕಾಳೆಬೆಳಗುಂದಿ, ಜಿಲ್ಲಾ ಪಂಚಾಯತ ಕಾರ್ಯದರ್ಶಿ, ವಿಜಯಕುಮಾರ್ ಮಡ್ಡೆ, ವಿಭಾಗಿಯ ಸಂಚಾರಾಧಿಕಾರಿ

ವಿ.ಆರ್ ರೆಡ್ಡಿ, ವಿಭಾಗೀಯ ತಾಂತ್ರಿಕ ಅಧಿಕಾರಿ ಪ್ರಶಾಂತ ಸುರಪುರಕರ್, ಘಟಕ ವ್ಯವಸ್ಥಾಪಕ ಶಂಶಾಕ ಬಾಬು, ಯಾದಗಿರಿ

ವಿಭಾಗದ ಸಾರಿಗೆ ನೌಕರರ ಸಂಘದ ಅಧ್ಯಕ್ಷ ದೇವಿಂದ್ರಪ್ಪ ಮ್ಯಾಗೇರಿ, ಶ್ಯಾಮಸನ್ ಮಾಳಿಕೇರಿ, ಯಾದಗಿರಿ ತಾಲೂಕಿನ ಶಕ್ತಿ ಯೋಜನೆ ತಾಲೂಕಿನ ಸದಸ್ಯರಾದ ಅರ್ಜುನ ಪವಾರ್, ಶಿವು ಕೊಲಿವಾಡ್, ಮಹೇಶ ಬೋಜ್ಜಿ, ಮಲ್ಲಿಕಾರ್ಜುನ ಈಟೆ, ಮಹಿಳಾ ಮುಖಂಡರಾದ ನೀಲಾಫರ್ ಬಾದಲ್, ಪದ್ಮಾವತಿ ಜಿ, ಸಿದ್ದಲಿಂಗಮ್ಮ ದದ್ದಲ್, ಮಲ್ಲಮ್ಮ ಕೋಮಾರ್, ನೀಲಮ್ಮ ಮುಳಾಗಸಿ, ಚಂದ್ರಕಲಾ ಮನಿಯಪ್ಪನೋರ್ ಇದ್ದರು.

# ಗ್ಯಾರಂಟಿ ಯೋಜನೆಗಳು ನಿಲ್ಲಲ್ಲ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಜು. 14: ರಾಜ್ಯದ ಕಾಂಗ್ರೆಸ್ ಸರ್ಕಾರ ಜಾರಿಗೊಳಿಸಿರುವ ಗ್ಯಾರಂಟಿ ಯೋಜನೆಗಳು ಯಾವುದೇ ಕಾರಣಕ್ಕೂ ನಿಲ್ಲುವುದಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದರು ಮಹಿಳೆಯರ ಉಚಿತ ಬಸ್ ಪ್ರಯಾಣದ ಶಕ್ತಿ ಯೋಜನೆಯಡಿ 500 ಕೋಟಿ ಉಚಿತ ಪ್ರಯಾಣದ ಟಿಕೆಟ್‌ನ್ನು ಬೆಂಗಳೂರಿನಲ್ಲಿಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಜತೆ–ಗೂಡಿ ಮಹಿಳಾ ಪ್ರಯಾಣಿಕರೊಬ್ಬರಿಗೆ ವಿತರಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಕ್ತಿ ಯೋಜನೆಯಡಿ ಮಹಿಳೆಯರ ಉಚಿತ ಪ್ರಯಾಣ 500 ಕೋಟಿ ಟಿಕೆಟ್ ಆಗಿದೆ. ಶಕ್ತಿ ಯೋಜನೆ ಇಡೀ ದೇಶಕ್ಕೇ ಮಾದರಿಯಾಗಿದೆ ಎಂದರು.

ಯಾವುದೇ ಕಾರಣಕ್ಕೂ ನಮ್ಮ ಗ್ಯಾರಂಟಿ ಯೋಜನೆಗಳು ನಿಲ್ಲುವುದಿಲ್ಲ. ಎಲ್ಲಿಯವರೆಗೂ ದೇವರು ಶಕ್ತಿ, ಜನ ಅಧಿಕಾರ ನೀಡುತ್ತಾರೋ ಅಲ್ಲಿಯತನಕ ಯೋಜನೆಗಳು ಮುಂದುವರೆಯುತ್ತವೆ ಎಂದರು.

ಕಾಂಗ್ರೆಸ್ ಪಕ್ಷ ದೇಶದಲ್ಲಿ ಹಲವಾರು ಕಲ್ಯಾಣ ಕಾರ್ಯಕ್ರಮಗಳನ್ನು ಜಾರಿ ಮಾಡಿದೆ. ನರೇಗಾ, ಪಿಂಚಣಿ ಯೋಜನೆ, ಬ್ಯಾಂಕ್ ರಾಷ್ಟ್ರೀಕರಣ, ಆಹಾರ ಭದ್ರತೆ ಹೀಗೆ ನಮ್ಮ ಯೋಜನೆಗಳ ಪಟ್ಟಿಯೇ ದೊಡ್ಡದಿದೆ. ನಮ್ಮ ಯೋಜನೆಗಳನ್ನು ಬಿಜೆಪಿ ಸೇರಿದಂತೆ ಯಾರಿಂದಲೂ ನಿಲ್ಲಿಸಲು ಸಾಧ್ಯವಿಲ್ಲ. ಈ ಯೋಜನೆಗಳು ಜನರ ಹೃದಯ ಹಾಗೂ ಬದುಕಿಗೆ ಬೇಕಾದಂತಹ ಕಾರ್ಯಕ್ರಮಗಳು. ಇವು ನಿರಂತರವಾಗಿ ಜಾರಿಯಲ್ಲಿರುತ್ತವೆ ಎಂದರು.

ಶಕ್ತಿ ಯೋಜನೆಯಿಂದ ಮಹಿಳೆಯರಿಗೆ ಅನುಕೂಲವಾಗಿದೆ. ರಾಜ್ಯದ ಉದ್ದಗಲಕ್ಕೂ ಉಚಿತವಾಗಿ ಹಣ ಖರ್ಚು ಮಾಡದೆ ತಮ್ಮ ಪ್ರೀತಿ–ಪಾತ್ರರ ಮನೆಗಳಿಗ ಮಹಿಳೆಯರು ಹೋಗಬಹುದು. ಪ್ರತಿ ಮಹಿಳೆಗೆ ಶಕ್ತಿ ಯೋಜನೆಯಿಂದ ಪ್ರತಿ ತಿಂಗಳು 1 ಸಾವಿರ ರೂ.ಗಳಿಗೂ ಹೆಚ್ಚು ಹಣ ಉಳಿತಾಯವಾಗುತ್ತದೆ ಎಂದರು.

ನಮ್ಮ ಯೋಜನೆ ಬಗ್ಗೆ ಯಾರು ಏಷ್ಟೇ ಟೀಕೆ ಮಾಡಲಿ ಟೀಕೆಗಳು ಸಾಯುತ್ತವೆ. ನಮ್ಮ ಕೆಲಸಗಳು ಶಾಶ್ವತವಾಗಿ ಉಳಿಯತ್ತವೆ. ನಾವು ಕೊಟ್ಟ ಮಾತನ್ನು ಉಳಿಸಿಕೊಂಡಿರುವ ಕಾರಣಕ್ಕೆ ನಮಗೆ ಹೆಚ್ಚು ಸಂತೋಷವಾಗಿದೆ. ಈ ಯೋಜನೆಗಳು ಜಾರಿಯಾಗಲು ಜನ ನಮಗೆ ಶಕ್ತಿ ನೀಡಿದ್ದೆ ಕಾರಣ. ಜನಬಲ ನಮಗಿದೆ ಎಂದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.